24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 80 | ನವದೆಹಲಿ | ಬೆಲೆ ₹10 | ಸೆಪ್ಟೆಂಬರ್ 16 2026 ಬುಧವಾರ




**ಅತ್ಯಂತ ಸಾಮಾನ್ಯ ಬಡ ಕುಟುಂಬದಲ್ಲಿ ಜನಿಸಿದ ನರೇಂದ್ರ ಮೋದಿ ಅವರ ಜೀವನ ಮತ್ತು ಸಾರ್ವಜನಿಕ ಜೀವನ, ನಿಸ್ವಾರ್ಥ, ಸ್ವಚ್ಛ, ಶುದ್ಧ, ದಕ್ಷ ಆಡಳಿತದ ಪರಿಣಾಮವಾಗಿ 2014ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷದ ಪ್ರಧಾನಿ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಲಾಯಿತು. ಈ ಚುನಾವಣೆಯಲ್ಲಿ ಇತಿಹಾಸದಲ್ಲಿ ಪ್ರಥಮ ಬಾರಿಗೆ ಮೋದಿ ಅವರ ನೇತೃತ್ವದಲ್ಲಿ ಭಾರತೀಯ ಜನತಾ ಪಕ್ಷ ಕೇಂದ್ರದಲ್ಲಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಯಿತು. ನರೇಂದ್ರ ಮೋದಿಯವರು ಪ್ರಧಾನಿಯಗಿ ಅಧಿಕಾರ ವಹಿಸಿಕೊಂಡ ನಂತರ ಸತತ ಮೂರನೇ ಬಾರಿಗೆ ಪ್ರಧಾನಿ ಹುದ್ದೆ ಅಲಂಕರಿಸಿದ ವ್ಯಕ್ತಿ ಎಂಬ ಕೀರ್ತಿಗೆ ಪಾತ್ರರಾದವರು. ಅವರ ಈ ಸುದೀರ್ಘ ಆಡಳಿತಾವಧಿಯ ಪ್ರಮುಖ ಸಾಧನೆಗಳು ಗಣನೀಯವಾಗಿವೆ.**






ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಬದುಕಿಗೆ 25 ವರ್ಷ ತುಂಬಿದೆ. ಈ ಸಂದರ್ಭದಲ್ಲಿ ದೇಶದ ಜನತೆಗೆ ಕೃತಜ್ಞತೆ ಸಲ್ಲಿಸಲು, ಮೋದಿ ಅವರ ಜನ್ಮದಿನವಾದ ಸೆ. 17ರಿಂದ ಬಿಜೆಪಿ ವತಿಯಿಂದ ದೇಶದಾದ್ಯಂತ ಒಂದು ತಿಂಗಳು 'ಆಶೀರ್ವಾದದ ದೀಪ' ಸಂಕಲ್ಪ ಸೇವಾ ಅಭಿಯಾನ ಕಾರ್ಯಕ್ರಮ ರೂಪಿಸಲಾಗಿದೆ.

● ಈ ಸಂದರ್ಭದಲ್ಲಿ ರ‍್ಯಾಲಿಗಳು, ಸಂವಾದ ಮತ್ತು ಸರ್ಕಾರದ ಸಾಧನೆಗಳ ಕಾರ್ಯಕ್ರಮಗಳು ಹಾಗೂ ಉತ್ತಮ ಆಡಳಿತ ಕುರಿತು ಜನಸಾಮಾನ್ಯರೊಂದಿಗೆ ಸಮಾಲೋಚನೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

● ಸೆಪ್ಟೆಂಬರ್ 17 ರಂದು ದೇಶಾದ್ಯಂತ ರಕ್ತದಾನ ಶಿಬಿರಗಳ ಆಯೋಜನೆ ಮತ್ತು ಅಂದು ಸಂಜೆ ಜನರು ತಮ್ಮ ಮನೆಗಳಲ್ಲಿ 'ಆಶೀರ್ವಾದ ದೀಪ' ಕಾರ್ಯಕ್ರಮದಡಿ ದೀಪಗಳನ್ನು ಬೆಳಗಿಸಲಿದ್ದಾರೆ. ಈ ಮೂಲಕ ಕಳೆದ 25 ವರ್ಷಗಳಲ್ಲಿ ಪ್ರಧಾನಿ ಮೋದಿ ಸಲ್ಲಿಸಿದ ಸಾರ್ವಜನಿಕ ಸೇವೆಗೆ ಕೃತಜ್ಞತೆ ಸಲ್ಲಿಸುವುದು ಈ ಕಾರ್ಯಕ್ರಮದ ಸ್ಪಷ್ಟ ಉದ್ದೇಶವಾಗಿದೆ.

**ವಿಕಸಿತ ಭಾರತಕ್ಕೆ ಅಡಿಪಾಯ- ಸ್ವಚ್ಛ ಶುದ್ಧ ಆಡಳಿತದ ದಾಖಲೆ**

● ಮೋದಿ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಪ್ರತಿಯೊಬ್ಬ ಫಲಾನುಭವಿಯೂ ಸಹ ಪ್ರಧಾನಮಂತ್ರಿಯವರಿಗೆ ತಮ್ಮ ಆಶೀರ್ವಾದ ಮತ್ತು ಕೃತಜ್ಞತೆಯನ್ನು ವ್ಯಕ್ತಪಡಿಸಲು ತಮ್ಮ ಮನೆಯಲ್ಲಿ ದೀಪವನ್ನು ಬೆಳಗಿಸಲಿದ್ದಾರೆ.

● ಅಕ್ಟೋಬರ್ 7 ರಂದು ಪ್ರಧಾನಿ ಮೋದಿ ಅವರು ಸರ್ಕಾರದ ಮುಖ್ಯಸ್ಥರಾಗಿ ಎರಡು ವರ್ಷ ಪೂರೈಸುವ ಸಂದರ್ಭದಲ್ಲಿ ಬಿಜೆಪಿ 'ಸೇವಾಜ್ಯೋತಿ ಕಲಶಯಾತ್ರೆ' ಸಹ ಬಿಜೆಪಿ ಆಯೋಜಿಸಿದೆ. ಈ ಕಾರ್ಯಕ್ರಮದ ಭಾಗವಾಗಿ ದೇಶಾದ್ಯಂತ ಬೈಕ್ ರ‍್ಯಾಲಿ ಮತ್ತು ಪಾದಯಾತ್ರೆಗಳು ನಡೆಯಲಿವೆ. ಜನರು ಒಗ್ಗೂಡಿ 'ವಿಕಸಿತ ಭಾರತ' ನಿರ್ಮಿಸುವ ಸಂಕಲ್ಪವನ್ನು ಕೈಗೊಳ್ಳುವರು.

● 'ಸೇವಾ ಸಂಕಲ್ಪ ಅಭಿಯಾನ' ಸೆಪ್ಟೆಂಬರ್ 17 ರಿಂದ ಅಕ್ಟೋಬರ್ 17 ರವರೆಗೆ ಮುಂದುವರಿಯಲಿದ್ದು, ಈ ಅವಧಿಯಲ್ಲಿ ಪಕ್ಷದ ಕಾರ್ಯಕರ್ತರು ಮತ್ತು ಸಾರ್ವಜನಿಕರ ಸಹಭಾಗಿತ್ವದಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ, ಪ್ರತಿವರ್ಷದಂತೆ ಈ ಬಾರಿಯೂ ಅಕ್ಟೋಬರ್ 2 ರಂದು ಸ್ವಚ್ಛತಾ ಅಭಿಯಾನ ನಡೆಯಲಿದೆ.

● ಪಕ್ಷದ ಯುವ ಕಾರ್ಯಕರ್ತರು ವಡೋದರಾದಿಂದ ವಾರಾಣಸಿಯವರೆಗೆ 20 ತಂಡಗಳಲ್ಲಿ 1,000 ಯುವಕರನ್ನು ಒಳಗೊಂಡ ಯಾತ್ರೆಯನ್ನು ಕೈಗೊಳ್ಳುವರು. ಅಲ್ಲದೆ, ಪಕ್ಷದ ನಾಯಕರ ನೇತೃತ್ವದಲ್ಲಿ ದೇಶಾದ್ಯಂತ ವಿವಿಧ ಜಿಲ್ಲೆಗಳಲ್ಲಿ ಚುನಾಯಿತ ಪಂಚಾಯತ್ ಪ್ರತಿನಿಧಿಗಳು ಮತ್ತು ಇತರರೊಂದಿಗೆ 'ಸುಶಾಸನ ಸಂವಾದ' (ಉತ್ತಮ ಆಡಳಿತ ಕುರಿತ ಸಂವಾದ) ಕಾರ್ಯಕ್ರಮಗಳನ್ನೂ ನಡೆಸಲಿದೆ.

### ಸಂಘಟನೆಯಿಂದ ಸಿಎಂ ಹುದ್ದೆಗೆ

● ಪಕ್ಷದ ಸಂಘಟನೆಯಲ್ಲಿ ತೊಡಗಿಸಿಕೊಂಡಿದ್ದ ನರೇಂದ್ರ ಮೋದಿ ಅವರನ್ನು ಭೂಕಂಪದಿಂದ ತತ್ತರಿಸಿದ್ದ ಸಂದರ್ಭದಲ್ಲಿ ಗುಜರಾತ್ ಮುಖ್ಯಮಂತ್ರಿಯಾಗಿ ನೇಮಕಗೊಂಡರು. ಅನಂತರ ರಾಜಕೋಟ್–2 ಕ್ಷೇತ್ರಕ್ಕೆ ನಡೆದ ಉಪಚುನಾವಣೆಯಲ್ಲಿ ಆಯ್ಕೆಯಾಗಿ ಗುಜರಾತ್ ವಿಧಾನಸಭೆ ಪ್ರವೇಶಿಸಿದರು.

3ನೇ ಪುಟಕ್ಕೆ...

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಸೆಪ್ಟೆಂಬರ್ 16, 2026, ಬುಧವಾರ

## ಒಳಪುಟಗಳಲ್ಲಿ

ವಿಜಯದಶಮಿಯಿಂದ ಭ್ರಷ್ಟರ ವಿರುದ್ಧ ಯುದ್ಧ ಎಚ್.ಡಿ. ಕುಮಾರಸ್ವಾಮಿ ಗುಡುಗು-ಪು.4

ಮಸೀದಿ ರಸ್ತೆಯಲ್ಲಿ ಮೆರವಣಿಗೆ ಮಾಡಬೇಡಿ ಎಂದು ಪೊಲೀಸರು ಹೇಳಿದ್ದರಲ್ಲಿ ತಪ್ಪೇನಿದೆ?- ಪು.5

ಅದ್ದೂರಿ ಸಾಂಸ್ಕೃತಿಕ, ಸಂಗೀತ, ನೃತ್ಯ, ಹಾಸ್ಯ, ಧ್ವನಿ-ಬೆಳಕು ಹಾಗೂ ಡ್ರೋನ್ ಪ್ರದರ್ಶನಕ್ಕೆ ಸಿದ್ಧತೆ- ಪು.6

# ನಾಯಕನಾದವನಿಗೆ ಅಡಿಗಡಿಗೂ ಅಡಚಣೆ: ಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಸೆ:15: ನಾಯಕನಾದವನಿಗೆ ಅಡಿಗಡಿಗೂ ಅಡಚಣೆಗಳೇ ಜಾಸ್ತಿ. ನಾನು ಏಳನೇ ತರಗತಿಯಿಂದ ಶಾಸಕನಾಗುವವರೆಗೂ ಅನೇಕ ಅಡಚಣೆಗಳನ್ನು ಎದುರಿಸಿ ಈಗ ಮುಖ್ಯಮಂತ್ರಿ ಸ್ಥಾನದಲ್ಲಿ ಕುಳಿತಿದ್ದೇನೆ. ಯುವಕರು ನಾಯಕರಾಗಲು ಮುಂದೆ ಬರಬೇಕು. ನಾಯಕನಾದವನು ನಾಯಕರನ್ನು ಸೃಷ್ಟಿಸಬೇಕು ಎಂದು ಸಿಎಂ ಡಿ.ಕೆ. ಶಿವಕುಮಾರ್ ಅಭಿಪ್ರಾಯಪಟ್ಟರು.**

ವಿಧಾನಸೌಧದ ಬಾಂಕ್ವೆಟ್ ಹಾಲ್‌ನಲ್ಲಿ ಮಂಗಳವಾರ ನಡೆದ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ಏಳನೇ ತರಗತಿ ಶಾಲಾ ಚುನಾವಣೆ, ಕಾಲೇಜು ಚುನಾವಣೆಗಳಲ್ಲೂ ನನಗೆ ತಕ್ಕ ನ್ಯಾಯ ಸಿಗಲಿಲ್ಲ. ಆನಂತರವೂ ವಿದ್ಯಾರ್ಥಿ ಕಾಂಗ್ರೆಸ್ ಚುನಾವಣೆಯ ಟಿಕೆಟ್ ತಪ್ಪಿಸಲಾಯಿತು. ಬಳಿಕ ಪದವಿ ಓದುವಾಗ ದೇವೇಗೌಡರ ವಿರುದ್ಧ ಸ್ಪರ್ಧಿಸುವ ಅವಕಾಶ ದೊರೆಯಿತು. ಆ ಚುನಾವಣೆಯಲ್ಲಿ ಸೋತೆ. ನಂತರ ವಿಧಾನಸಭೆ ಚುನಾವಣೆ ಗೆಲುವು ಕಂಡೆ. ಅಲ್ಲಿಂದ ಇಲ್ಲಿಯವರೆಗೆ ಪ್ರಯಾಣ ಬೆಳೆಸಿದ್ದೇನೆ ಎಂದು ಹೇಳಿದರು.

**ಯುವ ಸಂಸತ್ತು ನಿರ್ಮಾಣ ಮಾಡುವ ಆಶಯ:** ಯುವ ಸಂಸತ್ತು ನಿರ್ಮಾಣ ಮಾಡುವ ಆಶಯದಿಂದ ಶಾಲಾ, ಕಾಲೇಜುಗಳಲ್ಲಿ ಮಾದರಿ ಸಂಸತ್ ನಡೆಸಲಾಗುವುದು. ಇದು ಬಸವಣ್ಣನವರ ಕಾಲದ ಅನುಭವ ಮಂಟಪದ ಚಿಂತನೆಗಳನ್ನು ಒಳಡಿದೆ. ವಿಶ್ವಕ್ಕೆ ಮೊದಲ ಸಂಸತ್ತು ಎಂದು ಖ್ಯಾತಿ ಪಡೆದಿರುವ ಅನುಭವ ಮಂಟಪದ ತಿಳಿವಳಿಕೆ ಈ ಮೂಲಕ ನೀಡಲಾಗುವುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.




### ತಾಲೂಕಿಗೊಂದು ಕಾನೂನು ಬ್ಯಾಂಕ್

ಪ್ರತಿ ತಾಲೂಕಿನಲ್ಲಿ ಮಾರ್ಗದರ್ಶನ ನೀಡಲು ಕಾನೂನು ತಂಡ ಅಗತ್ಯವಿದೆ ಎಂದು ರಾಹುಲ್ ಗಾಂಧಿ ಹೇಳಿದ್ದರು. ಆದ ಕಾರಣಕ್ಕೆ ಪಕ್ಷದಿಂದ ಕಾನೂನು ಬ್ಯಾಂಕ್ ತೆರೆಯಲು ಮುಂದಾಗಿದ್ದೇವೆ. ಎಸ್‌ಐಆರ್ ನಿಂದ ಒಂದು ಕೋಟಿ ಜನ ಮತದಾನದ ಹಕ್ಕು ಕಳೆದುಕೊಳ್ಳುವ ಪರಿಸ್ಥಿತಿ ಬಂದೊದಗಿದೆ. 47 ಲಕ್ಷ ಜನರಿಗೆ ಕಾಯಂ ನಿವಾಸ ಪತ್ರ ಹಾಗೂ ಆದಾಯ ಪತ್ರ ಒದಗಿಸಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೆ ವ್ಯವಸ್ಥೆ ಮಾಡಲಾಗುತ್ತಿದೆ. ಮತದಾನದ ಹಕ್ಕನ್ನು ಯಾರೂ ಕಳೆದುಕೊಳ್ಳಬಾರದು ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

**ಪ್ರಜಾಪ್ರಭುತ್ವ ಭಾರತದ ಆತ್ಮ:** ಪ್ರಜಾಪ್ರಭುತ್ವ ಭಾರತದ ಆತ್ಮ. ಪ್ರಜೆಗಳೇ ಇಲ್ಲಿ ಪ್ರಭುಗಳು. ಭಾರತ ವಿಶ್ವಕ್ಕೆ ಪ್ರಜಾಪ್ರಭುತ್ವದ ಮಾದರಿಯನ್ನು ಬಸವಣ್ಣನವರ ಅನುಭವ ಮಂಟಪದ ಇದಕ್ಕೆ ಮೂಲ. ನಾನು ಮುಖ್ಯಮಂತ್ರಿ ಆದ ಮೂರು ದಿನಗಳಲ್ಲೇ ಅನುಭವ ಮಂಟಪಕ್ಕೆ ಭೇಟಿ ಕೊಟ್ಟು ಅಲ್ಲಿಂದ ಸಿಎಂ ಪದವಿಯ ಪಯಣ ಆರಂಭಿಸಿದೆ. ಜಾತಿ, ಲಿಂಗ, ತಾರತಮ್ಯಗಳು ಇಲ್ಲದೆ ಎಲ್ಲರಿಗೂ ಅವಕಾಶ ನೀಡಿದ್ದನ್ನು ಇತಿಹಾಸದ ಪುಟಗಳ ಮೂಲಕ ನಾವು ಕಲಿತಿದ್ದೇವೆ. ಪ್ರಜಾಪ್ರಭುತ್ವದ ಆಶಯಗಳು ಶಾಶ್ವತವಾಗಿರಲಿ" ಎಂದು ಹೇಳಿದರು."ಪ್ರಜಾಪ್ರಭುತ್ವ ಕೇವಲ ಮತದಾನಕ್ಕೆ ಸೀಮಿತವಲ್ಲ. ಪ್ರಜಾಪ್ರಭುತ್ವ ಎಂದಾಗ ಚುನಾವಣೆ,ಮತದಾನ ಪಂಚಾಯಿತಿಯಿಂದ ಸಂಸತ್ತಿನವರೆಗೆನಾಯಕರ ಆಯ್ಕೆ ಮಾತ್ರ ಪ್ರಜಾಪ್ರಭುತ್ವವಲ್ಲ. ಘನತೆ, ಗೌರವ ಮತ್ತು ಬದುಕುವ ಹಕ್ಕು ನೀಡುವುದು ನೈಜ ಪ್ರಜಾಪ್ರಭುತ್ವ" ಎಂದರು.

### ಜನರು ಸರ್ಕಾರಕ್ಕೆ ಹೆದರಿದರೆ ಅದು ಸರ್ವಾಧಿಕಾರ

ಜನರು ಸರ್ಕಾರಕ್ಕೆ ಹೆದರಿದರೆ ಅದು ಸರ್ವಾಧಿಕಾರ. ಸರ್ಕಾರ ಜನರನ್ನು ಗೌರವಿಸಿದಾಗ ಪ್ರಜಾಪ್ರಭುತ್ವವಾಗುತ್ತದೆ. ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂದು ಹಿರಿಯರು ನಮಗೆ ಮಾರ್ಗದರ್ಶನ ಮಾಡಿದ್ದಾರೆ. ಭಾರತದ ಪ್ರಜಾಪ್ರಭುತ್ವವನ್ನು ಉಳಿಸಿಕೊಳ್ಳಲು ಬ್ರಿಟಿಷರ ವಿರುದ್ಧ ಹೋರಾಡಿದ್ದು ಕಾಂಗ್ರೆಸ್ ಪಕ್ಷ . ಕಾಂಗ್ರೆಸ್‌ನ ಇತಿಹಾಸ ದೇಶ ಇತಿಹಾಸ. ದೇಶಕ್ಕೆ ಸ್ವಾತಂತ್ರ್ಯ ಹಾಗೂ ಪ್ರಜಾಪ್ರಭುತ್ವ ನೀಡಿದ್ದು ಕಾಂಗ್ರೆಸ್ ಪಕ್ಷ. ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ಕಾಂಗ್ರೆಸ್ ಕೊಡುಗೆ. ಪ್ರಜಾಪ್ರಭುತ್ವದ ಮೇಲೆ ಬದ್ಧತೆ ಇರುವವರು ಮಾತ್ರ ಧೈರ್ಯವಾಗಿ ಮಾತನಾಡಲು ಸಾಧ್ಯ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## ಮೋದಿ ಜನ್ಮದಿನ ಹಿನ್ನೆಲೆ ನಾಳೆಯಿಂದ ಒಂದು ತಿಂಗಳು ಸೇವಾ ಸಂಕಲ್ಪ ಅಭಿಯಾನ: ಜೆ.ಪಿ.ನಡ್ಡಾ

**ಬೆಂಗಳೂರು, ಸೆ.15:** ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮ ದಿನವಾದ ಸೆಪ್ಟೆಂಬರ್ 17ರಿಂದ ಒಂದು ತಿಂಗಳ ಕಾಲ ಸೇವಾ ಸಂಕಲ್ಪ ಅಭಿಯಾನವನ್ನು ದೇಶಾದ್ಯಂತ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ತಿಳಿಸಿದ್ದಾರೆ.



ಬಿಜೆಪಿ ಕಚೇರಿಯಲ್ಲಿಂದು ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಬರುವ ಅಕ್ಟೋಬರ್ 7ಕ್ಕೆ 25 ವರ್ಷಗಳ ಅವಧಿಯ ಸಾರ್ವಜನಿಕ ಜೀವನವನ್ನು ಪೂರ್ಣ ಗೊಳಿಸಲಿದ್ದಾರೆ. ಸೇವೆ, ಉತ್ತಮ ಆಡಳಿತ ಮತ್ತು ಜನ ಕಲ್ಯಾಣದ ಆಶಯ ಹಾಗೂ ಗುರಿ ಅವರ ಸಾರ್ವಜನಿಕ ಜೀವನದ ಪ್ರಮುಖ ಅಂಶಗಳಾಗಿದ್ದು, ಸೇವಾ ಸಂಕಲ್ಪದ ಅಭಿಯಾನದ ಮೂಲಕ ಈ ಅಂಶಗಳನ್ನು ಕೇಂದ್ರೀಕರಿಸಿ, ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಪ್ರಧಾನಿ ನರೇಂದ್ರ ಮೋದಿ 2001ರ ಅಕ್ಟೋಬರ್ 7ರಂದು ಗುಜರಾತ್ ನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರ ಮಾಡಿದ್ದರು. ಅಂದಿನಿಂದ ಇಂದಿನವರೆಗೂ ಬದ್ಧತೆ ಮತ್ತು ಸೇವಾ ಭಾವನೆಯೊಂದಿಗೆ ಪ್ರಧಾನ ಸೇವಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕಳೆದ ಜೂನ್ 10ಕ್ಕೆ ಅತಿ ದೀರ್ಘಕಾಲದ ಚುನಾಯಿತ ಪ್ರಧಾನಿ ಎನ್ನುವ ಹೆಗ್ಗಳಿಕೆಗೂ ಭಾಜನರಾಗಿದ್ದಾರೆ. ಇದು ಸರ್ವರಿಗೂ ಹೆಮ್ಮೆಯ ಸಂಗತಿಯಾಗಿದೆ ಎಂದರು.

## ಮಧುಗಿರಿಗೆ ಚತುಷ್ಪಥ ರಸ್ತೆ ಮಂಜೂರು ಮಾಡಿ ಗಡ್ಕರಿಗೆ ಸಚಿವ ಸೋಮಣ್ಣ ಮನವಿ

**ನವದೆಹಲಿ, ಸೆ.15:** ಹಲವು ದಶಕಗಳ ಬೇಡಿಕೆಯಾಗಿದ್ದ ಮಧುಗಿರಿ ಪಟ್ಟಣದ ಪ್ರಥಮ ದರ್ಜೆ ಕಾಲೇಜಿನಿಂದ ನೃಪತುಂಗ ಸರ್ಕಲ್ ವರೆಗಿನ ರಾಷ್ಟ್ರೀಯ ಹೆದ್ದಾರಿ-69ರ 390 ಮೀಟರ್ ಬ್ಲಾಕ್ ಸ್ಪಾಟ್ (ಅಪಘಾತ ಸ್ಥಳದಲ್ಲಿ) ಕಳೆದ 8 ವರ್ಷಗಳಿಂದ ನೆನೆಗುಂದಿಗೆ ಬಿದ್ದಿದ್ದು, ಈ ರಸ್ತೆ ಅಗಲಿಕರಣಕ್ಕೆ ಸಾರ್ವಜನಿಕರ ಒತ್ತಾಯವಿತ್ತು ಎಂದು ವಿ. ಸೋಮಣ್ಣ ತಿಳಿಸಿದ್ದಾರೆ.

10 ಅಪಘಾತಗಳು ಸಂಭವಿಸಿ 4 ಮಂದಿ ಮೃತಪಟ್ಟಿದ್ದು 8 ಮಂದಿ ಗಾಯಗೊಂಡಿದ್ದಾರೆ ಎಂಬ ವಿಷಯ ತಿಳಿದ ತುಮಕೂರು ಲೋಕಸಭಾ ಸದಸ್ಯರು ಹಾಗೂ ಕೇಂದ್ರ ಸಚಿವ ವಿ. ಸೋಮಣ್ಣನವರು ಕೇಂದ್ರದ ಭೂ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಮತ್ತು ಇಲಾಖೆಯ ಕಾರ್ಯದರ್ಶಿ ಉಮಾಶಂಕರ್ ಅವರನ್ನು ಇತ್ತೀಚೆಗೆ ಭೇಟಿ ಮಾಡಿ ರಸ್ತೆ ಅಗಲೀಕರಣಕ್ಕೆ ಅನುಮತಿ ನೀಡುವಂತೆ ಮನವಿ ಮಾಡಿದ್ದರು.

ತಮ್ಮ ಮನವಿಗೆ ಸ್ಪಂದಿಸಿದ ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಈ ಅಪಘಾತ ಸ್ಥಳ ನಿರ್ಮೂಲನೆ ಮಾಡಲು ಸದರಿ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿ ಪಡಿಸಲು ಕೂಡಲೇ ಅನುಮೋದನೆ ನೀಡಿದ್ದರು ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.



ಅದರಂತೆ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವಾಲಯದ ಕಾರ್ಯದರ್ಶಿಯವರು 29.94 ಕೋಟಿ ರೂ. ಅಂದಾಜಿಗೆ ಅನುಮೋದನೆ ಇಂದು ನೀಡಿದ್ದಾರೆ ಎಂದು ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ತುಮಕೂರು ಸಂಸದ ವಿ. ಸೋಮಣ್ಣನವರು ಮಧುಗಿರಿ ತಾಲ್ಲೂಕಿಗೆ ಹಲವಾರು ಸಂದರ್ಭದಲ್ಲಿ ಭೇಟಿ ನೀಡಿದ್ದಾಗ ಅಲ್ಲಿನ ಸಾರ್ವಜನಿಕರು ಹಾಗೂ ಕೆ.ಎನ್. ರಾಜಣ್ಣನವರು ಈ ಬಗ್ಗೆ ಮನವಿ ಮಾಡಿದ್ದು, ಮನವಿಗೆ ಸ್ಪಂದಿಸಿ ಈ ಚತುಷ್ಪಥ ರಸ್ತೆ ಅನುಮೋದನೆಯನ್ನು ಕೊಡಿಸಿರುವುದಾಗಿ ಕೇಂದ್ರ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ದಶಕಗಳ ಕಾಲದ ಈ ಭಾಗದ ಸಾರ್ವಜನಿಕರ ಬೇಡಿಕೆಯನ್ನು ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಈಡೇರಿಸಿದೆ ಎಂದು ಸಚಿವ ವಿ. ಸೋಮಣ್ಣ ಹರ್ಷವ್ಯಕ್ತಪಡಿಸಿದ್ದಾರೆ.

ತುಮಕೂರು ಜನತೆಯ ಆಶೋತ್ತರವನ್ನು ಪೂರೈಸಿದ ರಾಷ್ಟ್ರದ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ಹಾಗೂ ಇಲಾಖಾ ಕಾರ್ಯದರ್ಶಿ ಉಮಾಶಂಕರ್ ಅವರಿಗೆ ತುಮಕೂರು ಜನತೆಯ ಪರವಾಗಿ ಅಭಿನಂದನೆಯನ್ನು ಕೇಂದ್ರ ಸಚಿವ ವಿ. ಸೋಮಣ್ಣ ಮನವಿ ಸಲ್ಲಿಸಿದ್ದಾರೆ.

69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನ


## ದಕ್ಷಿಣ ಆಫ್ರಿಕಾದ ಸ್ಪೀಕರ್‌ಗೆ 'ಎ ಬ್ರೌಸರ್ ಆನ್ ಕರ್ನಾಟಕ' ಕಿರುಹೊತ್ತಿಗೆ ಸಮರ್ಪಣೆ

**ಕೇಪ್‌ಟೌನ್, ಸೆ.15:** ದಕ್ಷಿಣ ಆಫ್ರಿಕಾದ ಕೇಪ್‌ಟೌನ್ ಅಂತರರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ನಡೆಯುತ್ತಿರುವ 69ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಸಭೆಯ ನಿಯೋಗವು ದಕ್ಷಿಣ ಆಫ್ರಿಕಾ ಗಣರಾಜ್ಯದ ರಾಷ್ಟ್ರೀಯ ಸಭೆಯ ಸಭಾಧ್ಯಕ್ಷ ಥೋಕೊ ದಿದಿಜಾ ಅವರಿಗೆ 'ಎ ಬ್ರೌಸರ್ ಆನ್ ಕರ್ನಾಟಕ' ಎಂಬ ವಿಶೇಷ ಕಿರುಹೊತ್ತಿಗೆಯನ್ನು ಗೌರವಪೂರ್ವಕವಾಗಿ ಹಸ್ತಾಂತರಿಸಿತು.

ಈ ನಿಯೋಗದ ನೇತೃತ್ವವನ್ನು ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಸಲೀಂ ಅಹಮದ್ ವಹಿಸಿದ್ದರು. ಕರ್ನಾಟಕದ ಭವ್ಯ ಸಂಸದೀಯ ಪರಂಪರೆ, ಆಡಳಿತ ವ್ಯವಸ್ಥೆ, ಸಾಂಸ್ಕೃತಿಕ ವೈಭವ ಹಾಗೂ ರಾಜ್ಯದ ಅಭಿವೃದ್ಧಿ ಸಾಧನೆಗಳನ್ನು ಅಂತರರಾಷ್ಟ್ರೀಯ ಮಟ್ಟದ ಪ್ರತಿನಿಧಿಗಳಿಗೆ ಪರಿಚಯಿಸುವ ಉದ್ದೇಶದಿಂದ ಈ ಕಿರುಹೊತ್ತಿಗೆಯನ್ನು ಸಿದ್ಧಪಡಿಸಲಾಗಿದೆ. ಇದನ್ನು ಕರ್ನಾಟಕ ವಿಧಾನಮಂಡಲದ ಪರವಾಗಿ ಸಂಸದೀಯ ಸ್ನೇಹ ಮತ್ತು ಸೌಹಾರ್ದದ ಸಂಕೇತವಾಗಿ ದಕ್ಷಿಣ ಆಫ್ರಿಕಾದ ಸಂಸತ್ತಿಗೆ ಅರ್ಪಿಸಲಾಯಿತು.

**ಐತಿಹಾಸಿಕ ಸಮಾವೇಶ ಹಾಗೂ ಪ್ರಮುಖ ಚರ್ಚೆಗಳು:**

ಈ ಬಾರಿಯ ಸಮ್ಮೇಳನವು "ಬದಲಾಗುತ್ತಿರುವ ವಿಶ್ವ ವ್ಯವಸ್ಥೆಯಲ್ಲಿ ಅಂತರರಾಷ್ಟ್ರೀಯ ಕಾನೂನು ಮತ್ತು ಸಂಸದೀಯ ಪ್ರಜಾಪ್ರಭುತ್ವವನ್ನು ಬಲಪಡಿಸುವುದು: ಕಾಮನ್‌ವೆಲ್ತ್ ನಾಯಕತ್ವ" ಎಂಬ ಧ್ಯೇಯದಡಿ ನಡೆಯುತ್ತಿದೆ. ಕಾಮನ್‌ವೆಲ್ತ್‌ನ 9 ಭೌಗೋಳಿಕ ಪ್ರದೇಶಗಳಿಂದ ವಿವಿಧ ಸಭಾಧ್ಯಕ್ಷರು, ಸಭಾಪತಿಗಳು ಹಾಗೂ ಸಂಸದರು ಸೇರಿದಂತೆ 800ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದು, ಇದು ಕಾಮನ್‌ವೆಲ್ತ್ ಸಮ್ಮೇಳನದ ಇತಿಹಾಸದಲ್ಲೇ ಅತ್ಯಂತ ದೊಡ್ಡ ಸಮಾವೇಶವಾಗಿದೆ.




### ಕರ್ನಾಟಕ ನಿಯೋಗದ ಸಕ್ರಿಯ ಪಾಲ್ಗೊಳ್ಳುವಿಕೆ

ಸಮ್ಮೇಳನದ ಭಾಗವಾಗಿ ನಡೆದ ಅಂತರ-ಸಂಸದೀಯ ವಿಷಯಗಳು, ಆರ್ಥಿಕತೆ, ವ್ಯಾಪಾರ, ಕೃತಕ ಬುದ್ಧಿಮತ್ತೆ (AI) ಬಳಕೆ, ಮಾನವ ಹಕ್ಕುಗಳು, ಶಾಂತಿ ಸ್ಥಾಪನೆ ಹಾಗೂ ಹವಾಮಾನ ಬದಲಾವಣೆ ಮತ್ತು ಸ್ಥಿತಿಸ್ಥಾಪಕತ್ವದಲ್ಲಿ ಸಂಸದೀಯ ನಾಯಕತ್ವ ಕುರಿತ ಕಾರ್ಯಾಗಾರಗಳು ಮತ್ತು ಚರ್ಚಾಗೋಷ್ಠಿಗಳಲ್ಲಿ ಕರ್ನಾಟಕದ ನಿಯೋಗವು ಸಕ್ರಿಯವಾಗಿ ಭಾಗವಹಿಸಿದೆ.

## ದೇಶದ ಯಶಸ್ಸಿನ ವಿರುದ್ಧ ಮಾತನಾಡುವುದು ಕಾಂಗ್ರೆಸ್‌ನ ಮನಸ್ಥಿತಿ

ಹುಬ್ಬಳ್ಳಿ, ಸೆ.15: ಕರ್ನಾಟಕ ಸರ್ಕಾರ ತಡವಾಗಿ ಪ್ರಧಾನಮಂತ್ರಿ ಕುಸುಮ್ ಸಿ ಯೋಜನೆ ಜಾರಿ ಮಾಡುತ್ತಿದ್ದಾರೆ. ರಾಜ್ಯ ಸರ್ಕಾರದ ನಾಯಕರ ಟ್ಯೂಬ್‌ಲೈಟ್ ಲೇಟಾಗಿ ಹೊತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್‌ಜೋಶಿ ವ್ಯಂಗ್ಯವಾಡಿದ್ದಾರೆ.

ಇಂದಿರಾ ಗಾಂಧಿ, ರಾಜೀವ್ ಗಾಂಧಿ ಅವರ ಹತ್ಯೆ ನಂತರ ಅವರ ಚಿತಾಭಸ್ಮ ತೆಗೆದುಕೊಂಡು ಹೋಗಿ ಚುನಾವಣೆ ಮಾಡಲಾಯಿತು. ಕಾಂಗ್ರೆಸ್‌ನವರು ಎಮೋಷನಲ್ ಪಾಲಿಟಿಕ್ಸ್ ಎಂದು ಆರೋಪಿಸಿದ ಅವರು, ಜಿಡಿಪಿ ಅಂಕಿ ಅಂಶಗಳನ್ನು ಮುಚ್ಚಿಡಲು ಆಗಲ್ಲ. ದೇಶದಲ್ಲಿ ಹೂಡಿಕೆ ಮಾಡಲು ಉದ್ಯಮಿಗಳು ಮುಂದೆ ಬರುತ್ತಿದ್ದಾರೆ. ರಫ್ತು ಹೆಚ್ಚಾಗಿದೆ. ಮುಂದಿನ ವರ್ಷ ಭಾರತೀಯ ಡಿಸೈನ್ ಹಾಗೂ ಮೊಬೈಲ್ ಬರಲಿದೆ. ಹೀಗಿದ್ದರೂ ದೇಶದ ಯಶಸ್ಸಿನ ವಿರುದ್ಧ ಮಾತನಾಡುವುದು ಕಾಂಗ್ರೆಸ್ ಮನಸ್ಥಿತಿಯಾಗಿದೆ ಎಂದು ಕಿಡಿಕಾರಿದ್ದಾರೆ.



■ ಕೇಂದ್ರ ಸಚಿವ ಪ್ರಲ್ಹಾದ್‌ಜೋಶಿ ಕಿಡಿ: ಪಿಎಂ ಕುಸುಮ್ ಸಿ ಯೋಜನೆ ತಡವಾಗಿ ಜಾರಿ ಮಾಡಿದ್ದಕ್ಕೆ ವ್ಯಂಗ್ಯ

ರೈತರ ಹಿತ ಕಾಪಾಡಲು ಕೇಂದ್ರ ಸರ್ಕಾರ ಬದ್ಧವಾಗಿದ್ದು, ಮಳೆ ಕೊರತೆಯಿಂದ ದೇಶದಲ್ಲಿ ಕೆಲವು ವಸ್ತುಗಳ ಬೆಲೆ ಏರಿಕೆಯಾಗಿದೆ. ಅದನ್ನು ನಿಯಂತ್ರಣ ಮಾಡಲು ಕೇಂದ್ರ ಸರ್ಕಾರ ಪ್ರಯತ್ನ ಮಾಡುತ್ತಿದೆ. ಜಗತ್ತಿನ ಕಠಿಣ ಸ್ಥಿತಿಯ ನಡುವೆಯೂ ದೇಶದ ಆರ್ಥಿಕತೆ ಸದೃಢವಾಗಿದೆ. ಇದನ್ನು ಬ್ರಿಕ್ಸ್ ಸಭೆಯಲ್ಲಿ ಜಗತ್ತಿನ ಅನೇಕರು ಕೊಂಡಾಡಿದ್ದಾರೆ. ಆದರೆ, ವಿರೋಧ ಪಕ್ಷದ ನಾಯಕರು ಅಲ್ಲಿನ ಮೆನು ಬಗ್ಗೆ ಮಾತನಾಡುತ್ತಿದ್ದಾರೆ. 81 ಕೋಟಿ ಜನರಿಗೆ ಉಚಿತವಾಗಿ ಪ್ರತಿ ತಿಂಗಳು ಅಕ್ಕಿ ನೀಡುತ್ತಿದ್ದೇವೆ ಎಂದವರು ತಿಳಿಸಿದ್ದಾರೆ.

ಪ್ರಧಾನಿ ಜನ್ಮದಿನದ ಅಂಗವಾಗಿ ಬಿಜೆಪಿಯಿಂದ ಸೆಪ್ಟೆಂಬರ್ 17ರಿಂದ ಅಕ್ಟೋಬರ್ 17ರ ವರಗೆ ಸೇವಾ ಸಂಕಲ್ಪ ಸಪ್ತಾಹ ಆಚರಣೆ ನಡೆಯಲಿದೆ. ಜನಸೇವೆಯೇ ಪ್ರಭುಸೇವೆ ಅನ್ನೋ ಧ್ಯೇಯವಾಕ್ಯದೊಂದಿಗೆ ಸಪ್ತಾಹ ನಡೆಯಲಿದ್ದು, ಸೆಪ್ಟೆಂಬರ್ 17ರಂದು ಪ್ರತಿ ಮನೆ ಮುಂದೆ ಆಶೀರ್ವಾದ ದೀಪವನ್ನು ಹಚ್ಚಲಾಗುವದು ಎಂದು ತಿಳಿಸಿದ್ದಾರೆ.

## ಶೇಖ್ ಹಸೀನಾರ 7 ಆಪ್ತರಿಗೆ ಗಲ್ಲು ಶಿಕ್ಷೆ ವಿಧಿಸಿದ ಕೋರ್ಟ್

**ಢಾಕಾ, ಸೆ.15:** 2024ರ ದಂಗೆಯನ್ನು ಹತ್ತಿಕ್ಕಲು ಪ್ರಯತ್ನಿಸಿದ ಆರೋಪದ ಮೇಲೆ, ಬಾಂಗ್ಲಾದೇಶದ ನ್ಯಾಯಾಲಯವೊಂದು ಮಂಗಳವಾರ ಪದಚ್ಯುತ ಪ್ರಧಾನಿ ಶೇಖ್ ಹಸೀನಾರ ಏಳು ಆಪ್ತ ನಾಯಕರಿಗೆ(ಇಬ್ಬರು ಮಾಜಿ ಸಚಿವರು ಸೇರಿದಂತೆ) ಗಲ್ಲು ಶಿಕ್ಷೆ ವಿಧಿಸಿದೆ.

ಬಾಂಗ್ಲಾದೇಶದಲ್ಲಿ ವಿದ್ಯಾರ್ಥಿ ದಂಗೆಯ ನಂತರ ಭಾರತಕ್ಕೆ ಬಂದು ಆಶ್ರಯ ಪಡೆದಿರುವ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ 'ಅವಾಮಿ ಲೀಗ್' ಪಕ್ಷದ ಏಳು ನಾಯಕರಿಗೆ, ಕೊಲೆ ಹಾಗೂ ಹತ್ಯೆಗಳಿಗೆ ಪ್ರಚೋದನೆ ನೀಡುವುದು ಸೇರಿದಂತೆ ಮಾನವೀಯತೆಯ ವಿರುದ್ಧದ ಅಪರಾಧಗಳಿಗಾಗಿ ತಪ್ಪಿತಸ್ಥರೆಂದು ಕೋರ್ಟ್ ಘೋಷಿಸಿದೆ.

'ಅವಾಮಿ ಲೀಗ್' ಪಕ್ಷದ ಮಾಜಿ ಪ್ರಧಾನ ಕಾರ್ಯದರ್ಶಿ ಒಬೈದುಲ್ ಖಾದರ್ ಮತ್ತು ಮತ್ತೊಬ್ಬ ಮಾಜಿ ಸಚಿವ ಮೊಹಮ್ಮದ್ ಅಲಿ ಅರಾಫತ್ ಸೇರಿದಂತೆ ಏಳು ನಾಯಕರಿಗೆ ನ್ಯಾಯಮೂರ್ತಿ ನಜ್ರುಲ್ ಇಸ್ಲಾಂ ಚೌಧರಿ ನೇತೃತ್ವದ ಮೂವರು ಸದಸ್ಯರ ನ್ಯಾಯಮಂಡಳಿ ಗಲ್ಲು ಶಿಕ್ಷೆ ವಿಧಿಸಿದೆ. "ಈ ತೀರ್ಪಿನಿಂದ ನಮಗೆ ಸಂತೋಷವಾಗಿದೆ" ಎಂದು ಸರ್ಕಾರಿ ಅಭಿಯೋಜಕ ಎಂಡಿ ಅಮೀನುಲ್ ಇಸ್ಲಾಂ ಹೇಳಿದ್ದಾರೆ. ವಿಶ್ವಸಂಸ್ಥೆಯ ಪ್ರಕಾರ, 2024ರ ಜುಲೈ ಮತ್ತು ಆಗಸ್ಟ್ ನಡುವೆ ವಿದ್ಯಾರ್ಥಿಗಳ ನೇತೃತ್ವದ ದಂಗೆಯನ್ನು ಹಸೀನಾ ಸರ್ಕಾರವು ಹತ್ತಿಕ್ಕಲು ಪ್ರಯತ್ನಿಸಿದಾಗ ನಡೆದ ಹಿಂಸಾಚಾರದಲ್ಲಿ ಸುಮಾರು 1,400 ಜನರು ಸಾವನ್ನಪ್ಪಿದ್ದರು.

## ಉಗ್ರ ಮಸೂದ್ ಅಜರ್ ತಲೆಗೆ 7 ಮಿಲಿಯನ್ ರೂ. ಬಹುಮಾನ ಘೋಷಿಸಿದ ಪಾಕ್

**ನವದೆಹಲಿ, ಸೆ.15:** ಅಕ್ಟೋಬರ್‌ನಲ್ಲಿ ಹಣಕಾಸು ಕ್ರಿಯಾ ಕಾರ್ಯಪಡೆ (FATF) ಪರಿಶೀಲನಾ ಸಭೆ ನಡೆಯಲಿದ್ದು ಅದಕ್ಕೂ ಮುನ್ನವೇ ಪಾಕಿಸ್ತಾನ ತನ್ನದೇ ಭಯೋತ್ಪಾದಕನಿಗೆ 7 ಮಿಲಿಯನ್ ರೂಪಾಯಿ ಬಹುಮಾನ ಘೋಷಿಸುವ ಮೂಲಕ ಹೊಸ ನವರಂಗಿ ಆಟ ಪ್ರಾರಂಭಿಸಿದೆ. ವಾಸ್ತವವಾಗಿ, ಜಾಗತಿಕ ಮೇಲ್ವಿಚಾರಣಾ ಸಂಸ್ಥೆಯು ದೇಶವನ್ನು ಬೂದು ಪಟ್ಟಿಗೆ ಮತ್ತೆ ಸೇರಿಸಲ್ಪಡುವುದನ್ನು ತಪ್ಪಿಸಲು ಪಾಕಿಸ್ತಾನದ ಫೆಡರಲ್ ತನಿಖಾ ಸಂಸ್ಥೆ ಜೈಶ್-ಎ-ಮೊಹಮ್ಮದ್ ಮುಖ್ಯಸ್ಥ ಮಸೂದ್ ಅಜರ್ ಮೇಲಿನ ಬಹುಮಾನವನ್ನು 7 ಮಿಲಿಯನ್ ಪಾಕಿಸ್ತಾನಿ ರೂಪಾಯಿಗಳಿಗೆ ಹೆಚ್ಚಿಸಿದೆ. ಇದರೊಂದಿಗೆ, ಪಾಕಿಸ್ತಾನವು ಇತ್ತೀಚಿನ ತನ್ನ ಮೋಸ್ಟ್ ವಾಂಟೆಂಡ್ ಭಯೋತ್ಪಾದಕರ ಕೆಂಪು ಪಟ್ಟಿಯಲ್ಲಿ ಅವನನ್ನು ಪರಾರಿಯಾಗಿದ್ದಾನೆ ಎಂದು ಘೋಷಿಸಿದೆ. ಆದಾಗ್ಯೂ, ಪಾಕಿಸ್ತಾನದ ಈ ಕ್ರಮವನ್ನು ಅಂತರರಾಷ್ಟ್ರೀಯ ಸಮುದಾಯವನ್ನು ದಾರಿತಪ್ಪಿಸಲು ಮತ್ತು ತನ್ನ ನೆಲದಲ್ಲಿ ಅಭಿವೃದ್ಧಿ ಹೊಂದುತ್ತಿರುವ ಭಯೋತ್ಪಾದಕ ನಾಯಕರನ್ನು ಮರೆಮಾಡಲು ಉದ್ದೇಶಪೂರ್ವಕ ಪಿತೂರಿ ಎಂದು ಪರಿಗಣಿಸಲಾಗುತ್ತಿದೆ. 2021ರಲ್ಲಿ ಅಜರ್ ದೇಶದಲ್ಲಿ ಇಲ್ಲ. ಆತ ಅಫ್ಘಾನಿಸ್ತಾನಕ್ಕೆ ಪಲಾಯನ ಮಾಡಿದ್ದಾನೆ ಎಂದು ಪಾಕಿಸ್ತಾನ ಹೇಳಿಕೊಂಡಿದೆ. ಆರಂಭಿಕ ಬಹುಮಾನವನ್ನು ಘೋಷಿಸಿದ 5 ವರ್ಷಗಳ ನಂತರ, ಎಫ್‌ಐಎ ಈಗ ಅದನ್ನು 7 ಮಿಲಿಯನ್ ಪಾಕಿಸ್ತಾನಿ ರೂಪಾಯಿಗಳಿಗೆ ಹೆಚ್ಚಿಸಿದೆ.

■ ಹಣಕಾಸು ಕ್ರಿಯಾ ಕಾರ್ಯಪಡೆ ಪರಿಶೀಲನಾ ಸಭೆಗೂ ಮುನ್ನ ಕ್ರಮ

# 2 ಸಾವಿರ ರೂ.ವರೆಗಿನ ಯುಪಿಐ ಪಾವತಿಗೆ ಶುಲ್ಕವಿಲ್ಲ: ಕೇಂದ್ರ ಅಧಿಸೂಚನೆ

**ನವದೆಹಲಿ, ಸೆ.15:** ಡಿಜಿಟಲ್ ಪಾವತಿ ಬಳಕೆದಾರರಿಗೆ ಕೇಂದ್ರ ಸರ್ಕಾರ ಮಹತ್ವದ ಸ್ಪಷ್ಟನೆ ನೀಡಿದ್ದು, 2,000 ವರೆಗೆ ನಡೆಯುವ ಯುಪಿಐ ವ್ಯವಹಾರಗಳಿಗೆ ಯಾವುದೇ ನೇರ ಅಥವಾ ಪರೋಕ್ಷ ಶುಲ್ಕ ವಿಧಿಸುವಂತಿಲ್ಲ ಎಂದು ತಿಳಿಸಿದೆ. ಇದೇ ನಿಯಮ ರೂಪೇ ಡೆಬಿಟ್ ಕಾರ್ಡ್ ಮೂಲಕ ನಡೆಯುವ ಪಾವತಿಗಳಿಗೂ ಅನ್ವಯವಾಗಲಿದೆ.

ಬ್ಯಾಂಕ್‌ಗಳು ಅಥವಾ ಪಾವತಿ ವ್ಯವಸ್ಥೆ ಒದಗಿಸುವ ಸಂಸ್ಥೆಗಳು ಇಂತಹ ವ್ಯವಹಾರಗಳಿಗೆ ಗ್ರಾಹಕರಿಂದ ಯಾವುದೇ ಶುಲ್ಕ ವಸೂಲಿ ಮಾಡುವಂತಿಲ್ಲ.

ಕೇಂದ್ರ ಹಣಕಾಸು ಸಚಿವಾಲಯವು Payment and Settlement Systems Act, 2007ರ ತಿದ್ದುಪಡಿ ನಿಯಮಗಳ ಅಡಿಯಲ್ಲಿ ಈ ಅಧಿಸೂಚನೆ ಹೊರಡಿಸಿದೆ.

ರೂ.2,000ವರೆಗೆ ಯುಪಿಐ ಮೂಲಕ ಹಣ ಪಾವತಿಸುವವರು ಮಾತ್ರವಲ್ಲದೆ, ಹಣ ಸ್ವೀಕರಿಸುವವರ ಮೇಲೂ ಯಾವುದೇ ನೇರ ಅಥವಾ ಪರೋಕ್ಷ ಶುಲ್ಕ ವಿಧಿಸಲು ಅವಕಾಶವಿಲ್ಲ. ರೂಪೇ ಡೆಬಿಟ್ ಕಾರ್ಡ್ ಪಾವತಿಗಳಿಗೂ ಇದೇ ರೀತಿಯ ಶುಲ್ಕ ವಿನಾಯಿತಿ ಮುಂದುವರಿಯಲಿದೆ.

ಸದ್ಯದ ಅಧಿಸೂಚನೆಯ ಪ್ರಮುಖ ಅಂಶವೆಂದರೆ, ರೂ.2,000ಕ್ಕಿಂತ ಹೆಚ್ಚಿನ ಯುಪಿಐ ವ್ಯವಹಾರಗಳ ಮೇಲೆ ಶುಲ್ಕ ವಿಧಿಸುವ ಸಾಧ್ಯತೆಗೆ ಅವಕಾಶ ಕಲ್ಪಿಸಿರುವುದು. ಆದರೆ ಇಂತಹ ವಹಿವಾಟುಗಳಿಗೆ ಶುಲ್ಕ ವಿಧಿಸುವುದೇ ಅಥವಾ ಇಲ್ಲವೇ, ವಿಧಿಸಿದರೆ ಎಷ್ಟು ಶುಲ್ಕ ಮತ್ತು ಯಾವ ರೀತಿಯಲ್ಲಿ ವಿಧಿಸಲಾಗುತ್ತದೆ ಎಂಬುದರ ಕುರಿತು ಸರ್ಕಾರದಿಂದ ಇನ್ನೂ ಅಂತಿಮ ನಿರ್ಧಾರ ಹೊರಬಿದ್ದಿಲ್ಲ.




### ರೂಪೇ ಡೆಬಿಟ್ ಕಾಡ್ ವ್ಯವಹಾರ ಬ್ಯಾಂಕ್‌ಗಳು ಶುಲ್ಕ ವಿಧಿಸುವಂತಿಲ್ಲ

ಇದು ವಿಶೇಷವಾಗಿ ವ್ಯಾಪಾರಿಗಳಿಗೆ ಸಂಬಂಧಿ ಸಿದ Merchant Discount Rate (MDR) ಕುರಿತು ಮುಂದಿನ ದಿನಗಳಲ್ಲಿ ಹೊಸ ವ್ಯವಸ್ಥೆ ಜಾರಿಗೆ ಬರುವ ಸಾಧ್ಯತೆಯನ್ನು ಸೂಚಿಸಿದೆ. ಆದರೆ ಸಾಮಾನ್ಯ ವ್ಯಕ್ತಿಯಿಂದ ವ್ಯಕ್ತಿಗೆ ನಡೆಯುವ ಪಾವತಿಗಳ ಮೇಲೆ ಶುಲ್ಕ ವಿಧಿಸುವ ಬಗ್ಗೆ ಈ ಅಧಿಸೂಚನೆಯಲ್ಲಿ ಯಾವುದೇ ಅಂತಿಮ ಘೋಷಣೆ ಇಲ್ಲ.

ಸಣ್ಣ ಮೊತ್ತದ ಡಿಜಿಟಲ್ ಪಾವತಿಗಳಿಗೆ ಶುಲ್ಕದ ಹೊರೆ ಬಾರದಂತೆ ನೋಡಿಕೊಳ್ಳುವುದು ಸರ್ಕಾರದ ನಿರ್ಧಾರದ ಪ್ರಮುಖ ಉದ್ದೇಶವಾಗಿದೆ. ದಿನನಿತ್ಯದ ಖರೀದಿ, ಸಣ್ಣ ವ್ಯಾಪಾರಿಗಳ ಪಾವತಿ ಸೇರಿದಂತೆ 2,000 ವರೆಗಿನ UPI ವಹಿವಾಟುಗಳು ಶುಲ್ಕಮುಕ್ತವಾಗಿರುವುದರಿಂದ ಡಿಜಿಟಲ್ ಪಾವತಿ ಬಳಕೆದಾರರಿಗೆ ತಕ್ಷಣದ ಹೆಚ್ಚುವರಿ ವೆಚ್ಚ ಇರುವುದಿಲ್ಲ.

2025-26ರ ಅಂಕಿಅಂಶಗಳ ಪ್ರಕಾರ, ವ್ಯಕ್ತಿಯಿಂದ ವ್ಯಾಪಾರಿಗೆ ನಡೆದ UPI ಪಾವತಿಗಳಲ್ಲಿ ಕೇವಲ ಶೇ.4ರಷ್ಟು ವಹಿವಾಟುಗಳು 2,000ಕ್ಕಿಂತ ಹೆಚ್ಚಿನ ಮೊತ್ತದ್ದಾಗಿದ್ದವು. ಆದರೆ ಮೌಲ್ಯದ ದೃಷ್ಟಿಯಿಂದ ಈ ದೊಡ್ಡ ಮೊತ್ತದ ವಹಿವಾಟುಗಳ ಪಾಲು ಸುಮಾರು ಮೂರನೇ ಎರಡರಷ್ಟಿತ್ತು. ಹೀಗಾಗಿ ಮುಂದಿನ ಶುಲ್ಕ ವ್ಯವಸ್ಥೆಯು ಮುಖ್ಯವಾಗಿ ಹೆಚ್ಚಿನ ಮೌಲ್ಯದ ವ್ಯಾಪಾರಿ ವ್ಯವಹಾರಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.




ಮೊದಲನೇ ಪುಟದಿಂದ...

- ಗುಜರಾತ್‌ನ ಕಛ್ ಜಿಲ್ಲೆಯ ಭೂಕಂಪ ಪೀಡಿತ ಪ್ರದೇಶದಲ್ಲಿ ಮೋಟರ್ ಬೈಕ್ ಮೇಲೆ ಸುತ್ತಾಡಿ, ಪರಿಹಾರ ಕಾರ್ಯ ಕೈಗೊಂಡು ಒಂದು ವರ್ಷದಲ್ಲಿ ಭೂಕಂಪ ಪೀಡಿತ ಪ್ರದೇಶದ ಪುನರ್ ನಿರ್ಮಾಣ ಮಾಡುವ ಮೂಲಕ ಇಡೀ ದೇಶದ ಜನರ ಗಮನ ಸೆಳೆದರು.
- ಮೋದಿ ಅವರು ಗುಜರಾತ್‌ನಲ್ಲಿ ಕೈಗೊಂಡ ಅಭಿವೃದ್ಧಿಯೊಂದಿಗೆ ಆರ್ಥಿಕ ಪ್ರಗತಿಯ ಕಾರ್ಯಗಳು ಇಡೀ ದೇಶದಲ್ಲಿ 'ಗುಜರಾತ್ ಮಾದರಿ' ಎಂದು ಪ್ರಸಿದ್ಧಿ ಪಡೆದವು.
- ಅನಂತರ ನರೇಂದ್ರ ಮೋದಿ ಅವರು, ಗುಜರಾತ್‌ನಲ್ಲಿ ನಡೆದ ಸತತ ಮೂರು ಚುನಾವಣೆಗಳಲ್ಲಿ ಆಯ್ಕೆಯಾಗಿ ಮೂರನೇ ಬಾರಿಗೆ ಮುಖ್ಯಮಂತ್ರಿಯಾಗಿ ದಾಖಲೆ ನಿರ್ಮಿಸಿದರು.
- ಅತ್ಯಂತ ಸಾಮಾನ್ಯ ಬಡ ಕುಟುಂಬ ದಲ್ಲಿ ಜನಿಸಿದ ನರೇಂದ್ರ ಮೋದಿ ಅವರ ಜೀವನ ಮತ್ತು ಸಾರ್ವಜನಿಕ ಜೀವನ, ನಿಸ್ವಾರ್ಥ, ಸ್ವಚ್ಛ, ಶುದ್ಧ, ದಕ್ಷ ಆಡಳಿತದ ಪರಿಣಾಮವಾಗಿ 2014ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷದ ಪ್ರಧಾನಿ ಅಭ್ಯರ್ಥಿಯನ್ನಾಗಿ ಘೋಷಣೆ ಮಾಡಲಾಯಿತು.
- ಈ ಚುನಾವಣಾ ಇತಿಹಾಸದಲ್ಲಿ ಪ್ರಥಮ ಬಾರಿಗೆ ಮೋದಿ ನೇತೃತ್ವದಲ್ಲಿ ಭಾರತೀಯ ಜನತಾ ಪಕ್ಷ ಕೇಂದ್ರದಲ್ಲಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಯಿತು.
- ನರೇಂದ್ರ ಮೋದಿಯವರು ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಸತತ ಮೂರನೇ ಬಾರಿಗೆ ಪ್ರಧಾನಿ ಹುದ್ದೆ ಅಲಂಕರಿಸಿದ ವ್ಯಕ್ತಿ ಎಂಬ ಕೀರ್ತಿಗೆ ಪಾತ್ರರಾದವರು. ಅವರ ಈ ಸುದೀರ್ಘ ಆಡಳಿತಾವಧಿಯ ಪ್ರಮುಖ ಸಾಧನೆಗಳು ಗಣನೀಯ.



**ಆರ್ಥಿಕ ಮತ್ತು ಡಿಜಿಟಲ್ ಕ್ರಾಂತಿ:**

- ದೇಶಾದ್ಯಂತ ಡಿಜಿಟಲ್ ಪಾವತಿ ವ್ಯವಸ್ಥೆಯನ್ನು ಜಾರಿಗೆ ತಂದು, ಯುಪಿಐ ಮೂಲಕ ಜಾಗತಿಕ ಮಟ್ಟದಲ್ಲಿ ಭಾರತ ಡಿಜಿಟಲ್ ವ್ಯವಹಾರದಲ್ಲಿ ಮುಂಚೂಣಿ ಸಾಧಿಸುವಂತೆ ಮಾಡಲಾಗಿದೆ.
- 'ಒಂದೇ ದೇಶ, ಒಂದೇ ತೆರಿಗೆ' ನೀತಿಯಡಿ ಸರಕು ಮತ್ತು ಸೇವಾ ತೆರಿಗೆಯನ್ನು, ಜಿಎಸ್‌ಟಿ ಪದ್ಧತಿಯನ್ನು ಜಾರಿಗೆ ತಂದು ದೇಶದ ಆರ್ಥಿಕ ವ್ಯವಸ್ಥೆಯನ್ನು ಸರಳಗೊಳಿಸಲಾಯಿತು.
- ಜನ್ ಧನ್ ಯೋಜನೆಯ ಮೂಲಕ ಕೋಟ್ಯಂತರ ಬಡ ಜನರಿಗೆ ಬ್ಯಾಂಕ್ ಖಾತೆಗಳನ್ನು ತೆರೆಯುವಂತೆ ಮಾಡಿದರು. ಸರ್ಕಾರದ ಸಬ್ಸಿಡಿಗಳು ನೇರವಾಗಿ ಫಲಾನುಭವಿಗಳ ಖಾತೆಗೆ ತಲುಪುವಂತೆ ಮಾಡಲಾಯಿತು.
- ಜಾಗತಿಕ ಆರ್ಥಿಕತೆಯ ಹಿನ್ನೆಲೆಯಲ್ಲಿ ಭಾರತವನ್ನು ವಿಶ್ವದ 5ನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ಬೆಳೆಸಲಾಗಿದೆ.
- ಸಾಮಾಜಿಕ ಕಲ್ಯಾಣ ಮತ್ತು ಮೂಲಸೌಕರ್ಯ, ಸ್ವಚ್ಛ ಭಾರತ ಅಭಿಯಾನ, ದೇಶಾದ್ಯಂತ 12 ಕೋಟಿಗೂ ಹೆಚ್ಚು ಶೌಚಾಲಯಗಳನ್ನು ನಿರ್ಮಿಸುವ ಮೂಲಕ ನೈರ್ಮಲ್ಯ ಕ್ರಾಂತಿ ಉಂಟು ಮಾಡಲಾಯಿತು.
- ಆಯುಷ್ಮಾನ್ ಭಾರತ್ ಯೋಜನೆಯ ಮೂಲಕ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ವಾರ್ಷಿಕ 5 ಲಕ್ಷ ರೂ.ವರೆಗಿನ ಉಚಿತ ಆರೋಗ್ಯ ವಿಮೆ ಸೌಲಭ್ಯ ಒದಗಿಸಲಾಗಿದೆ.
- ಪಿಎಂ ಆವಾಸ್ ಯೋಜನೆ ಆರಂಭಿಸಿ, ದೇಶದ ಕೋಟ್ಯಂತರ ನಿರ್ಗತಿಕರಿಗೆ ಪಕ್ಕಾ ಮನೆಗಳನ್ನು ನಿರ್ಮಿಸಿಕೊಡಲಾಗಿದೆ.
- ಮೂಲಸೌಕರ್ಯ ಅಭಿವೃದ್ಧಿ ಹಿನ್ನೆಲೆಯಲ್ಲಿ ದೇಶದಾದ್ಯಂತ ರಾಷ್ಟ್ರೀಯ ಹೆದ್ದಾರಿಗಳ ಜಾಲ ವಿಸ್ತರಣೆ, ವಂದೇ ಭಾರತ್ ರೈಲುಗಳು ಮತ್ತು ವಿಮಾನ ನಿಲ್ದಾಣಗಳ ಸಂಖ್ಯೆಯನ್ನು ದುಪ್ಪಟ್ಟು ಮಾಡಲಾಗಿದೆ.



**ರಾಷ್ಟ್ರೀಯ ಭದ್ರತೆ ಮತ್ತು ವಿದೇಶಾಂಗ ನೀತಿ**

- ಆರ್ಟಿಕಲ್ 370 ರದ್ಧತಿ ಮೂಲಕ ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನ ರದ್ದುಗೊಳಿಸಿ, ಭಾರತದೊಂದಿಗೆ ಸಂಪೂರ್ಣವಾಗಿ ಸಂಯೋಜಿಸುವ ಐತಿಹಾಸಿಕ ಕಾರ್ಯ ಮಾಡಲಾಯಿತು.
- ಭಯೋತ್ಪಾದನೆಗೆ ತಕ್ಕ ಪ್ರತ್ಯುತ್ತರ ನೀಡಲು, ಸರ್ಜಿಕಲ್ ಸ್ಟ್ರೈಕ್ ಮತ್ತು ಬಾಲಾಕೋಟ್ ವೈಮಾನಿಕ ದಾಳಿಗಳ ಮೂಲಕ ರಾಷ್ಟ್ರೀಯ ಭದ್ರತೆಯನ್ನು ಬಲಪಡಿಸಲಾಯಿತು.
- ಆತ್ಮನಿರ್ಭರ ಭಾರತ ಯೋಜನೆಯಡಿ ರಕ್ಷಣೆ ಮತ್ತು ತಯಾರಿಕಾ ವಲಯದಲ್ಲಿ ಸ್ವಾವಲಂಬನೆ ಸಾಧಿಸಲು 'ಮೇಕ್ ಇನ್ ಇಂಡಿಯಾ' ಯೋಜನೆಗೆ ಒತ್ತು ನೀಡಲಾಯಿತು.
- ಜಾಗತಿಕ ಗೌರವ: ಜಿ–20 ಅಧ್ಯಕ್ಷತೆ ಸೇರಿದಂತೆ ಜಾಗತಿಕ ಮಟ್ಟದಲ್ಲಿ ಭಾರತದ ರಾಜತಾಂತ್ರಿಕ ಪ್ರಭಾವವನ್ನು ಹೆಚ್ಚಿಸಲಾಗಿದೆ.

**ಸಾಂಸ್ಕೃತಿಕ ಪುನರುತ್ಥಾನ**

- ಶತಮಾನಗಳ ಕಾಲದ ಕನಸಾಗಿದ್ದ ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರದ ನಿರ್ಮಾಣ ಮತ್ತು ಪ್ರಾಣ ಪ್ರತಿಷ್ಠಾಪನೆ.
- **ಸಾಂಸ್ಕೃತಿಕ ಕಾರಿಡಾರ್‌ಗಳು:** ಕಾಶಿ ವಿಶ್ವನಾಥ ಧಾಮ, ಉಜ್ಜಯಿನಿಯ ಮಹಾಕಾಳ ಲೋಕ ಮತ್ತು ಕೇದಾರನಾಥ ಕ್ಷೇತ್ರಗಳ ಜೀರ್ಣೋದ್ಧಾರ.

**ವಿಕಸಿತ ಭಾರತ**


- ಈ ಎಲ್ಲ ಯೋಜನೆಗಳೊಂದಿಗೆ ಮುಂದಿನ 2047ರಲ್ಲಿ ಭಾರತ ಹೇಗಿರಬೇಕು ಎಂಬ ಪರಿಕಲ್ಪನೆಯ ವಿಕಸಿತ ಭಾರತ ಯೋಜನೆ ರೂಪಿಸಿ ಈಗಾಗಲೇ ಅದಕ್ಕೆ ಅಡಿಗಲ್ಲು ಹಾಕಿರುವ ಶ್ರೇಯಸ್ಸು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ.
- ಭಾರತ ಈಗ ಹಿಂದಿನಂತೆ ಬಡ ದೇಶವಲ್ಲ, ಕ್ಷಿಪ್ರಗತಿಯಿಂದ ಪ್ರಗತಿ ಹೊಂದುತ್ತಿರುವ ದೇಶವಾಗಿದೆ. ಇಡೀ ವಿಶ್ವವೇ ತಿರುಗಿ ನೋಡುವಂಥ ಅಭಿವೃದ್ಧಿ ಸಾಧಿಸಿದೆ. ಆತ್ಮನಿರ್ಭರತೆ, ಸ್ವಾವಲಂಬಿಯಾಗಿ, ಆರ್ಥಿಕ ದೈತ್ಯ ಶಕ್ತಿಯಾಗಿ ವಿಶ್ವದ ಗಮನ ಸೆಳೆಯುವಂತೆ ದೇಶವನ್ನು ಬೆಳೆಸುವಲ್ಲಿ ಪ್ರಧಾನಿ ಮೋದಿ ಅವರ ಪಾತ್ರ ವಿಶಿಷ್ಟವಾಗಿದೆ ಎಂದು ಇಡೀ ವಿಶ್ವವೇ ನರೇಂದ್ರ ಮೋದಿ ನಾಯಕತ್ವಕ್ಕೆ ಮನ್ನಣೆ ನೀಡಿದೆ.



ಶುಭಾಶಯಗಳೊಂದಿಗೆ..

ವಿ.ಸೋಮಣ್ಣ, ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಸಚಿವರು, ನವದೆಹಲಿ

## ನಿತ್ಯ ಪಂಚಾಂಗ 16.09.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ

ಪರ್ಯೂಷಣ್ ಆರಂಭ (ದಿಗಣಬರ), ಮತ್ಸ್ಯೇಂದ್ರನಾಥ ಜ., ಶಿಗ್ಗಾಂವ ಗಜಾನನ ಪುಣ್ಯದಿನ, ವಿದ್ಯಾನಿಧಿತೀರ್ಥ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ವಂದೇಮಾತರಂ ಬಿಜೆಪಿ ಸ್ವತ್ತಲ್ಲ ಸಚಿವ ಬೈರತಿ ಸುರೇಶ್ ಕಿಡಿ

**ಚಿಕ್ಕಬಳ್ಳಾಪುರ, ಸೆ.15:** ವಂದೇ ಮಾತರಂ ಬಿಜೆಪಿಯ ಆಸ್ತಿಯಲ್ಲ ಎಂದು ಸಾರಿಗೆ ಸಚಿವ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ತಿರುಗೇಟು ನೀಡಿದ್ದಾರೆ. ವಂದೇ ಮಾತರಂ ವಿಚಾರದಲ್ಲಿ ಯಾವುದೇ ವಿವಾದವಿಲ್ಲ. ವಂದೇ ಮಾತರಂ ನಮಗೆಲ್ಲರಿಗೂ ಸೇರಿದ್ದು. ಇದು ಬಿಜೆಪಿ ಮತ್ತು ಬೇರೆ ಯಾರದ್ದೇ ಸ್ವತ್ತಲ್ಲ, ಪ್ರತಿಯೊಬ್ಬ ಭಾರತೀಯನಿಗೂ ಸೇರಿದ್ದು. ಈ ವಿಚಾರದಲ್ಲಿ ಯಾವುದೇ ಗೊಂದಲವಾಗಲಿ ಅಥವಾ ವಿವಾದವಾಗಲಿ ಇಲ್ಲ ಎಂದು ಹೇಳಿದರು.ಈ ವಿಚಾರವನ್ನು ಮುಂದಿಟ್ಟುಕೊಂಡು ಬಿಜೆಪಿಯವರು ಹೋರಾಟ ಮಾಡುವ ಬಗ್ಗೆ ತಿಳಿದಿಲ್ಲ. ಆದರೆ, ವಂದೇ ಮಾತರಂ ಯಾರೊಬ್ಬರ ಸ್ವತ್ತಲ್ಲ ಎಂದರು.

## ಇಂದು 108 ಗಣೇಶಮೂರ್ತಿ ವಿಸರ್ಜನೆ

**ಮಂಡ್ಯ, ಸೆ.15:** ಕಳೆದ ವರ್ಷ ಮದ್ದೂರಿನಲ್ಲಿ ಗಣೇಶ ವಿಸರ್ಜನಾ ಮೆರವಣಿಗೆ ವೇಳೆ ನಡೆದಿದ್ದ ಕಲ್ಲು ತೂರಾಟ ಮತ್ತು ಗಲಾಟೆ ಪ್ರಕರಣವನ್ನು ಸವಾಲಾಗಿ ಸ್ವೀಕರಿಸಿರುವ ಬಿಜೆಪಿ–ಜೆಡಿಎಸ್ ದೋಸ್ತಿ ನಾಯಕರು, ಈ ಬಾರಿ ಅತ್ಯಂತ ಅದ್ದೂರಿಯಾಗಿ 108 ಗಣೇಶ ಮೂರ್ತಿಗಳ ಸಾಮೂಹಿಕ ವಿಸರ್ಜನೆ ಮಾಡಲು ಬೃಹತ್ ಯೋಜನೆ ರೂಪಿಸಿದ್ದಾರೆ. ನಾಳೆ (ಬುಧವಾರ ಸೆ.16) ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣದಲ್ಲಿ ಈ ಬೃಹತ್ ಕಾರ್ಯಕ್ರಮ ನಡೆಯಲಿದೆ. ಗಣೇಶೋತ್ಸವದ ನೆಪದಲ್ಲಿ ಮಂಡ್ಯ ಜಿಲ್ಲೆಯಲ್ಲಿ ದೋಸ್ತಿ ಪಕ್ಷಗಳು ಒಂದಾಗಿ ತಮ್ಮ ರಾಜಕೀಯ ಶಕ್ತಿಯನ್ನೂ ಪ್ರದರ್ಶಿಸಲು ಸಜ್ಜಾಗಿವೆ. ಕಳೆದ ವರ್ಷ ಮದ್ದೂರು ಪಟ್ಟಣದಲ್ಲಿ ಗಣೇಶ ಮೂರ್ತಿಯ ಮೆರವಣಿಗೆ ಸಾಗುತ್ತಿದ್ದ ವೇಳೆ ಕಿಡಿಗೇಡಿಗಳು ಕಲ್ಲು ತೂರಾಟ ನಡೆಸಿದ್ದು ದೊಡ್ಡ ಮಟ್ಟದ ಕೋಮು ಸಂಘರ್ಷ ಹಾಗೂ ಬಿಗುವಿನ ವಾತಾವರಣಕ್ಕೆ ಕಾರಣವಾಗಿತ್ತು. ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಎನ್‌ಡಿಎ (ಏಕ–ಎಆಖ) ಮೈತ್ರಿಕೂಟದ ನಾಯಕರು, ಈ ಬಾರಿ ಅದೇ ಹಳೆಯ ಮಾರ್ಗದಲ್ಲೇ ಮೆರವಣಿಗೆ ನಡೆಸಲು ತೀರ್ಮಾನಿಸಿದ್ದಾರೆ.

# ಸರ್ಕಾರದಿಂದ ಇಂಜಿನಿಯರ್‌ಗಳ ದಿನಾಚರಣೆ: ಸಿಎಂ ಡಿಕೆಶಿ ಘೋಷಣೆ

**ಬೆಂಗಳೂರು, ಸೆ.15:** ಮುಂದಿನ ವರ್ಷದಿಂದ ಸರ್ಕಾರದ ವತಿಯಿಂದಲೇ ಇಂಜಿನಿಯರ್‌ಗಳ ದಿನ ಆಚರಣೆ ಮಾಡಲಾಗುವುದು ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಕೆ.ಆರ್. ವೃತ್ತದಲ್ಲಿ ಸರ್ ಎಂ. ವಿಶ್ವೇಶ್ವರಯ್ಯ ಪ್ರತಿಮೆಗೆ ಮಂಗಳವಾರ ಮಾಲಾರ್ಪಣೆ ಮಾಡಿದ ಬಳಿಕ ಪ್ರತಿಕ್ರಿಯೆ ನೀಡಿ, ಸರ್ಕಾರ ವತಿಯಿಂದ ಇಂಜಿನಿಯರ್ ದಿನ ಆಚರಿಸುವ ಪ್ರಸ್ತಾವನೆ ನೀಡಿದ್ದು, ಅದಕ್ಕೆ ಸಮ್ಮತಿ ಸೂಚಿಸಿದ್ದೇನೆ. ರಾಜ್ಯ ಪ್ರತಿ ವರ್ಷ 1 ಲಕ್ಷಕ್ಕೂ ಹೆಚ್ಚು ಇಂಜಿನಿಯರ್‌ಗಳನ್ನು ತಯಾರು ಮಾಡುತ್ತಿದೆ. ಭಾರತದಲ್ಲಿ ಅತಿ ಹೆಚ್ಚು ಇಂಜಿನಿಯರ್ ಇದ್ದು, ಅವರನ್ನು ಗುರುತಿಸುವುದು ನಮ್ಮ ಕರ್ತವ್ಯ. ಎಲ್ಲಾ ಇಂಜಿನಿಯರ್‌ಗಳು ರಾಜ್ಯದ ಉದ್ದಗಲ ಗಮನಿಸಬೇಕು. ಇದರ ರೂಪುರೇಷೆಗಳನ್ನು ಅಧಿಕಾರಿಗಳ ಜೊತೆ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ತಿಳಿಸಿದರು.



ಇಂದು ಇಂಜಿನಿಯರ್‌ಗಳ ದಿನವಾಗಿದ್ದು, ಸರ್ ಎಂ. ವಿಶ್ವೇಶ್ವರಯ್ಯ ಅವರಿಗೆ ಸರ್ಕಾರದ ಪರವಾಗಿ ಮಾಲಾರ್ಪಣೆ ಮಾಡಲಾಗಿದೆ. ಇಂಜಿನಿಯರ್‌ಗಳು ದೇಶದ ಆಸ್ತಿ. ವಿಜ್ಞಾನಿಗಳ ಸಂಶೋಧನೆಗಳನ್ನು ಕಾರ್ಯಗತಗೊಳಿಸುತ್ತಿರುವವರು ಇಂಜಿನಿಯರ್ ಗಳು. ಎಲ್ಲಾ ಅಭಿವೃದ್ಧಿಗೆ ಅಡಿಪಾಯ ಹಾಕುವವರು ಇಂಜಿನಿಯರ್ ಗಳು. ವಾಸ್ತುಶಿಲ್ಪದ ಪರಂಪರೆಯಲ್ಲಿ ನಾವು ಇಂಜಿನಿಯರ್ ಗಳನ್ನು ಗುರುತಿಸುತ್ತಿದ್ದೆವು. ಈಗ ಇಂಧನ, ಕಟ್ಟಡ ನಿರ್ಮಾಣ, ಐಟಿ ತಂತ್ರಜ್ಞಾನದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ವಿಶ್ವೇಶ್ವರಯ್ಯ ಅವರು ದೇಶಕ್ಕೆ ಮಾದರಿ. ಕರ್ನಾಟಕಕ್ಕೆ ಅವರ ಕೊಡುಗೆ ಅಪಾರ" ಎಂದು ತಿಳಿಸಿದರು.

## ಬಿಜೆಪಿಯವರ ಎದೆ ಸೀಳಿದರೆ ರಾಜ್ಯದ ಹಿತಕಾಯುವ ಒಂದೇ ಒಂದು ಅಂಶವಿಲ್ಲ: ಮುಖ್ಯಮಂತ್ರಿ ಕಿಡಿ

ಬೆಂಗಳೂರು, ಸೆ.15: ಬಿಜೆಪಿಯವರ ಎದೆ ಸೀಳಿದರೆ ರಾಜ್ಯದ ಹಿತ ಕಾಯುವ ಯಾವ ಅಂಶವೂ ಇಲ್ಲ. ಅವರದ್ದು ಕೇವಲ ರಾಜಕೀಯ ಮನಸ್ಥಿತಿ. ಅವರನ್ನು ಸರಿಪಡಿಸಲು ಆಗುವುದಿಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ಕಿಡಿಕಾರಿದರು. ಕೆ.ಆರ್. ವೃತ್ತದಲ್ಲಿ ಸರ್ ಎಂ.ವಿಶ್ವೇಶ್ವರಯ್ಯ ಅವರ ಪ್ರತಿಮೆಗೆ ಮಂಗಳವಾರ ಮಾಲಾರ್ಪಣೆ ಮಾಡಿದ ಬಳಿಕ ವಂದೇ ಮಾತರಂ ವಿಚಾರವಾಗಿ ಬಿಜೆಪಿ ಹೋರಾಟಕ್ಕೆ ಕರೆ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿ, ಎಲ್ಲದರಲ್ಲೂ ತಪ್ಪು ಕಂಡುಹಿಡಿಯುವ ಪ್ರವೃತ್ತಿ ಬಿಜೆಪಿ ನಾಯಕರದ್ದು. ಒಬ್ಬ ಪೊಲೀಸ್ ಅಧಿಕಾರಿ ಏನು ತಪ್ಪು ಮಾತನಾಡಿದ್ದಾರೆ, ಯಾವುದೇ ಅಹಿತಕರ ಘಟನೆ ನಡೆಯಬಾರದು ಎಂದು ಎಚ್ಚರಿಕೆ ಮಾತುಗಳನ್ನು ಆಡಿದ್ದಾರೆ. ಅದಕ್ಕೆ ಬಿಜೆಪಿಯವರು ಮಹಾರಾಜರನ್ನು ಬೀದಿಗೆ ತಂದು ನಿಲ್ಲಿಸಿದ್ದಾರೆ. ಪಂಚಾಯಿತಿ ಮಟ್ಟದ ವಿಚಾರಕ್ಕೆ ವಿರೋಧ ಪಕ್ಷದ ನಾಯಕರು ಹೋಗಿದ್ದು, ಅವರು ಈ ಮಟ್ಟಕ್ಕೆ ಇಳಿದಿದ್ದು ಯಾಕೆ ಎಂದು ಗೊತ್ತಿಲ್ಲ. ವಿರೋಧ ಪಕ್ಷದ ನಾಯಕ ಸ್ಥಾನ ಸಂವಿಧಾನಿಕ ಹುದ್ದೆ. ಅವರಿಂದ ಉನ್ನತ ನಡೆ ನಿರೀಕ್ಷೆ ಮಾಡುತ್ತೇನೆ ಎಂದರು. ಸಮಾಜದಲ್ಲಿ ಕಾನೂನು ಪಾಲನೆ ಮಾಡಬೇಕಾಗಿರುವುದು ಯಾರು, ಬಿಜೆಪಿಯವರು ಜನರನ್ನು ಪ್ರಚೋದನೆ ಮಾಡುವ ಕೆಲಸ ಮಾಡುತ್ತಿದ್ದು, ಅದನ್ನು ನಿಲ್ಲಿಸಬೇಕು. ಭಾರತಕ್ಕೆ ಕರ್ನಾಟಕದ ಮೂಲಕ ಗೌರವ ಸಿಗುತ್ತಿದ್ದು, ಇಲ್ಲಿ ಅಹಿತಕರ ಘಟನೆ ನಡೆದರೆ ತೊಂದರೆ ಆಗುವುದು ಭಾರತಕ್ಕೆ. ಪ್ರಧಾನ ಮಂತ್ರಿಗಳು ದೇಶದ ಬಗ್ಗೆ ಕಾಣುತ್ತಿರುವ ಕನಸಿಗೆ ಇಲ್ಲಿನ ಬಿಜೆಪಿ ನಾಯಕರು ಧಕ್ಕೆ ತರುವಂತೆ ರಾಜಕಾರಣ ಮಾಡುತ್ತಿದ್ದಾರೆ. ರಾಜಕೀಯ ಮಾಡುವುದಾದರೆ ಮಾಡಿ ಆದರೆ, ಮಾಡಿ ಅಶಾಂತಿ ಮೂಡಿಸಿ, ರಾಜ್ಯಕ್ಕೆ ಕೆಟ್ಟ ಹೆಸರು ತರುವ ಕೆಲಸ ಮಾಡಬೇಡಿ ಎಂದು ಮನವಿ ಮನವಿ ಮಾಡುತ್ತೇನೆ ಎಂದರು.

# ವಿಜಯದಶಮಿಯಿಂದ ಭ್ರಷ್ಟರ ವಿರುದ್ಧ ಯುದ್ಧ: ಎಚ್.ಡಿ.ಕುಮಾರಸ್ವಾಮಿ ಗುಡುಗು

**ಬೆಂಗಳೂರು,ಸೆ.15:** ಯಾವುದೋ ವಿಡಿಯೋ, ಜೈಲಿನ ವಿಷಯ ಇಟ್ಟುಕೊಂಡು ನನ್ನ ದನಿಯನ್ನು ಅಡಗಿಸಲು ಸಾಧ್ಯವಿಲ್ಲ. ವಿಜಯದಶಮಿಯಿಂದ ಭ್ರಷ್ಟರ ವಿರುದ್ಧ ಯುದ್ಧ ಆರಂಭವಾಗಲಿದೆ ಎಂದು ಕೇಂದ್ರ ಎಚ್.ಡಿ.ಕುಮಾರಸ್ವಾಮಿ ಎಚ್ಚರಿಕೆ ನೀಡಿದ್ದಾರೆ.

ಹೊಳೆನರಸೀಪುರ ತಾಲೂಕಿನ ಹರದನಹಳ್ಳಿಯ ಮಾವಿನಕೆರೆ ಶ್ರೀರಂಗನಾಥಸ್ವಾಮಿ ಬೆಟ್ಟದ ತಪ್ಪಲಿನಲ್ಲಿರುವ ತಮ್ಮ ತಾಯಿಯ ಸ್ಮೃತಿ ಸ್ಥಳಕ್ಕೆ ಹಾಗೂ ಬೆಟ್ಟದ ಮೇಲೆ ಶ್ರೀರಂಗನಾಥಸ್ವಾಮಿಗೆ ಪೂಜೆ ಸಲ್ಲಿಸಿದ ನಂತರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ನಾನು ಅಮೆರಿಕಕ್ಕೆ ತೆರಳುವ ಮುನ್ನ ಹಲವಾರು ವಿಷಯಗಳನ್ನು ಪ್ರಸ್ತಾಪ ಮಾಡಿದ್ದೆ. ಕೆಪಿಎಸ್‌ಸಿ, ಬಿಡದಿ ಟೌನ್ ಶಿಪ್, ನೈಸ್ ಹಗರಣಗಳ ಬಗ್ಗೆ ಗುರುತರ ಆರೋಪಗಳನ್ನು ಮಾಡಿದ್ದೆ. ಇದು ಕೆಲವರ ಬುಡಕ್ಕೆ ನೀರು ಬರುವ ಹಾಗೆ ಮಾಡಿದೆ. ಹೀಗಾಗಿ ನಮ್ಮ ಕುಟುಂಬದ ಬಾಯಿ ಮುಚ್ಚಿಸಲು ಜೈಲಿನ ವಿಷಯಗಳನ್ನು ತೇಲಿಬಿಡಲಾಗಿದೆ ಎಂದು ಸಚಿವರು ಆರೋಪಿಸಿದರು.

ಕೆಲವು ವಿಷಯಗಳನ್ನು ಸಾರ್ವಜನಿಕವಾಗಿ ಇಡುತ್ತೇನೆ ಎಂದು ಹೇಳಿದ್ದೇನೆ. ನಮ್ಮ ವಿರೋಧಿಗಳು ಲಘುವಾಗಿ ಎಷ್ಟೇ ಮಾತನಾಡಿದರೂ ಉದ್ವೇಗಕ್ಕೆ



ಒಳಗಾಗುವುದಿಲ್ಲ. ದಾಖಲೆಗಳ ಸಮೇತವೇ ನಾಡಿನ ಜನತೆ ಮುಂದೆ ಯಾವುದೇ ಅಂಜಿಕೆ, ಅಳಲು ಇಲ್ಲದೆ ವಿಷಯಗಳನ್ನು ಇಡುತ್ತೇನೆ. ಇದು ನಮ್ಮ ತಂದೆಯಿಂದ ನನಗೆ ಬಂದ ಬಳುವಳಿ ಇದು. ದಾಖಲೆಗಳಲ್ಲಿದೆ ನಾನು ಮಾತನಾಡುವುದಿಲ್ಲ ಎಂದು ಅವರು ಹೇಳಿದರು.

ನೈಸ್ ಗುತ್ತಿಗೆದಾರ ಮತ್ತು ಮುಖ್ಯಮಂತ್ರಿ ಭೇಟಿ ಮಾಡಿರೋದನ್ನು ನೋಡಿದ್ದೇನೆ. ಬೇರೆಯವರ ರೀತಿ ಜನ ಬಿಟ್ಟು ಹೊಡೆಸೋ ಕೆಲಸ ಮಾಡೋಲ್ಲ. ಇದಕ್ಕೆಲ್ಲಾ ಕಾಲವೇ ಉತ್ತರ ಕೊಡುತ್ತೆ ಎಂದು ಪರೋಕ್ಷವಾಗಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್‌ಗೆ ತಿರುಗೇಟು ನೀಡಿದ್ದಾರೆ. ರಾಜ್ಯದಲ್ಲಿ ನಾಲ್ಕು ಅಂಗಗಳು ಕೆಲಸ ಮಾಡುತ್ತಿವೆ. ನಾಲ್ಕನೇ ಅಂಗ ಮಾಧ್ಯಮ. ಇವುಗಳಲ್ಲಿ ಯಾವುದೇ ಒಂದು ಅಂಗ ಅಲುಗಾಡಿದರೂ ಅಂಬೇಡ್ಕರ್ ನೀಡಿದ ಸಂವಿಧಾನಕ್ಕೆ ಮೋಸ ಮಾಡಿದಂತೆ. ಎಲ್ಲ ಸಿದ್ಧತೆ ಮಾಡಿಕೊಂಡು ಜನರ ಮುಂದಿಡಲಿದ್ದೇನೆ. ನಾಡಿನ ಜನತೆಯೇ ಇದಕ್ಕೆಲ್ಲ ಒಂದು ಕ್ರಮ ಕೈಗೊಳ್ಳಬೇಕಿದೆ ಎಂದರು.

ಅಂದಹಾಗೆ ನನಗೆ ಯಾರ ಮೇಲೂ ಅಸೂಯೆ ಆಗಲಿ, ಈರ್ಶೆ ಆಗಲಿ ಇಲ್ಲ. ನಮ್ಮ ಜಾತಿಯವನೊಬ್ಬ ಮುಖ್ಯಮಂತ್ರಿ ಇದ್ದಾರೆ, ಅವರಿಗೆ ತೊಂದರೆ ಕೊಡಬೇಕು ಎಂದು ಬಯಸಿಲ್ಲ. ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಬೆಂಬಲ ಕೊಡುತ್ತೇನೆ. ಆದರೆ ಸಿಕ್ಕಿರೋ ಅಧಿಕಾರ ದುರುಪಯೋಗಕ್ಕೆ ಮುಂದಾದರೆ ಸಹಿಸಲ್ಲ ರಾಜಕೀಯ ಜೀವನದಲ್ಲಿ ಪರ–ವಿರೋಧ ಎರಡೂ ಇರುತ್ತವೆ. ಸತ್ಯ ಏನೆಂಬುದು ಜನರು ತೀರ್ಮಾನ ಮಾಡ್ತಾರೆ ಎಂದಿದ್ದಾರೆ.

## ಕೆಪಿಎಸ್‌ಸಿ ಹಗರಣ: ಜಪ್ತಿ ಮಾಡಿದ ಹಣ ಯಾರದ್ದು, ಬಹಿರಂಗಪಡಿಸಿ


ಇನ್ನು ಕೆಪಿಎಸ್‌ಸಿ ಹಗರಣ ವಿಚಾರವಾಗಿ ಮಾತನಾಡಿದ ಕುಮಾರಸ್ವಾಮಿ ಅವರು, ಕೆಪಿಎಸ್‌ಸಿಯಲ್ಲಿ ಆದ ಹಗರಣದ ಹಣವನ್ನು ಜಪ್ತಿ ಮಾಡಿದ್ದೇವೆ ಎನ್ನುತ್ತಾರೆ. ಅದು ಯಾರ ಹಣ ಎಂದು ತಿಳಿಸಬೇಕಲ್ಲವೇ, ಅದನ್ನು ಸಾಕ್ಷಿಗಳು ಹೇಳಬೇಕಿದೆ. ಸಾಕ್ಷಿ ಸಮೇತ ಜನರ ಮುಂದೆ ಇಡೋದು ನನ್ನ ಜವಾಬ್ದಾರಿ ಎಂದಿದ್ದಾರೆ. ಇನ್ನು ಕೆಪಿಎಸ್‌ಸಿ, ಬಿಡದಿ ಹೋರಾಟದ ನಡುವೆಯೂ ಪ್ರಜ್ವಲ್ ರೇವಣ್ಣ ವಿಚಾರ ಮತ್ತೆ ಮುನ್ನಲೆಗೆ ತಂದ ಕುಮಾರಸ್ವಾಮಿಯವರು, ಆ ಹುಡುಗ ಜೈಲಿಗೆ ಹೋಗಿ ಎರಡು ವರ್ಷವಾಯಿತು. ನ್ಯಾಯಾಂಗ ತೀರ್ಮಾನಕ್ಕೆ ತಲೆಬಾಗುತ್ತೇವೆ. ನಮ್ಮ ಕುಟುಂಬ ಮುಗಿಸಲು ಏನೆಲ್ಲ ಪ್ಲಾನ್ ಮಾಡಿದ್ರಿ ನಿಮ್ಮಿಂದ ಅದು ಸಾಧ್ಯವಾ ಜೈಲಿನಲ್ಲಿ ಪ್ರಜ್ವಲ್‌ಗೆ ಮೊಬೈಲ್ ಎಲ್ಲಿ ಸಿಕ್ತು? ತಲುಪಿಸಿದ್ದು ಯಾರು? ಅವನಿಗೆ ಮೊಬೈಲ್ ಕೊಟ್ಟಿದ್ದು ನಾವಾ ಜೈಲಿನೊಳಗೆ ಅಶ್ಲೀಲ ಚಿತ್ರಗಳ ಪೆನ್‌ಡ್ರೈವ್ ಅವನಿಗೆ ಸಿಕ್ಕಿದ್ದಾದರೂ ಹೇಗೆ ಇಲ್ಲಿ ಈ ಸರ್ಕಾರದ್ದೇ ಕುತಂತ್ರ ಇರಬಹುದಾ? ಎಂದು ಎಚ್‌ಡಿಕೆ ಅಸಮಾಧಾನ ವ್ಯಕ್ತಪಡಿಸಿದರು.

### 110 ನವೋದ್ಯಮಗಳ ಪೈಕಿ 36 ಬೆಂಗಳೂರಿನಲ್ಲೇ ಸ್ಥಾಪನೆ: ಗೃಹ, ಐಟಿ ಬಿಟಿ, ಸಚಿವ ಪ್ರಿಯಾಂಕ್ ಖರ್ಗೆ ಹರ್ಷ

# ಹುರೂನ್ ಇಂಡಿಯಾ ಚೀತಾ ಸೂಚ್ಯಂಕದಲ್ಲಿ ಬೆಂಗಳೂರಿಗೆ ದೇಶದಲ್ಲೇ ಅಗ್ರಸ್ಥಾನ

**ಬೆಂಗಳೂರು, ಸೆ.15:** 2026ರ ಎ.ಎಸ್.ಕೆ ಪ್ರೈವೇಟ್ ವೆಲ್ತ್ ಹುರೂನ್ ಇಂಡಿಯಾ ಚೀತಾ ಸೂಚ್ಯಂಕದಲ್ಲಿ ಬೆಂಗಳೂರು ದೇಶದಲ್ಲೇ ಮೊದಲ ಸ್ಥಾನ ಪಡೆದಿದ್ದು, ಒಟ್ಟು 110 ನವೋದ್ಯಮಗಳಲ್ಲಿ 36 ನವೋದ್ಯಮಗಳು ಬೆಂಗಳೂರಿನಲ್ಲಿ ನೆಲೆಯೂರಿವೆ ಎಂದು ಐಟಿ–ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಎನ್‌ಸಿಆರ್ 25 ಮತ್ತು ಮುಂಬೈ 16 ನವೋದ್ಯಮಗಳೊಂದಿಗೆ ಬೆಂಗಳೂರಿನ ನಂತರದ ಸ್ಥಾನ ಪಡೆದಿವೆ. 2021ರಲ್ಲಿ 54 ಇದ್ದ ಚೀತಾ ನವೋದ್ಯಮಗಳ ಸಂಖ್ಯೆ 2026ರಲ್ಲಿ 110ಕ್ಕೆ ಏರಿಕೆಯಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ



ಪೋಸ್ಟ್ ಮಾಡಿದ್ದಾರೆ.

ಚೀತಾ ಎಂದರೆ ಷೇರುಪೇಟೆಯಲ್ಲಿ ನೋಂದಣಿಯಾಗದ, 20ರಿಂದ 50 ಕೋಟಿ ಅಮೆರಿಕನ್ ಡಾಲರ್ ಮೌಲ್ಯ ಹೊಂದಿರುವ ಹಾಗೂ ಮುಂದಿನ ಐದು ವರ್ಷಗಳಲ್ಲಿ ಯೂನಿಕಾರ್ನ್ ಆಗುವ ಸಾಮರ್ಥ್ಯ ಹೊಂದಿರುವ ನವೋದ್ಯಮಗಳಾಗಿವೆ ಎಂಬ ಮಾಹಿತಿಯನ್ನು ಸಚಿವರು ನೀಡಿದ್ದಾರೆ.

ಬೆಂಗಳೂರಿನ ನವೋದ್ಯಮ ಪರಿಸರದ ವೈವಿಧ್ಯತೆ ಮತ್ತು ಬೆಳವಣಿಗೆಗೆ ಈ ಸಾಧನೆ ಸಾಕ್ಷಿಯಾಗಿದೆ. ಹಣಕಾಸು ತಂತ್ರಜ್ಞಾನ, ಸಾಫ್ಟ್‌ವೇರ್ ಸೇವೆಗಳು, ಕೃತಕ ಬುದ್ಧಿಮತ್ತೆ, ಅಂತರಿಕ್ಷ ಮತ್ತು ರಕ್ಷಣಾ ತಂತ್ರಜ್ಞಾನ, ವಿದ್ಯುತ್ ಚಾಲಿತ ಸಾರಿಗೆ, ಆರೋಗ್ಯ ತಂತ್ರಜ್ಞಾನ ಹಾಗೂ ಗ್ರಾಹಕ ಉತ್ಪನ್ನಗಳಂತಹ ವಿವಿಧ ಕ್ಷೇತ್ರಗಳಲ್ಲಿ ಬೆಂಗಳೂರಿನ ನವೋದ್ಯಮಗಳು ಮುಂಚೂಣಿಯಲ್ಲಿವೆ. ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಕ್ವಿಪಿಐಎಐ, ದಿಗಂತರಾ, ಪಿಕ್ಸೆಲ್, ರಿವರ್ ಮೊಬಿಲಿಟಿ ಮತ್ತು ಅಲ್ಟ್ರಾಹ್ಯೂಮನ್ ಸೇರಿದಂತೆ ಬೆಂಗಳೂರಿನ ಹಲವು ನವೋದ್ಯಮಗಳು ಈ ಪಟ್ಟಿಯಲ್ಲಿ ಸ್ಥಾನ ಪಡೆದಿರುವುದು ರಾಜ್ಯದ ನಾವೀನ್ಯತೆ ಮತ್ತು ಉದ್ಯಮಶೀಲತೆಯ ವ್ಯಾಪ್ತಿಯನ್ನು ತೋರಿಸುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಎಲ್ಲ ಸಂಸ್ಥಾಪಕರು ಮತ್ತು ನವೋದ್ಯಮಗಳನ್ನು ಸಚಿವ ಪ್ರಿಯಾಂಕ್ ಖರ್ಗೆ ಅಭಿನಂದಿಸಿದ್ದು, ಇವು ಮುಂದಿನ ಪೀಳಿಗೆಯ ದೊಡ್ಡ ಭಾರತೀಯ ಉದ್ಯಮಗಳನ್ನು ನಿರ್ಮಿಸುತ್ತಿವೆ ಎಂಬುದು ಹೆಮ್ಮೆಯ ಸಂಗತಿ ಎಂದು ಬಣ್ಣಿಸಿದ್ದಾರೆ.



ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಆಯೋಜಿಸಿದ್ದ ಸೇವಾ ಸಂಕಲ್ಪ ಅಭಿಯಾನ ಕುರಿತ ಪತ್ರಿಕಾಗೋಷ್ಠಿಯಲ್ಲಿ ಕೇಂದ್ರ ಸಚಿವ ಜೆ.ಪಿ.ನಡ್ಡಾ, ಅವರು ಭಾಗವಹಿಸಿದರು. ಈ ಸಂದರ್ಭದಲ್ಲಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಸಂಸದ ಡಾ.ಸಿ.ಎನ್.ಮಂಜುನಾಥ್ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ, ಪ್ರತಿಪಕ್ಷ ನಾಯಕ ಆರ್.ಅಶೋಕ್, ವಿಧಾನಪರಿಷತ್‌ನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕ ಡಾ.ಸಿ.ಎನ್.ಅಶ್ವತ್ಥನಾರಾಯಣ, ರಾಜ್ಯ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ ಸೇರಿದಂತೆ ಪಕ್ಷದ ಪ್ರಮುಖ ಮುಖಂಡರು ಹಾಜರಿದ್ದರು.

# ಸುಸ್ಥಿರ ಜೈವಿಕ ಇಂಧನ ಕ್ಷೇತ್ರದ ಪರಿವರ್ತನೆ, ಅಭಿವೃದ್ಧಿಗೆ ಕರ್ನಾಟಕ ತೆಲಂಗಾಣ ಸಹಕಾರ ಅತ್ಯಂತ ಮಹತ್ವ: ಎಸ್.ಈ.ಸುಧೀಂದ್ರ

**ಬೆಂಗಳೂರು,ಸೆ.15:** ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷರಾದ ಎಸ್.ಈ. ಸುಧೀಂದ್ರ ಅವರು ತೆಲಂಗಾಣದ ಉಪಮುಖ್ಯಮಂತ್ರಿ ಹಾಗೂ ಹಣಕಾಸು, ಯೋಜನೆ ಮತ್ತು ಇಂಧನ ಸಚಿವರಾದ ಮಲ್ಲು ಭಟ್ಟಿ ವಿಕ್ರಮಾರ್ಕ ಅವರನ್ನು ಹೈದರಾಬಾದಿನ ಅವರ ಗೃಹ ಕಚೇರಿಯಲ್ಲಿ ಭೇಟಿ ಮಾಡಿ, ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳ ನಡುವೆ ಜೈವಿಕ ಇಂಧನ ಕ್ಷೇತ್ರದಲ್ಲಿ ಸಹಕಾರ, ಪಾಲುದಾರಿಕೆ ಹಾಗೂ ಭವಿಷ್ಯದಲ್ಲಿ ಕೈಗೊಳ್ಳಬಹುದಾದ ಒಪ್ಪಂದಗಳ ಕುರಿತು ವಿವರವಾದ ಚರ್ಚೆ ನಡೆಸಿದರು. ಈ ಸಭೆಯಲ್ಲಿ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಗೆ ಲಭ್ಯವಿರುವ ಅವಕಾಶಗಳು, ಎರಡು ರಾಜ್ಯಗಳ ನಡುವಿನ ಅಂತರರಾಜ್ಯ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಸಾಧ್ಯತೆಗಳು ಹಾಗೂ ಹೂಡಿಕೆಗಳನ್ನು ಆಕರ್ಷಿಸಲು ಮತ್ತು ಜೈವಿಕ ಇಂಧನ ಕ್ಷೇತ್ರದ ಸಮಗ್ರ ಬೆಳವಣಿಗೆಯನ್ನು ಉತ್ತೇಜಿಸಲು ಮಂಡಳಿ ಕೈಗೊಂಡಿರುವ ವಿವಿಧ ಉಪಕ್ರಮಗಳ ಕುರಿತು ವಿವರವಾಗಿ ಚರ್ಚಿಸಲಾಯಿತು. ವಿಶೇಷವಾಗಿ ತಂತ್ರಜ್ಞಾನ ವಿನಿಮಯ, ಹೂಡಿಕೆ ಉತ್ತೇಜನ, ವಾಣಿಜ್ಯೀಕರಣ, ಸಂಶೋಧನೆ ಮತ್ತು ನಾವೀನ್ಯತೆ ಹಾಗೂ ಜೈವಿಕ ಇಂಧನ ಕ್ಷೇತ್ರದ ಸುಸ್ಥಿರ ಅಭಿವೃದ್ಧಿ ಸೇರಿದಂತೆ ವಿವಿಧ ಆಯಾಮಗಳಲ್ಲಿ ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳ ನಡುವಿನ ಸಹಕಾರವನ್ನು ಬಲಪಡಿಸುವ ಕುರಿತು ಸಭೆಯಲ್ಲಿ ಗಮನ ಹರಿಸಲಾಯಿತು.ಎರಡೂ



ರಾಜ್ಯಗಳಲ್ಲಿ ಲಭ್ಯವಿರುವ ಸಾಮರ್ಥ್ಯಗಳು ಮತ್ತು ಅವಕಾಶಗಳನ್ನು ಪರಿಣಾಮಕಾರಿಯಾಗಿ ಸಮನ್ವಯಗೊಳಿಸಿ ಬಳಸಿಕೊಳ್ಳುವ ಮೂಲಕ ಹೂಡಿಕೆ, ತಂತ್ರಜ್ಞಾನ ಅಭಿವೃದ್ಧಿ ಮತ್ತು ಕೈಗಾರಿಕಾ ಸಹಕಾರಕ್ಕೆ ಹೊಸ ಅವಕಾಶಗಳನ್ನು ಸೃಷ್ಟಿಸಬಹುದಾದ್ದರಿಂದ ಎರಡೂ ರಾಜ್ಯಗಳ ಸರ್ಕಾರಗಳಿಗೆ ನೇರವಾಗಿ ಪ್ರಯೋಜನವಾಗುವಂತಹ ಸಕಾರಾತ್ಮಕ ಫಲಿತಾಂಶಗಳನ್ನು ಸಾಧಿಸಲು ಸಾಧ್ಯವಾಗಲಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು. ಇಂತಹ ಸಹಯೋಗಾತ್ಮಕ ಆಡಳಿತ ಕ್ರಮಗಳು ಶುದ್ಧ ಇಂಧನದತ್ತದ ಪರಿವರ್ತನೆಯನ್ನು ವೇಗಗೊಳಿಸುವುದರ ಜೊತೆಗೆ, ಎರಡೂ ರಾಜ್ಯಗಳ ಸರ್ಕಾರಗಳು ಜನತೆಗೆ ಸ್ಪಷ್ಟವಾದ ಮತ್ತು ನೇರವಾದ ಫಲಿತಾಂಶಗಳನ್ನು ನೀಡಲು ಸಹಕಾರಿಯಾಗುತ್ತವೆ. ಹೊಸ ಹೂಡಿಕೆಗಳನ್ನು ಆಕರ್ಷಿಸುವುದು, ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಹಾಗೂ ಸುಸ್ಥಿರತೆ ಮತ್ತು ಇಂಧನ ಭದ್ರತೆಯ ಗುರಿಗಳತ್ತ ಪ್ರಗತಿ ಸಾಧಿಸುವುದು ಇದರ ಪ್ರಮುಖ ಉದ್ದೇಶಗಳಾಗಿವೆ. ಈ ಸಹಕಾರದ ಉಪಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವ ಮೂಲಕ ಪರಿಣಾಮಕಾರಿ ಅಂತರರಾಜ್ಯ ಸಹಕಾರ ಮತ್ತು ಆಡಳಿತದ ಮಾದರಿಯನ್ನು ರೂಪಿಸಬಹುದಾಗಿದ್ದು, ಸುಸ್ಥಿರ ಅಭಿವೃದ್ಧಿಯ ಬದ್ಧತೆಯ ಕುರಿತು ಎರಡೂ ರಾಜ್ಯಗಳ ಸರ್ಕಾರಗಳ ಮೇಲಿನ ಜನರ ವಿಶ್ವಾಸವನ್ನು ಮತ್ತಷ್ಟು ಬಲಪಡಿಸಬಹುದು ಎಂದು ತಿಳಿಸಲಾಯಿತು. ಮಂಡಳಿ ವತಿಯಿಂದ ಪ್ರಸ್ತಾಪಿಸಲಾದ ವಿವಿಧ ಸಹಕಾರದ ಸಾಧ್ಯತೆಗಳಿಗೆ ಉಪಮುಖ್ಯಮಂತ್ರಿ ಮಲ್ಲು ಭಟ್ಟಿ ವಿಕ್ರಮಾರ್ಕ ಅವರು ಸಕಾರಾತ್ಮಕವಾಗಿ ಸ್ಪಂದಿಸಿದರು. ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಗಾಗಿ ಕರ್ನಾಟಕ ಮತ್ತು ತೆಲಂಗಾಣ ರಾಜ್ಯಗಳ ನಡುವಿನ ಪರಸ್ಪರ ಸಹಕಾರ ಮತ್ತು ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಬಗ್ಗೆ ಅವರು ಆಸಕ್ತಿ ವ್ಯಕ್ತಪಡಿಸಿದರು. ಜೈವಿಕ ಇಂಧನ ಕ್ಷೇತ್ರದಲ್ಲಿ ಹೂಡಿಕೆಗಳನ್ನು ಉತ್ತೇಜಿಸುವುದು, ತಂತ್ರಜ್ಞಾನ ವಿನಿಮಯಕ್ಕೆ ಪ್ರೋತ್ಸಾಹ ನೀಡುವುದು ಹಾಗೂ ಸುಸ್ಥಿರ ಮತ್ತು ಪರಿಸರ ಸ್ನೇಹಿ ಇಂಧನ ವ್ಯವಸ್ಥೆಯ ನಿರ್ಮಾಣಕ್ಕೆ ಕೊಡುಗೆ ನೀಡುವ ಉದ್ದೇಶದಿಂದ ಮುಂದಿನ ದಿನಗಳಲ್ಲಿ ಸಹಕಾರವನ್ನು ವಿಸ್ತರಿಸುವ ಕುರಿತು ಸಭೆಯಲ್ಲಿ ಒಮ್ಮತ ವ್ಯಕ್ತವಾಯಿತು. ಈ ಸಭೆಯ ಸಂದರ್ಭದಲ್ಲಿ ತೆಲಂಗಾಣದ ಉಪಮುಖ್ಯಮಂತ್ರಿ ಅವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ತಕ್ಷಣವೇ ಕರ್ನಾಟಕದ ಜೈವಿಕ ಇಂಧನ ಕ್ಷೇತ್ರಕ್ಕೆ ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಪ್ರಸ್ತಾಪಿತ ಸಹಕಾರದ ಕ್ಷೇತ್ರಗಳನ್ನು ಮುಂದಕ್ಕೆ ಕೊಂಡೊಯ್ಯಲು ಸಭೆಯನ್ನು ಆಯೋಜಿಸುವಂತೆ ನಿರ್ದೇಶನ ನೀಡಿದರು.ಈ ಸಭೆಯಲ್ಲಿ ಸತೀಶ್ ಚುಕ್ಕಪಳ್ಳಿ ಹಾಗೂ ಮಂಡಳಿಯ ಅಧ್ಯಕ್ಷರ ಸಲಹೆಗಾರರಾದ ಡಾ. ಶಿಜು ಸೆಬಾಸ್ಟಿಯನ್ ಹಾಗೂ ಎರಡೂ ರಾಜ್ಯಗಳ ಉನ್ನತ ಅಧಿಕಾರಿಗಳು ಭಾಗವಹಿಸಿದ್ದರು

# ಇಂದು ಬೆಂಗಳೂರಿಗೆ ವೇಣುಗೋಪಾಲ್ ಸುರ್ಜೇವಾಲಾ ಭೇಟಿ: ಮಹತ್ವದ ಸಮಾಲೋಚನೆ

### ರಾಜ್ಯ ಕಾಂಗ್ರೆಸ್‌ನಲ್ಲಿ ರಾಜಕೀಯ ಹಾಗೂ ಸಂಘಟನಾ ವಿಚಾರಗಳ ಕುರಿತು ಚರ್ಚೆ ಸಾಧ್ಯತೆ

**ಬೆಂಗಳೂರು, ಸೆ.15:** ಕರ್ನಾಟಕ ಕಾಂಗ್ರೆಸ್‌ನಲ್ಲಿ ಹಲವು ದಿನಗಳಿಂದ ಚರ್ಚೆಯಲ್ಲಿರುವ ಪ್ರಮುಖ ರಾಜಕೀಯ ಹಾಗೂ ಸಂಘಟನಾ ವಿಚಾರಗಳ ಕುರಿತು ಮಹತ್ವದ ಸಮಾಲೋಚನೆ ನಡೆಯುವ ಸಾಧ್ಯತೆ ಇದೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಹಾಗೂ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಬುಧವಾರ ರಾತ್ರಿ ಬೆಂಗಳೂರಿಗೆ ಆಗಮಿಸಲಿದ್ದು, ಗುರುವಾರ ಪೂರ್ತಿ ಸರಣಿ ಸಭೆಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ.

ರಾಜ್ಯ ಕಾಂಗ್ರೆಸ್‌ನ ಪ್ರಸಕ್ತ ರಾಜಕೀಯ ಪರಿಸ್ಥಿತಿ, ಸರ್ಕಾರದ ಕಾರ್ಯವೈಖರಿ ಹಾಗೂ ಪಕ್ಷ ಸಂಘಟನೆಗೆ ಸಂಬಂಧಿಸಿದ ಹಲವು ವಿಷಯಗಳ ಕುರಿತು ಉಭಯ ನಾಯಕರು ರಾಜ್ಯದ ಪ್ರಮುಖ ನಾಯಕರೊಂದಿಗೆ ಚರ್ಚೆ ನಡೆಸಲಿದ್ದಾರೆ ಎನ್ನಲಾಗಿದೆ.

ಸದ್ಯ ಖಾಲಿ ಇರುವ ಸಚಿವ ಸ್ಥಾನಗಳನ್ನು ಭರ್ತಿ ಮಾಡುವ ವಿಚಾರ ಪ್ರಮುಖವಾಗಿ ಚರ್ಚೆಗೆ ಬರುವ ಸಾಧ್ಯತೆ ಇದೆ. ಸಚಿವ ಸಂಪುಟ ಪುನರ್‌ರಚನೆ ಅಥವಾ ವಿಸ್ತರಣೆ ಕುರಿತು ಪಕ್ಷದೊಳಗೆ ಹಲವು ಹಂತಗಳಲ್ಲಿ ಚರ್ಚೆ ನಡೆಯುತ್ತಿದ್ದು, ಯಾರಿಗೆ ಅವಕಾಶ ನೀಡಬೇಕು, ಪ್ರಾದೇಶಿಕ ಹಾಗೂ ಸಾಮಾಜಿಕ ಸಮತೋಲನ ಹೇಗೆ ಕಾಯ್ದುಕೊಳ್ಳಬೇಕು ಎಂಬ ಬಗ್ಗೆಯೂ ಅಭಿಪ್ರಾಯ ಸಂಗ್ರಹಿಸುವ ಸಾಧ್ಯತೆ ಇದೆ. ವಿಶೇಷವಾಗಿ ಸಚಿವ ಸ್ಥಾನಕ್ಕಾಗಿ ಆಕಾಂಕ್ಷೆ ಹೊಂದಿರುವ ಶಾಸಕರು ಹಾಗೂ ಪಕ್ಷದ ಹಿರಿಯ ನಾಯಕರ ರಾಜಕೀಯ ಪ್ರಾತಿನಿಧ್ಯ ಸೇರಿದಂತೆ ಹಲವು ಅಂಶಗಳು ಚರ್ಚೆಯ ಭಾಗವಾಗುವ ನಿರೀಕ್ಷೆಯಿದೆ. ಇದರ ಜೊತೆಗೆ ರಾಜ್ಯದ ವಿವಿಧ ನಿಗಮ, ಮಂಡಳಿ ಹಾಗೂ ಸರಕಾರಿ ಸಂಸ್ಥೆಗಳಿಗೆ ಬಾಕಿ ಇರುವ ನೇಮಕಾತಿ ಪ್ರಕ್ರಿಯೆಗೂ ವೇಗ ನೀಡುವ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರಿಗೆ ಅಧಿಕಾರದಲ್ಲಿ ಸೂಕ್ತ ಪ್ರಾತಿನಿಧ್ಯ ಕಲ್ಪಿಸುವ ನಿಟ್ಟಿನಲ್ಲಿ ನೇಮಕಾತಿಗಳನ್ನು ಪೂರ್ಣಗೊಳಿಸುವ ಕುರಿತು ರಾಜ್ಯ ನಾಯಕರಿಂದ ಮಾಹಿತಿ ಪಡೆಯುವ ಸಾಧ್ಯತೆ ಇದೆ. ಮುಂಬರುವ ದಿನಗಳಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಸಂಘಟಿಸುವುದು, ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ಪಕ್ಷದ ಚಟುವಟಿಕೆಗಳನ್ನು ಬಲಪಡಿಸುವುದು, ನಾಯಕರ ನಡುವಿನ ಸಮನ್ವಯ ಹೆಚ್ಚಿಸುವುದು ಸೇರಿದಂತೆ ಸಂಘಟನಾ ವಿಚಾರಗಳ ಬಗ್ಗೆಯೂ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಯಿದೆ.

ಮುಂಬರುವ ಗ್ರಾಮ ಪಂಚಾಯಿತಿ ಚುನಾವಣೆಗಳು ಕೂಡ ಪಕ್ಷದ ಮುಂದಿರುವ ಪ್ರಮುಖ ಸವಾಲಾಗಿರುವ ಹಿನ್ನೆಲೆಯಲ್ಲಿ, ಸ್ಥಳೀಯ ಮಟ್ಟದಲ್ಲಿ ಪಕ್ಷದ ಸಂಘಟನೆ ಹಾಗೂ ಚುನಾವಣಾ ಸಿದ್ಧತೆಗಳ ಬಗ್ಗೆಯೂ ಚರ್ಚೆ ನಡೆಯಬಹುದು. ಇದರ ನಡುವೆ, ಸರ್ಕಾರ 100 ದಿನ ಪೂರೈಸಿದ ಸಂದರ್ಭದಲ್ಲಿ ನಡೆದ ಕಾರ್ಯಕ್ರಮಕ್ಕೆ ತಮ್ಮನ್ನು ಆಹ್ವಾನಿಸಿರಲಿಲ್ಲ ಎಂಬ ವಿಚಾರವಾಗಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ವ್ಯಕ್ತಪಡಿಸಿರುವ ಅಸಮಾಧಾನವೂ ಚರ್ಚೆಯ ವ್ಯಾಪ್ತಿಗೆ ಬರುವ ಸಾಧ್ಯತೆ ಇದೆ.

ಪಕ್ಷ ಹಾಗೂ ಸರ್ಕಾರದ ನಡುವೆ ಸಮನ್ವಯ, ಹಿರಿಯ ನಾಯಕರಿಗೆ ನೀಡಬೇಕಾದ ಗೌರವ ಮತ್ತು ಪಕ್ಷದ ಪ್ರಮುಖ ನಾಯಕರನ್ನು ಸರ್ಕಾರದ ಕಾರ್ಯಕ್ರಮಗಳಲ್ಲಿ ಒಳಗೊಳ್ಳುವ ವಿಚಾರದ ಕುರಿತು ಹೈಕಮಾಂಡ್ ನಾಯಕರು ರಾಜ್ಯ ನಾಯಕರೊಂದಿಗೆ ಮಾತುಕತೆ ನಡೆಸುವ ಸಾಧ್ಯತೆ ಇದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

**ಮುನ್ನೆಚ್ಚರಿಕೆ ನೀಡಿದ್ದನ್ನೇ ತಪ್ಪಾಗಿ ಬಿಂಬಿಸಿ ಪ್ರತಿಭಟನೆ ನಡೆಸುವುದು ಸರಿಯಲ್ಲ: ಸಿಎಂ ಅಸಮಾಧಾನ**

# ಮಸೀದಿ ರಸ್ತೆಯಲ್ಲಿ ಮೆರವಣಿಗೆ ಮಾಡಬೇಡಿ ಎಂದು ಪೊಲೀಸರು ಹೇಳಿದ್ದರಲ್ಲಿ ತಪ್ಪೇನಿದೆ?



**ಬೆಂಗಳೂರು, ಸೆ. 15:** ಮಸೀದಿ ರಸ್ತೆಯಲ್ಲಿ ಮೆರವಣಿಗೆ ಮಾಡಬೇಡಿ ಎಂದು ಪೊಲೀಸರು ಹೇಳಿದ್ದರಲ್ಲಿ ತಪ್ಪೇನಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ. ಪೊಲೀಸ್ ಅಧಿಕಾರಿಗಳು ಮುಂದಿನ ದಿನಗಳಲ್ಲಿ ಯಾವುದೇ ಗಲಾಟೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಎಚ್ಚರಿಕೆ ನೀಡಿದ್ದರೆ ಅದನ್ನು ತಪ್ಪಾಗಿ ಬಿಂಬಿಸಿ ಪ್ರತಿಭಟನೆ ನಡೆಸುವುದು ಸರಿಯಲ್ಲ ಎಂದು ಬಿಜೆಪಿ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪೊಲೀಸರು ಕರ್ತವ್ಯ ನಿರ್ವಹಿಸುವಾಗ ಜನರಿಗೆ ಕಾನೂನು ಮತ್ತು ಶಿಸ್ತಿನ ಬಗ್ಗೆ ತಿಳಿಸುವುದು ಅವರ ಜವಾಬ್ದಾರಿ. ಪೊಲೀಸರು ತಪ್ಪು ಮಾಡಿದ್ದರೆ ಸರ್ಕಾರ ಕ್ರಮ ಕೈಗೊಳ್ಳಲಿದೆ. ಆದರೆ ಮುನ್ನೆಚ್ಚರಿಕೆ ನೀಡಿದ್ದನ್ನೇ ನೆಪ ಮಾಡಿಕೊಂಡು ಜನರನ್ನು ಪ್ರಚೋದಿಸುವ ಕೆಲಸ ಮಾಡಬಾರದು ಎಂದು ಶಿವಕುಮಾರ್ ಹೇಳಿದ್ದಾರೆ.ವಿಪಕ್ಷ ನಾಯಕರು ಸಾಂವಿಧಾನಿಕ ಹುದ್ದೆಯಲ್ಲಿದ್ದಾರೆ. ಹೀಗಾಗಿ ಅವರಿಂದ ಇನ್ನಷ್ಟು ಜವಾಬ್ದಾರಿಯುತ ನಡೆ ನಿರೀಕ್ಷಿಸಲಾಗುತ್ತದೆ. ಸಣ್ಣಪುಟ್ಟ ವಿಚಾರಗಳನ್ನು ದೊಡ್ಡದಾಗಿ ಮಾಡಿಕೊಂಡು ರಸ್ತೆಗಿಳಿಯುವ ಬದಲು ರಾಜ್ಯದ ಹಿತದೃಷ್ಟಿಯಿಂದ ಚರ್ಚೆಗೆ ಬರಬೇಕು ಎಂದು ಮುಖ್ಯಮಂತ್ರಿ ಸಲಹೆ ನೀಡಿದ್ದಾರೆ.

ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾಡಿರುವ ಒತ್ತಾಯದ ಬಗ್ಗೆಯೂ ಪ್ರತಿಕ್ರಿಯಿಸಿದ ಸಿಎಂ, ಅಧಿಕಾರಿಗಳು ಕಾನೂನು ಉಲ್ಲಂಘಿಸಿರುವುದು ಕಂಡುಬಂದರೆ ಖಂಡಿತ ಕ್ರಮ ಕೈಗೊಳ್ಳಲಾಗುವುದು. ಆದರೆ ಅವರು ತಪ್ಪು ಮಾಡದೆ ಇದ್ದಾಗ ವರ್ಗಾವಣೆ ಅಥವಾ ಅಮಾನತು ಮಾಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ.ಪ್ರತಿಭಟನೆ ನಡೆಸುವುದು, ಧರಣಿ ಕೂರುವುದು, ಘೋಷಣೆ ಕೂಗುವುದು ಪ್ರಜಾಪ್ರಭುತ್ವದಲ್ಲಿ ಎಲ್ಲರ ಹಕ್ಕು. ಆದರೆ ಹೋರಾಟದ ಹೆಸರಿನಲ್ಲಿ ರಾಜ್ಯದಲ್ಲಿ ಅಶಾಂತಿ ಸೃಷ್ಟಿಸುವ ಪ್ರಯತ್ನ ಮಾಡಬಾರದು. ಕರ್ನಾಟಕಕ್ಕೆ ಕೆಟ್ಟ ಹೆಸರು ಬರುವ ರೀತಿಯಲ್ಲಿ ಯಾವುದೇ ರಾಜಕೀಯ ಪಕ್ಷ ನಡೆದುಕೊಳ್ಳಬಾರದು ಎಂದು ಶಿವಕುಮಾರ್ ಮನವಿ ಮಾಡಿದ್ದಾರೆ. ಕರ್ನಾಟಕದ ಮೂಲಕ ದೇಶಕ್ಕೆ ಗೌರವ ಬರುತ್ತಿದೆ. ರಾಜ್ಯವನ್ನು ಅಶಾಂತಿಯ ಪ್ರದೇಶ ಎಂಬಂತೆ ಬಿಂಬಿಸುವುದರಿಂದ ದೇಶಕ್ಕೂ ಕೆಟ್ಟ ಸಂದೇಶ ಹೋಗುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಅಭಿವೃದ್ಧಿ ಮತ್ತು ಭವಿಷ್ಯದ ಬಗ್ಗೆ ಕನಸು ಕಾಣುತ್ತಿದ್ದಾರೆ. ಅದಕ್ಕೆ ಧಕ್ಕೆ ತರುವಂತಹ ವಾತಾವರಣವನ್ನು ರಾಜ್ಯದಲ್ಲಿ ನಿರ್ಮಿಸಬಾರದು ಎಂದು ಸಿಎಂ ಹೇಳಿದ್ದಾರೆ.

# ಯಾವ ದೇಶದಲ್ಲಿ ಮುಕ್ತ ಚುನಾವಣೆ, ಪತ್ರಿಕಾ ಸ್ವಾತಂತ್ರ್ಯ, ಮಾನವ ಹಕ್ಕುಗಳಿವೆಯೋ ಅಲ್ಲಿ ಶಾಂತಿ ನೆಲೆಸಿದೆ: ಡಿಸಿಎಂ ಪರಂ ವಿಶ್ಲೇಷಣೆ

**ಬೆಂಗಳೂರು, ಸೆ. 15:** ಯಾವ ದೇಶದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ವ್ಯವಸ್ಥೆ ಇದೆ, ಯಾವ ದೇಶದಲ್ಲಿ ಮಾನವತ್ವದ ಹಕ್ಕುಗಳಿಗೆ ಬೆಲೆ ಇದೆ, ಯಾವ ದೇಶದಲ್ಲಿ ಪತ್ರಿಕಾ ಸ್ವಾತಂತ್ರ್ಯವಿದೆ, ಯಾವ ದೇಶದ ಆಡಳಿತದಲ್ಲಿ ಜನಸಮುದಾಯದ ಭಾಗವಹಿಸುವಿಕೆ ಇದೆ ಮತ್ತು ಯಾವ ದೇಶದಲ್ಲಿ ಹೊಣೆಗಾರಿಕೆ ಮತ್ತು ಪಾರದರ್ಶಕತೆ ಇದೆ ಆ ದೇಶಗಳಲ್ಲಿ ಮಾತ್ರ ಇಂದು ಶಾಂತಿಯುತ ವಾತಾವರಣವಿದೆ. ಅದನ್ನೇ ನಾವು ಪ್ರಜಾಪ್ರಭುತ್ವ ಎಂದು ಕರೆಯುತ್ತೇವೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಆಶ್ರಯದಲ್ಲಿ ಮಂಗಳವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರಪಂಚದಲ್ಲಿ 90 ಪ್ರಜಾಪ್ರಭುತ್ವದ ದೇಶಗಳಿವೆ. ಇನ್ನುಳಿದ ದೇಶಗಳಲ್ಲಿ ನಡೆಯುವಂತಹ ವಿದ್ಯಮಾನಗಳೇ ಬೇರೆ, ಆಡಳಿತವೇ ಬೇರೆ. ನಮ್ಮ ನೆರೆಯ ದೇಶಗಳಾದ ಶ್ರೀಲಂಕಾ, ಬಾಂಗ್ಲಾದೇಶ, ಪಾಕಿಸ್ತಾನ, ನೇಪಾಳಗಳಲ್ಲಿ ಏನೇನು ನಡೆಯಿತು ಎಂಬುದನ್ನು ಗಮನಿಸಿದ್ದೇವೆ. ಆದರೆ ನಮ್ಮ ದೇಶದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಹಾಕಿಕೊಟ್ಟಿರುವ ಅಡಿಪಾಯ ಭದ್ರವಾಗಿರುವುದ'ರಿಂದ ಪ್ರಜಾಪ್ರಭುತ್ವಕ್ಕೆ ಧಕ್ಕೆಯಾಗುವ ಬೆಳವಣಿಗೆಗೆ ಗೆಲುವು ಸಿಕ್ಕಿಲ್ಲ ಎಂದರು. ದೇಶದ ಜನಸಂಖ್ಯೆಯಲ್ಲಿ ಶೇ. 65ರಷ್ಟು ಯುವ ಸಮುದಾಯವಿದೆ. 16–35 ವಯೋಮಾನದ ಸಮುದಾಯವಿದು. ಇವರು ಮುಂದಿನ ಭವಿಷ್ಯವನ್ನು ನಿರ್ಮಿಸುವವರು. ಈಗ ಜೆನ್‌ಝೀ ಮುನ್ನೆಲೆ ಬಂದಿದೆ. ಇವರಿಗೆ ನಾವು ಪ್ರಾಮುಖ್ಯತೆ ನೀಡಬೇಕಿದೆ. ಉತ್ತಮ ರಾಜಕೀಯ ವ್ಯವಸ್ಥೆಯನ್ನು ಅವರಿಗೆ ಹಸ್ತಾಂತರಿಸುವ ಜವಾಬ್ದಾರಿ ನಮ್ಮ ಮೇಲಿದೆ. ಹಾಗಾಗಿ ಅವರಿಗೆ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಧಾರೆಯೆರೆಯಬೇಕಿದೆ. ಈ ನಿಟ್ಟಿನಲ್ಲಿ ನಮ್ಮ ಸರ್ಕಾರ ಸಾಕಷ್ಟು ಕೆಲಸಗಳನ್ನು ನಿರಂತರವಾಗಿ ನಡೆಸುತ್ತ ಬಂದಿದೆ. ಪ್ರತಿಯೊಂದು ಶಾಲಾ–ಕಾಲೇಜುಗಳಿಗೆ, ಮನೆಗಳಿಗೆ ಸಂವಿಧಾನದ ಪೀಠಿಕೆಯನ್ನು ತಲುಪಿಸಿದ್ದೇವೆ. ನಿರಂತರವಾಗಿ ಸಂವಿಧಾನದ ಪೀಠಿಕೆಯನ್ನು ಮನನ ಮಾಡಿಕೊಳ್ಳುವ ಮೂಲಕ ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವದ ಪ್ರಾಮುಖ್ಯತೆಯನ್ನು ಅರ್ಥೈಸಿಕೊಳ್ಳುವಂತೆ ಮಾಡುತ್ತಿದ್ದೇವೆ ಎಂದರು.

ಇಂದು ಕೇಂದ್ರ ಸರ್ಕಾರ ಚುನಾವಣಾ ವ್ಯವಸ್ಥೆಯನ್ನು ಹಾಳು ಮಾಡಲು ಪ್ರಯತ್ನಿಸುತ್ತಿದೆ. ಈ ಮೂಲಕ ಅಧಿಕಾರದಲ್ಲಿ ಶಾಶ್ವತವಾಗಿ ಉಳಿಯಲು ಯತ್ನಿಸುತ್ತಿದೆ. ಇದು ಬಹಳ ಅಪಾಯಕಾರಿ. ಇದರ ಪರಿಣಾಮ ಮೊದಲು ಬೀರುವುದೇ ಸಮಾಜದ ಕೆಳಸ್ತರದಲ್ಲಿರುವವರ ಮೇಲೆ. ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರಿಗೆ ಇದರಿಂದ ತೊಂದರೆಯಾಗುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡೇ ಅಂಬೇಡ್ಕರ್ ಅವರು ಸಂವಿಧಾನತ್ಮಕ ರಕ್ಷಣೆಯನ್ನು ಈ ಸಮುದಾಯಗಳಿಗೆ ನೀಡಿದ್ದಾರೆ. ಇಂತಹ ರಕ್ಷಣಾತ್ಮಕ ವ್ಯವಸ್ಥೆ ವಿಶ್ವದ ಬೇರೆಡೆ ಕಾಣಸಿಗುವುದು ಅಪರೂಪ. ಹಾಗಾಗಿ ಸಂವಿಧಾನಕ್ಕೆ ಧಕ್ಕೆ ತರಲು ಯತ್ನಿಸುತ್ತಿರುವವರನ್ನು ಅಧಿಕಾರದಿಂದ ದೂರವುಳಿಸುವ ಮೂಲಕ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಬೇಕಿದೆ ಎಂದರು.

ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ , ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ರಿಜ್ವಾನ್ ಅರ್ಷದ್, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶಿವರಾಜ್ ಎಸ್. ತಂಗಡಗಿ, ಸಮಾಜ ಕಲ್ಯಾಣ ಇಲಾಖೆಯ ಮಾಜಿ ಸಚಿವ ಡಾ. ಎಚ್.ಸಿ.ಮಹದೇವಪ್ಪ, ಶಾಸಕರಾದ ಅಲ್ಲಮಪ್ರಭು ಪಾಟೀಲ, ಅಶೋಕ್ ಮನಗೂಳಿ, ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್, ಕರ್ನಾಟಕ ವಕೀಲರ ಸಂಘದ ಅಧ್ಯಕ್ಷ ವಿವೇಕ್ ಸುಬ್ಬಾರೆಡ್ಡಿ, ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ, ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷ ಪಿ.ಟಿ.ಪರಮೇಶ್ವರ ನಾಯ್ಕ್ ಮುತಾಂದವರು ಇದ್ದರು.



# ಇ–ಕೆವೈಸಿ ಸರ್ವರ್ ಸಮಸ್ಯೆಗೆ ತಕ್ಷಣ ಸ್ಪಂದಿಸಿ

## ತಾಂತ್ರಿಕ ಸಮಸ್ಯೆಗೆ ಶಾಶ್ವತ ಪರಿಹಾರ; ಸಚಿವ ರಿಜ್ವಾನ್ ಅರ್ಷದ್



**ಬೆಂಗಳೂರು, ಸೆ.15:** ಕೇಂದ್ರ ಸರ್ಕಾರ ಕಳೆದ ವರ್ಷದ ಜುಲೈ 22 ರಂದು ಹೊರಡಿಸಿರುವ ಟಾರ್ಗೆಟೆಡ್ ಡಿಸ್ಟ್ರಿಬ್ಯೂಷನ್ ಸಿಸ್ಟಮ್ ಅಮೆಂಡ್ ಮೆಂಟ್ ಆರ್ಡರ್ ಅನ್ವಯ, ಅರ್ಹ ಪಡಿತರ ಚೀಟಿದಾರರ ಪಟ್ಟಿಯನ್ನು ನಿಯಮಿತವಾಗಿ ಪರಿಶೀಲಿಸುವುದು ಹಾಗೂ ಪ್ರತಿ ಐದು ವರ್ಷಕ್ಕೊಮ್ಮೆ ಕಡ್ಡಾಯವಾಗಿ ಇ–ಕೆವೈಸಿ ಮಾಡಿಸುವುದನ್ನು ಕಡ್ಡಾಯಗೊಳಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ರಿಜ್ವಾನ್ ಅರ್ಷದ್ ಹೇಳಿದ್ದಾರೆ.

ಅದರಂತೆ, ಐದು ವರ್ಷ ಪೂರ್ಣಗೊಂಡಿರುವ ರಾಜ್ಯದ ಒಟ್ಟು 2,67,64,276 ಫಲಾನುಭವಿಗಳ ಮಾಹಿತಿಯನ್ನು ಎನ್‌ಐಸಿ ಯಿಂದ ಪಡೆದು, ಮರು ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಲು ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಈ ಪ್ರಕ್ರಿಯೆಗೆ ಇದೇ ತಿಂಗಳ 30 ಕಡೆಯ ದಿನ ಎಂದು ನಿಗದಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ನ್ಯಾಯಬೆಲೆ ಅಂಗಡಿಗಳಿಗೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ, ಕೆಲವೆಡೆ ಸರ್ವರ್ ಹಾಗೂ ತಾಂತ್ರಿಕ ಸಮಸ್ಯೆಗಳು ಉಂಟಾಗುತ್ತಿರುವುದು ಗಮನಕ್ಕೆ ಬಂದಿದೆ. ಯಾವುದೇ ಸ್ಥಳದಲ್ಲಿ ಸಮಸ್ಯೆ ಗಮನಕ್ಕೆ ಬಂದ ತಕ್ಷಣವೇ ಅಧಿಕಾರಿಗಳು ಸಮನ್ವಯದಿಂದ ತುರ್ತು ಕ್ರಮ ಕೈಗೊಂಡು ಸಮಸ್ಯೆಗಳನ್ನು ಕೂಡಲೇ ಬಗೆಹರಿಸಬೇಕು ಎಂದಿದ್ದಾರೆ.

ವಿಕಾಸಸೌಧದಲ್ಲಿ ಹಿರಿಯ ಅಧಿಕಾರಿಗಳು, ಎನ್ ಐ ಸಿ ಹಾಗೂ ಕೆ ಹೆಚ್ ಡಿ ಸಿ ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿ ಆಹಾರ ಇಲಾಖೆಯ ಸರ್ವರ್ ನಲ್ಲಿ ಉಂಟಾಗುತ್ತಿರುವ ತಾಂತ್ರಿಕ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸೂಚಿಸಿದರು.

ಮುಂದಿನ ಒಂದು ತಿಂಗಳೊಳಗಾಗಿ ಆಹಾರ ಇಲಾಖೆಯ ಸರ್ವರ್ ಹಾಗೂ ತಾಂತ್ರಿಕ ವ್ಯವಸ್ಥೆಯಲ್ಲಿರುವ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಸಾರ್ವಜನಿಕರಿಗೆ ಯಾವುದೇ ಅನಗತ್ಯ ತೊಂದರೆ ಆಗದಂತೆ, ತಂತ್ರಜ್ಞಾನ ಆಧಾರಿತ ಸೇವೆಗಳನ್ನು ಮತ್ತಷ್ಟು ಸರಳ, ವೇಗದ ಮತ್ತು ಪ ರಿ ಣಾ ಮ ಕಾ ರಿ ಯಾ ಗಿ ಒದಗಿಸುವುದು ನಮ್ಮ ಸರ್ಕಾರದ ಆದ್ಯತೆಯಾಗಿದ್ದು ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು.ಸಭೆಯಲ್ಲಿ ಕಾರ್ಯದರ್ಶಿ ಕನಕವಲ್ಲಿ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

**ಪೊಲೀಸ್ ರೌಂಡಪ್ 10ನೇ ವಾರ್ಷಿಕೋತ್ಸವ:**

# ಉಚಿತ ಆಂಬ್ಯುಲೆನ್ಸ್ ಸೇವೆಗೆ ಸಚಿವ ಜಮೀರ್ ಅಹ್ಮದ್ ಖಾನ್ ಚಾಲನೆ


**ಬೆಂಗಳೂರು, ಸೆ.15:** ಪೊಲೀಸ್ ರೌಂಡಪ್ 10ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಉಚಿತ ಆಂಬ್ಯುಲೆನ್ಸ್ ಸೇವೆಗೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ತುರ್ತು ಸಂದರ್ಭದಲ್ಲಿ ಬಡವರು ಹಾಗೂ ಅಗತ್ಯವಿರುವವರಿಗೆ ಉಚಿತ ಆಂಬ್ಯುಲೆನ್ಸ್ ಸೇವೆ ದೊರೆಯುವುದು ಅತ್ಯಂತ ಮಹತ್ವದ ಮಾನವೀಯ ಕಾರ್ಯವಾಗಿದೆ. ಸಾರ್ವಜನಿಕರ ಆರೋಗ್ಯ ಮತ್ತು ಜೀವರಕ್ಷಣೆಗೆ ಇಂತಹ ಸೇವೆಗಳು ಸಹಕಾರಿಯಾಗಲಿವೆ ಎಂದು ಹೇಳಿದರು.

ಕರ್ನಾಟಕ ಡಿಜಿಟಲ್ ಮೀಡಿಯಾ ಅಸೋಸಿಯೇಷನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, ಡಾ. ಆಂಜನಪ್ಪ, ನಟ ಚೇತನ್ ಅಹಿಂಸಾ ಪೊಲೀಸ್ ರೌಂಡಪ್ ಸಂಪಾದಕ ವಿ.ಎಸ್. ತ್ಯಾಗರಾಜ್, ಸಿ.ಆರ್. ರವಿಪ್ರಸಾದ್, ಟುಡೇ ಕನ್ನಡ ಟಿವಿ ಸಿಇಓ ಚಂದ್ರು, ಕನ್ನಡಪರ ಹೋರಾಟಗಾರ ಶಿವಕುಮಾರ್ ನಾಯಕ್, ಕನ್ನಡ ಯೋಗಿ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ವಿವಿಧ ಕ್ಷೇತ್ರಗಳ ಸಾಧಕರನ್ನು ಗೌರವಿಸಲಾಯಿತು.



ಗೌರಿ–ಗಣೇಶ ಹಬ್ಬದ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್. ಮಂಜುನಾಥ್ ಅವರು ರಾಮನಗರ ನಗರದ ವಿವಿಧ ಗಣಪತಿ ದೇವಾಲಯಗಳಿಗೆ ಭೇಟಿ ನೀಡಿ, ವಿಘ್ನ ವಿನಾಶಕ ಶ್ರೀಗಣಪತಿಗೆ ವಿಶೇಷ ಪೂಜೆ ಸಲ್ಲಿಸಿದರು.

**ಚರ್ಚೆಗೆ ಗ್ರಾಸವಾದ ಕೆ.ಎನ್. ರಾಜಣ್ಣ ಹೇಳಿಕೆ**

# ಮುಡಾ ಪ್ರಕರಣದಲ್ಲಿ ದೂರು ಕೊಟ್ಟವರು ಕಾಂಗ್ರೆಸ್‌ನವರೇ ಅಲ್ಲವೇ..?



**ಬೆಂಗಳೂರು, ಸೆ.15:** ಮುಡಾ ಹಗರಣದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ಹಾಗೂ ಮಾಜಿ ಸಚಿವ ಕೆ.ಎನ್. ರಾಜಣ್ಣ ನೀಡಿರುವ ಹೇಳಿಕೆ ರಾಜ್ಯ ರಾಜಕಾರಣದಲ್ಲಿ ಹೊಸ ಸಂಚಲನ ಮೂಡಿಸಿದೆ. ಮುಡಾ ಹಗರಣದ ಹಿಂದೆ ವಿಪಕ್ಷಗಳಷ್ಟೇ ಅಲ್ಲದೆ, ಪಕ್ಷದ ಒಳಗಿನವರೂ ಕೈವಾಡ ಹೊಂದಿದ್ದಾರೆ ಎಂದಿದ್ದಾರೆ.

ಮುಡಾ ಕೇಸ್ ದೂರು ಕೊಟ್ಟವರು ಕಾಂಗ್ರೆಸ್‌ನವರೇ ಅಲ್ಲವೇ. ಕಾಂಗ್ರೆಸ್ ಒಳಗಿನವರೇ ದೂರು ಕೊಟ್ಟಿರಲಿಲ್ವಾ? ಎಂದು ಪ್ರಶ್ನಿಸುವ ಮೂಲಕ ಗಂಭೀರ ಅನುಮಾನ ವ್ಯಕ್ತಪಡಿಸಿದ್ದಾರೆ. ರಾಜಕಾರಣದಲ್ಲಿ ಅಧಿಕಾರ ಅನ್ನುವುದು ಪಾನ್‌ಗಳಿದ್ದಂತೆ. ಗಿಡದ ಸುತ್ತ ಕಳೆ ಬೆಳೆಯುವಂತೆ ಅಧಿಕಾರದ ಸುತ್ತಲೂ ಕೆಲವರು ಅಸಮಾಧಾನ ಬೆಳೆಸಿಕೊಳ್ಳುತ್ತಾರೆ ಎಂದು ಹೇಳಿದ್ದಾರೆ.

## ಮುಂದೆ ಲೋಕಸಭೆಗೆ ಸ್ಪರ್ಧೆ

**ಬೆಂಗಳೂರಿನಲ್ಲಿ ಡಾ. ಜಿ. ಪರಮೇಶ್ವರ್ ಹಾಗೂ ಬಿ.ಕೆ. ಹರಿಪ್ರಸಾದ್ ಅವರನ್ನು ಭೇಟಿಯಾಗಿ ಲೋಕವಿರಾಮ ಹಾಗೂ ಮುಂದಿನ ಚುನಾವಣಾ ತಯಾರಿ ಮತ್ತು ಪಕ್ಷ ಸಂಘಟನೆ ಕುರಿತು ಚರ್ಚೆ ನಡೆಸಿರುವುದಾಗಿ ಅವರು ತಿಳಿಸಿದ್ದಾರೆ. ಮುಂಬರುವ ಚುನಾವಣೆಯಲ್ಲಿ ತಾವು ವಿಧಾನಸಭೆ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಬದಲಿಗೆ ಲೋಕಸಭೆ ಚುನಾವಣೆಯಲ್ಲಿ ನಿಲ್ಲುವುದಾಗಿ ಸ್ಪಷ್ಟಪಡಿಸಿದ್ದು, ಈ ನಿರ್ಧಾರಕ್ಕೆ ನಾಯಕರು ಸಮ್ಮತಿ ಸೂಚಿಸಿದ್ದಾರೆ ಎಂದಿದ್ದಾರೆ.**

# ಬಿ ಟು ಎ ಖಾತಾ: 2027ರ ಡಿ.31ರವರೆಗೆ ಅವಧಿ ವಿಸ್ತರಿಸಿದ ಸರ್ಕಾರ



**ಬೆಂಗಳೂರು, ಸೆ.15:** ಬಿ ಖಾತಾ ಆಸ್ತಿ ಮಾಲೀಕರಿಗೆ ಕರ್ನಾಟಕ ಸರ್ಕಾರ ಮತ್ತೊಂದು ಅವಕಾಶ ನೀಡಿದ್ದು, ಬಿ ಖಾತಾದಿಂದ ಎ ಖಾತಾಗೆ ಪರಿವರ್ತಿಸಿಕೊಳ್ಳುವ ವಿಶೇಷ ಯೋಜನೆಯ ಅವಧಿಯನ್ನು 2027ರ ಡಿಸೆಂಬರ್ 31ರವರೆಗೆ ವಿಸ್ತರಿಸಿದೆ. ಬೆಂಗಳೂರು ಮಾತ್ರವಲ್ಲದೆ ರಾಜ್ಯದ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಅರ್ಹ ಆಸ್ತಿ ಮಾಲೀಕರಿಗೆ ಈ ನಿರ್ಧಾರದಿಂದ ಅನುಕೂಲವಾಗಲಿದೆ. ಬಹುಕಾಲದಿಂದ ಬಿ ಖಾತಾ ಸಮಸ್ಯೆ ಎದುರಿಸುತ್ತಿರುವ ಆಸ್ತಿ ಮಾಲೀಕರಿಗೆ ಇದು ಮಹತ್ವದ ಬೆಳವಣಿಗೆಯಾಗಿದೆ.

ಈ ಯೋಜನೆಯಿಂದಾಗಿ ಬೆಂಗಳೂರಿನಲ್ಲೇ ಲಕ್ಷಾಂತರ ಆಸ್ತಿ ಮಾಲೀಕರಿಗೆ ಕಾನೂನುಬದ್ಧ ಹಕ್ಕು, ಬ್ಯಾಂಕ್ ಸಾಲ ಸೌಲಭ್ಯ ಹಾಗೂ ಆಸ್ತಿ ಮಾರಾಟಕ್ಕೆ ಎದುರಾಗಿದ್ದ ತೊಡಕುಗಳು ನಿವಾರಣೆಯಾಗಲಿವೆ.ಬಿ ಖಾತಾ ಇರುವ ಕಾರಣ ಬ್ಯಾಂಕ್ ಸಾಲ ಪಡೆಯುವುದು, ಆಸ್ತಿ ಮಾರಾಟ ಅಥವಾ ವರ್ಗಾವಣೆ ಸೇರಿದಂತೆ ಹಲವು ವ್ಯವಹಾರಗಳಲ್ಲಿ ತೊಡಕು ಎದುರಾಗುತ್ತಿತ್ತು. ಇದೀಗ ಸರ್ಕಾರ ನಿಗದಿಪಡಿಸಿರುವ ನಿಯಮಗಳಿಗೆ ಒಳಪಡುವ ಆಸ್ತಿಗಳನ್ನು ಎ ಖಾತಾಗೆ ಪರಿವರ್ತಿಸಿಕೊಳ್ಳಲು ಹೆಚ್ಚುವರಿ ಕಾಲಾವಕಾಶ ಸಿಕ್ಕಿದೆ.

**ಹಿಂದಿನ ಗಡುವಿಗೂ ವಿಸ್ತರಣೆ**

ಬಿ ಖಾತಾ ಆಸ್ತಿಗಳನ್ನು ನಿಯಮಬದ್ಧ ಪ್ರಕ್ರಿಯೆ ಮೂಲಕ ಎ ಖಾತಾಗೆ ತರಲು ಸರ್ಕಾರ ರೂಪಿಸಿದ್ದ ವ್ಯವಸ್ಥೆಯಡಿ ಈ ಹಿಂದೆ ನಿಗದಿಪಡಿಸಿದ್ದ ಅವಧಿಯೊಳಗೆ ಅರ್ಜಿ ಸಲ್ಲಿಸಲು ಸಾಧ್ಯವಾಗದವರಿಗೆ ಗಡುವು ವಿಸ್ತರಣೆ ಮಹತ್ವದ್ದಾಗಿದೆ. ಅನಧಿಕೃತ ಅಥವಾ ನಿಯಮ ಉಲ್ಲಂಘನೆಯ ಕಟ್ಟಡಗಳು ಮತ್ತು ನಿವೇಶನಗಳಿಗೆ ಖಾತಾ ನೀಡುವ ವಿಚಾರದಲ್ಲಿ ಸರ್ಕಾರಗಳು ಕಾಲಕಾಲಕ್ಕೆ ನಿಯಮ, ದಂಡ ಹಾಗೂ ಸಕ್ರಮ ಪ್ರಕ್ರಿಯೆಗಳನ್ನು ಜಾರಿಗೊಳಿಸುತ್ತ ಬಂದಿವೆ. ಇತ್ತೀಚಿನ ದಿನಗಳಲ್ಲಿ ಬಿ ಖಾತಾದಿಂದ ಎ ಖಾತಾ ಪರಿವರ್ತನೆಗೆ ಸರ್ಕಾರ ನೀಡಿರುವ ಅವಕಾಶವನ್ನು ಆಸ್ತಿ ಮಾಲೀಕರಿಗೆ ಕಾನೂನುಬದ್ಧ ದಾಖಲೆಗಳನ್ನು ಸರಿಪಡಿಸಿಕೊಳ್ಳುವ ಅವಕಾಶವಾಗಿ ನೋಡಲಾಗುತ್ತಿದೆ.

**1,000 ಚದರ ಮೀಟರ್‌ವರೆಗೆ ಮಾತ್ರ**

ಸರ್ಕಾರದ ಪ್ರಸ್ತುತ ವ್ಯವಸ್ಥೆಯಡಿ ನಗರ ಸ್ಥಳೀಯ ಸಂಸ್ಥೆ ಅಥವಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಗರಿಷ್ಠ 1,000 ಚದರ ಮೀಟರ್, ಅಂದರೆ ಸುಮಾರು 10,764 ಚದರ ಅಡಿ ವಿಸ್ತೀರ್ಣದ ಆಸ್ತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಆದರೆ ಕೇವಲ ವಿಸ್ತೀರ್ಣದ ಮಿತಿ ಪೂರೈಸಿದರೆ ಸಾಕಾಗುವುದಿಲ್ಲ. ಆಸ್ತಿ ಕೃಷಿಯೇತರ ಉದ್ದೇಶಕ್ಕೆ ಬಳಕೆಯಾಗುತ್ತಿರಬೇಕು. ಜತೆಗೆ ಸಂಬಂಧಪಟ್ಟ ಪ್ರದೇಶದ ಮಾಸ್ಟರ್ ಪ್ಲಾನ್, ವಲಯ ನಿಯಮಗಳು ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ನಿಯಮಗಳಿಗೆ ಆಸ್ತಿ ಹೊಂದಿಕೆಯಾಗಿರಬೇಕು.

**ಕಟ್‌ಆಫ್ ದಿನಾಂಕ**

ಅರ್ಹತೆ ನಿರ್ಧರಿಸುವಲ್ಲಿ ಕಟ್‌ಆಫ್ ದಿನಾಂಕ ಪ್ರಮುಖವಾಗಿದ್ದು, ನಗರ ಮತ್ತು ಗ್ರಾಮೀಣ ಪ್ರದೇಶಗಳಿಗೆ ಪ್ರತ್ಯೇಕ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

ನಗರ ಪ್ರದೇಶಗಳಲ್ಲಿ: 2024ರ ಸೆಪ್ಟೆಂಬರ್ 10ರಂದು ಅಥವಾ ಅದಕ್ಕೂ ಮೊದಲು ಬಿ ಖಾತಾ ಹೊಂದಿರುವ ಆಸ್ತಿಗಳು ಅರ್ಹತೆಯ ವ್ಯಾಪ್ತಿಗೆ ಬರಲಿವೆ. 2025ರ ಏಪ್ರಿಲ್ 7ರಂದು ಅಥವಾ ಅದಕ್ಕೂ ಮೊದಲು ಬಿ ಖಾತಾ ದಾಖಲಾಗಿರಬೇಕು. ಖಾತಾ ಇಲ್ಲದ ಆಸ್ತಿಗಳ ವಿಷಯ ದಲ್ಲಿಯೂ ನಿರ್ದಿಷ್ಟ ಷರತ್ತುಗಳಿದ್ದು, ಸಂಬಂಧಪಟ್ಟ ಕಟ್‌ಆಫ್ ದಿನಾಂಕಕ್ಕೂ ಮುನ್ನ ನೋಂದಾಯಿತ ವ್ಯವಹಾರ ನಡೆದಿರುವುದು ಸೇರಿದಂತೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಲಾಗುತ್ತದೆ.

**ಯಾವ ಆಸ್ತಿಗಳಿಗೆ ಈ ಸೌಲಭ್ಯ ಅನ್ವಯಿಸುವುದಿಲ್ಲ?**

ಬಿ–ಖರಾಬು ಜಮೀನು, ಅರಣ್ಯ ಅಥವಾ ಗೋಮಾಳ ಭೂಮಿ, ಕೆರೆ ಮತ್ತು ಕೆರೆ ಅಂಗಳದ ಜಾಗಗಳು, ರಾಜಕಾಲುವೆಗಳು, ನಾಲಾಗಳು, ರಸ್ತೆಗಳು ಹಾಗೂ ರಸ್ತೆ ಬದಿಯ ಮೀಸಲು ಜಾಗ, ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿಟ್ಟ ಜಾಗಗಳು, ಭೂಸ್ವಾಧೀನ ಪ್ರಕ್ರಿಯೆಯಲ್ಲಿರುವ ಆಸ್ತಿಗಳು, ನ್ಯಾಯಾಲಯ ಅಥವಾ ಟ್ರಿಬ್ಯೂನಲ್‌ಗಳಲ್ಲಿ ವ್ಯಾಜ್ಯದಲ್ಲಿರುವ ಆಸ್ತಿಗಳು, ಸರ್ಕಾರದ ನಿರ್ಬಂಧಗಳಿರುವ ಹಾಗೂ ಮಾಸ್ಟರ್ ಪ್ಲಾನ್ ನಿಯಮಗಳನ್ನು ಸಂಪೂರ್ಣವಾಗಿ ಉಲ್ಲಂಘಿಸಿರುವ ಆಸ್ತಿಗಳಿಗೆ ಅವಕಾಶವಿಲ್ಲ.

# ನಗರದ ಸಮಸ್ಯೆಗಳಿಗೆ ಹೊಸ ತಂತ್ರಜ್ಞಾನದಿಂದ ಪರಿಹಾರ ನೀಡಿ: ಡಾ.ಎನ್. ಮಂಜುಳಾ ಕರೆ



**ಬೆಂಗಳೂರು, ಸೆ.15:** ವೇಗವಾಗಿ ಬೆಳೆಯುತ್ತಿರುವ ಬೆಂಗಳೂರಿನ ನೀರು ಸರಬರಾಜು ಮತ್ತು ಒಳಚರಂಡಿ ಸಂಬಂಧಿತ ಸವಾಲುಗಳಿಗೆ ತಂತ್ರಜ್ಞಾನಾಧಾರಿತ, ಶಾಶ್ವತ ಪರಿಹಾರಗಳನ್ನು ಕಂಡುಕೊಳ್ಳುವ ಜವಾಬ್ದಾರಿ ಅಭಿಯಂತರರ ಮೇಲಿದೆ.

ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ಹೆಚ್ಚು ವೃತ್ತಿಪರವಾಗಿ ಮತ್ತು ಜನಸ್ಪಂದನಶೀಲವಾಗಿ ಕಾರ್ಯನಿರ್ವಹಿಸಬೇಕು ಎಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷೆ ಡಾ.ಎನ್.ಮಂಜುಳಾ ಕರೆ ನೀಡಿದರು. ಕಾವೇರಿ ಭವನದಲ್ಲಿ ಜಲಮಂಡಳಿ ಅಭಿಯಂತರರ ಸಂಘದ ವತಿಯಿಂದ ಆಯೋಜಿಸಿದ್ದ ಅಭಿಯಂತರರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತದ ಇಂಜಿನಿಯರಿಂಗ್ ಪರಂಪರೆಗೆ ದೀರ್ಘ ಇತಿಹಾಸವಿದ್ದು, ಗ್ರಾಮೀಣ ಭಾಗಗಳಲ್ಲಿ ನಿರ್ಮಾಣಗೊಂಡ ಕೆರೆ–ಕಟ್ಟೆಗಳು ನಮ್ಮ ಪೂರ್ವಜರ ತಾಂತ್ರಿಕ ಜ್ಞಾನದ ಸಾಕ್ಷಿಯಾಗಿವೆ ಎಂದರು.

ಸರ್ ಎಂ.ವಿಶ್ವೇಶ್ವರಯ್ಯ ಅವರು ಅತ್ಯಾಧುನಿಕ ತಂತ್ರಜ್ಞಾನಗಳಿಲ್ಲದ ಕಾಲದಲ್ಲೇ ತಮ್ಮ ಜ್ಞಾನ, ಯೋಜನಾ ಸಾಮರ್ಥ್ಯ ಮತ್ತು ವೃತ್ತಿಪರತೆಯಿಂದ ದೇಶಕ್ಕೆ ಮಾದರಿಯಾದರು. ಅವರ ಶಿಸ್ತು, ದೂರದೃಷ್ಟಿ ಮತ್ತು ಸಾರ್ವಜನಿಕ ಸೇವೆಯ ಮನೋಭಾವ ಇಂದಿನ ಅಭಿಯಂತರರಿಗೂ ಮಾರ್ಗದರ್ಶಿ ಯಾಗಬೇಕು ಎಂದು ಹೇಳಿದರು. ಜಲಮಂಡಳಿಗೆ ಪ್ರತಿದಿನ ನೂರಾರು ದೂರುಗಳು ಬರುತ್ತಿದ್ದು, ಅವುಗಳಿಗೆ ಪರಿಹಾರ ನೀಡುವಲ್ಲಿ ಅಭಿಯಂತರರ ಪಾತ್ರ ಅತ್ಯಂತ ಮಹತ್ವ ದ್ದಾಗಿದೆ ಎಂದು ಡಾ. ಮಂಜುಳಾ ಹೇಳಿದರು.

ದೂರು ಬಂದಾಗ ತಾತ್ಕಾಲಿಕವಾಗಿ ಸಮಸ್ಯೆ ಸರಿಪಡಿಸುವುದಷ್ಟೇ ಅಲ್ಲ, ಸಮಸ್ಯೆಯ ಮೂಲ ಕಾರಣವನ್ನು ಗುರುತಿಸಿ ಶಾಶ್ವತ ಪರಿಹಾರ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು. ಹೊಸ ತಂತ್ರಜ್ಞಾನ, ಡೇಟಾ ಮತ್ತು ಆಧುನಿಕ ಇಂಜಿನಿಯರಿಂಗ್ ವಿಧಾನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು. ಅಭಿಯಂತರರ ದಿನಾಚರಣೆ ಕೇವಲ ವಾರ್ಷಿಕ ಆಚರಣೆಯಾಗದೆ, ತಾಂತ್ರಿಕ ಪರಿಣಿತರ ಉಪನ್ಯಾಸ, ಜ್ಞಾನ ವಿನಿಮಯ ಮತ್ತು ಹೊಸ ತಂತ್ರಜ್ಞಾನಗಳ ಪರಿಚಯಕ್ಕೆ ವೇದಿಕೆಯಾಗಬೇಕು ಎಂದು ಅವರು ಸಲಹೆ ನೀಡಿದರು.

**ಕೆಂಪೇಗೌಡರ ಜಲವ್ಯವಸ್ಥೆ ಇಂಜಿನಿಯರಿಂಗ್ ದೂರದೃಷ್ಟಿಯ ಸಂಕೇತ: ನ್ಯಾಯಮೂರ್ತಿ ಡಾ. ಕೃಷ್ಣ ದೀಕ್ಷಿತ್**

ಕಾರ್ಯಕ್ರಮದಲ್ಲಿ ಮಾತನಾಡಿದ ನ್ಯಾಯಮೂರ್ತಿ ಡಾ. ಕೃಷ್ಣ ದೀಕ್ಷಿತ್, ನಾಡಪ್ರಭು ಕೆಂಪೇಗೌಡರು ಸಾವಿರಾರು ಕೆರೆಗಳನ್ನು ನಿರ್ಮಿಸಿ ಬೆಂಗಳೂರಿಗೆ ಸಮಗ್ರ ಜಲವ್ಯವಸ್ಥೆಯ ಅಡಿಪಾಯ ಹಾಕಿದ್ದು, ಅವರ ದೂರದೃಷ್ಟಿ ಇಂದಿಗೂ ಪ್ರಸ್ತುತವಾಗಿದೆ ಎಂದು ಹೇಳಿದರು. ನಾಗರಿಕತೆಯ ಬೆಳವಣಿಗೆಗೂ ನೀರಿಗೂ ಅವಿನಾಭಾವ ಸಂಬಂಧವಿದೆ. ಕೆರೆ, ಕಟ್ಟೆ ಮತ್ತು ಚರಂಡಿ ವ್ಯವಸ್ಥೆಗಳ ನಿರ್ಮಾಣ ನಮ್ಮ ಪೂರ್ವಜರ ಉನ್ನತ ಇಂಜಿನಿಯರಿಂಗ್ ಜ್ಞಾನವನ್ನು ತೋರಿಸುತ್ತದೆ. ಅಭಿಯಂತರರ ವೃತ್ತಿಗೆ ಸಮಾಜದಲ್ಲಿ ಹೆಚ್ಚಿನ ಗೌರವ ಮತ್ತು ಸೂಕ್ತ ಕಾನೂನು ರಕ್ಷಣೆಯೂ ಅಗತ್ಯ ಎಂದರು. ಕಾರ್ಯಕ್ರಮದಲ್ಲಿ ಜಲಮಂಡಳಿ ಆಡಳಿತಾಧಿಕಾರಿ ವಿ.ಕೆ ಪ್ರಸನ್ನ ಕುಮಾರ್, ಪ್ರಧಾನ ಮುಖ್ಯ ಅಭಿಯಂತರ ದಲಾಯತ್, ಅಭಿಯಂತರರ ಸಂಘದ ಅಧ್ಯಕ್ಷ ಬಿ.ಸಿ. ಗಂಗಾಧರ್, ಬಿಎನ್‌ಎಸ್ ಕನ್ಸಲ್ಟೆನ್ಸಿ ಇಂಜಿನಿಯರಿಂಗ್‌ನ ಪ್ರಧಾನ ಅಭಿಯಂತರ ಬಿ.ಎಚ್. ಭಾಸ್ಕರ್ ಸೇರಿದಂತೆ ಜಲಮಂಡಳಿಯ ಅಭಿಯಂತರರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಕಾರಾಗೃಹಗಳಲ್ಲಿ ಎಲ್ಲವೂ ಲಭ್ಯ: ಭದ್ರತೆ ವಿಚಾರದಲ್ಲಿ ನಿರ್ಲಕ್ಷ್ಯ

**ಬೆಂಗಳೂರು, ಸೆ.15:** ಕಾರಾಗೃಹಗಳ ಭದ್ರತಾ ವಿಷಯಗಳಲ್ಲಿ ನಿರ್ಲಕ್ಷ್ಯತೆ ಕಂಡು ಬಂದಿದೆ. ಈ ಮೊದಲು ಜೈಲುಗಳಲ್ಲಿ ಬೀಡಿ, ಸಿಗರೇಟು, ಗಾಂಜಾ ಸಿಗುತ್ತಿದ್ದವು. ನಂತರದ ವರ್ಷಗಳಲ್ಲಿ ಚಾಕು, ಚೂರಿಗಳು ಒಳನುಗ್ಗಿದವು. ಇತ್ತೀಚಿನ ವರ್ಷಗಳಲ್ಲಿ ಮೊಬೈಲ್‌ಗಳು ಮತ್ತು ಸಿಂಥೆಟಿಕ್ ಮಾದಕ ವಸ್ತುಗಳು ಪ್ರವೇಶಿಸಿ ರಾರಾಜಿಸುತ್ತಿವೆ.ಈ ಹಿಂದೆ ಕೆಲವು ರೌಡಿಗಳು ಜೈಲಿನ ಒಳಗೆ ಇದ್ದುಕೊಂಡೇ ಶ್ರೀಮಂತರು, ವ್ಯಾಪಾರಿಗಳಿಗೆ ಫೋನ್ ಮಾಡಿ ಧಮ್ಕಿ ಹಾಕಿ ಹಣ ವಸೂಲಿ ಮಾಡುತ್ತಿದ್ದರು. ಇನ್ನೂ ಕೆಲ ರೌಡಿಗಳು ಎದುರಾಳಿ ರೌಡಿಗೆ ಜೈಲಿನಲ್ಲೇ ಕುಳಿತು ಸ್ಕೇಚ್ ಹಾಕಿ ಅವರ ಹತ್ಯೆ ಮಾಡಿಸುತ್ತಿದ್ದರು. ಇದನ್ನು ಮನಗೊಂಡು ಅಂದಿನ ಸರ್ಕಾರ ಪರಪ್ಪನ ಅಗ್ರಹಾರ ಕಾರಾಗೃಹದ ಒಳಗೆ ಮೊಬೈಲ್‌ಗಳು ಬಳಕೆಯಾಗದ ರೀತಿ ಜಾಮರ್ ಅಳವಡಿಸಿತು. ಆದರೂ ಸಹ ಅಲ್ಲಿಂದ ಇಲ್ಲಿಯ ತನಕ ಈ ಕಾರಾಗೃಹದಲ್ಲಿ ಮೊಬೈಲ್‌ಗಳ ನಿರಂತರವಾಗಿ ಬಳಕೆಯಾಗುತ್ತಿದೆ.

ಬೆಂಗಳೂರು ನಗರದ ಪೊಲೀಸರು ಪ್ರತಿಸಲ ಈ ಜೈಲು ಮೇಲೆ ದಾಳಿ ಮಾಡಿದಾಗಲೂ ಸಹ ಮೊಬೈಲ್ ಹಾಗೂ ಇನ್ನಿತರ ವಸ್ತುಗಳು ಪತ್ತೆಯಾಗುತ್ತಿವೆ. ಜಾಮರ್ ಸರಿಯಾಗಿ ಕಾರ್ಯನಿರ್ವಹಿಸುತ್ತಿದ್ದರೆ ಜೈಲಿನೊಳಗೆ ಮೊಬೈಲ್ ಬಳಕೆಯಾಗುತ್ತಿರಲಿಲ್ಲ. ಆದರೆ ನಿರಂತರವಾಗಿ ಅವುಗಳ ಬಳಕೆ ಆಗುತ್ತಿದೆ. ಅಂದರೆ ಜಾಮರ್ ಅಳವಡಿಕೆ ಕೇವಲ ನಾಮಕವಸ್ಥೆಯೇ?

ಜೈಲುಗಳಲ್ಲಿ ಮೊಬೈಲ್ ಬಳಕೆ ಇಂದು–ನಿನ್ನೆಯಿಂದ ಆಗುತ್ತಿಲ್ಲ. ಹಲವಾರು ವರ್ಷಗಳಿಂದ ನಿರಂತರವಾಗಿ ಆಗುತ್ತಿದೆ. ಎಷ್ಟೋ ಸರ್ಕಾರಗಳು ಅಧಿಕಾರಕ್ಕೆ ಬಂದು ಹೋಗಿವೆ. ಬಹಳಷ್ಟು ಮಂದಿ ಗೃಹ ಸಚಿವರು ಪರಪ್ಪನ ಅಗ್ರಹಾರ ಕಾರಾಗೃಹಕ್ಕೆ ಭೇಟಿ ನೀಡಿ, ಪರಿಶೀಲಿಸಿ ಸಭೆ ನಡೆಸಿ ಆತಿಥ್ಯ ಸ್ವೀಕರಿಸಿ ಹೋಗಿದ್ದಾರೆ ಅಷ್ಟೇ. ಯಾವುದೇ ಸುಧಾರಣೆಯಾಗಿಲ್ಲ.

# ಬಿಡಿಎ ಕಚೇರಿ ನೆಲಸಮ ಮಾಡಲು ನೌಕರರ ಸಂಘ ತೀವ್ರ ವಿರೋಧ




ಬೆಂಗಳೂರು: ಸೆ,15: ಇತಿಹಾಸ ಪ್ರಸಿದ್ಧ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ಕುಮಾರ ಪಾರ್ಕ್‌ನ ಮೂಲ ಕೇಂದ್ರ ಕಚೇರಿ ಕಟ್ಟಡವನ್ನು ನೆಲಸಮಗೊಳಿಸಿ ಬಹುಮಹಡಿ ಕಟ್ಟಡ ನಿರ್ಮಿಸಲು ಸರ್ಕಾರ ಮುಂದಾಗಿರುವ ಬೆನ್ನಲ್ಲೇ, ಈ ಕ್ರಮಕ್ಕೆ ಬಿಡಿಎ ನೌಕರರ ಸಂಘ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಮೈಸೂರು ಮಹಾರಾಜರ ಕಾಲದಲ್ಲಿ ಸ್ಥಾಪನೆಯಾದ ಆಗಿನ ಸಿಟಿಐಬಿ, ಈಗಿನ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಐತಿಹಾಸಿಕ ಹಾಗೂ ಪಾರಂಪರಿಕ ಕೇಂದ್ರ ಕಚೇರಿ ಜಾಗವನ್ನು ಯಾವುದೇ ಕಾರಣಕ್ಕೂ ನೆಲಸಮ ಮಾಡಬಾರದು. ಯಥಾಸ್ಥಿತಿಯಲ್ಲಿಯೇ ಉಳಿಸಿ ಮುಂದಿನ ಪೀಳಿಗೆಗೂ ಸಂರಕ್ಷಿಸಬೇಕು ಎಂದು ನೌಕರರ ಸಂಘ ಬಿಡಿಎ ಅಧ್ಯಕ್ಷರಿಗೆ ಪತ್ರ ಬರೆದು ಮನವಿ ಮಾಡಿದೆ.

ಇದೇ ವೇಳೆ, ಸೆಪ್ಟೆಂಬರ್ 25ರೊಳಗೆ ಕೇಂದ್ರ ಕಚೇರಿಯನ್ನು ಸ್ಥಳಾಂತರಿಸು ವಂತೆ ಪ್ರಾಧಿಕಾರದ ಆಯುಕ್ತರು ಸೆಪ್ಟೆಂಬರ್ 7, 2026 ರಂದು ಹೊರಡಿಸಿರುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಸಂಘ ಆಗ್ರಹಿಸಿದೆ. ಇತ್ತೀಚೆಗೆ ನಡೆದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಮೈಸೂರು ಮಹಾರಾಜರು ಸ್ಥಾಪಿಸಿದ ಐತಿಹಾಸಿಕ ಸಿಟಿಐಬಿ/ಬಿಡಿಎ ಮೂಲ ಕೇಂದ್ರ ಕಚೇರಿ ಕಟ್ಟಡವನ್ನು ನೆಲಸಮ ಗೊಳಿಸಿ, ಆ ಸ್ಥಳದಲ್ಲಿ ಬಹುಮಹಡಿ ಕಟ್ಟಡ ನಿರ್ಮಿಸಲು ನಿರ್ಧಾರ ಕೈಗೊಳ್ಳಲಾಗಿದೆ ಎಂಬ ಮಾಹಿತಿ ನೌಕರರಲ್ಲಿ ತೀವ್ರ ಬೇಸರ ಮತ್ತು ಆತಂಕಕ್ಕೆ ಕಾರಣವಾಗಿದೆ.

ಸಿಟಿಐಬಿ ಕಾಲದಿಂದಲೂ ಸುಮಾರು ಎಂಟು ದಶಕಗಳಿಂದ ಸಂಸ್ಥೆಯ ಹಿತ, ಸಾರ್ವಜನಿಕ ಹಿತ ಹಾಗೂ ಅಧಿಕಾರಿಗಳು ಕೈಗೊಳ್ಳುವ ಅಭಿವೃದ್ಧಿ ಕಾರ್ಯಗಳಿಗೆ ನೌಕರರು ಬೆಂಬಲ ನೀಡುತ್ತಾ ಬಂದಿದ್ದಾರೆ. ಮುಂದೆಯೂ ಸಂಸ್ಥೆಯ ಅಭಿವೃದ್ಧಿಗೆ ಸಂಪೂರ್ಣ ಸಹಕಾರ ನೀಡಲಾಗುವುದು. ಆದರೆ, ನೌಕರರಿಗೆ ಹೆತ್ತತಾಯಿಯ ಸ್ವರೂಪದಂತಿರುವ ಈ ಪಾರಂಪರಿಕ ಕೇಂದ್ರ ಕಚೇರಿ ಕಟ್ಟಡವನ್ನು ನೆಲಸಮಗೊಳಿಸಲು ಯಾವುದೇ ಕಾರಣಕ್ಕೂ ಒಪ್ಪಿಗೆ ನೀಡುವುದಿಲ್ಲ ಎಂದು ಸಂಘ ಸ್ಪಷ್ಟಪಡಿಸಿದೆ. ಪ್ರಸ್ತುತ ಕಟ್ಟಡ ಬಲಿಷ್ಠವಾಗಿದ್ದು, ಇನ್ನೂ 30ರಿಂದ 40 ವರ್ಷಗಳ ಕಾಲ ಬಾಳಿಕೆ ಬರುವ ಸ್ಥಿತಿಯಲ್ಲಿದೆ. ಹೀಗಾಗಿ ಅದನ್ನು ನೆಲಸಮಗೊಳಿಸಿ ಬಹುಮಹಡಿ ಕಟ್ಟಡ ನಿರ್ಮಿಸುವ ಯೋಜನೆಯನ್ನು ಕೈಬಿಟ್ಟು, ಐತಿಹಾಸಿಕ ಕುಮಾರಪಾರ್ಕ್ ಕೇಂದ್ರ ಕಚೇರಿ ಜಾಗವನ್ನು ಯಥಾಸ್ಥಿತಿಯಲ್ಲಿ ಮುಂದಿನ ಪೀಳಿಗೆಗೂ ಉಳಿಸಬೇಕು ಎಂದು ಬಿಡಿಎ ನೌಕರರ ಸಂಘ ಆಗ್ರಹಿಸಿದೆ.



ಅರಣ್ಯ ಇಲಾಖೆಯು ನಡೆಸುವ ವಾಡಿಕೆಯ ಆರೋಗ್ಯ ಮತ್ತು ದೈಹಿಕ ಸಾಮರ್ಥ್ಯದ ತಪಾಸಣೆಯ ಅಂಗವಾಗಿ, ಭಾನುವಾರ ಮೈಸೂರಿಗೆ ಆಗಮಿಸಿದ ಮೂರು ದಸರಾ ಆನೆಗಳ ಎರಡನೇ ತಂಡದ ತೂಕವನ್ನು ಮಂಗಳವಾರ ಪರಿಶೀಲಿಸಲಾಯಿತು. ದಸರಾ ಆನೆಗಳ ಪೈಕಿ ಸುಗ್ರೀವ ಅತಿ ಹೆಚ್ಚು ತೂಕವನ್ನು ಹೊಂದಿದೆ.

### ಇಂದು, ನಾಳೆ, 79ನೇ ಕಲ್ಯಾಣ ಕರ್ನಾಟಕ ಉತ್ಸವ

# ಅದ್ಧೂರಿ ಸಾಂಸ್ಕೃತಿಕ, ಸಂಗೀತ, ನೃತ್ಯ, ಹಾಸ್ಯ, ಧ್ವನಿ–ಬೆಳಕು ಹಾಗೂ ಡ್ರೋನ್ ಪ್ರದರ್ಶನಕ್ಕೆ ಸಿದ್ಧತೆ

**ಕಲಬುರಗಿ, ಸೆ. 15:** 79ನೇ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ–2026ರ ಅಂಗವಾಗಿ ಕಲಬುರಗಿ ನಗರದಲ್ಲಿ ಸೆ.16 ಮತ್ತು 17ರಂದು ವೈವಿಧ್ಯಮಯ ಸಾಂಸ್ಕೃತಿಕ ಹಾಗೂ ಸಾರ್ವಜನಿಕ ಕಾರ್ಯ ಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದರು.

ಮಾಧ್ಯಮಗಳೊಂದಿಗೆ , ಪಬ್ಲಿಕ್ ಗಾರ್ಡನ್, ಅಪ್ಪನ ಕೆರೆ ಹಾಗೂ ಡಾ.ಎಸ್.ಎಂ. ಪಂಡಿತ್ ಜಿಲ್ಲಾ ರಂಗಮಂದಿರ ಸೇರಿದಂತೆ ನಗರದ ಪ್ರಮುಖ ಸ್ಥಳಗಳಲ್ಲಿ ಎರಡು ದಿನಗಳ ಕಾಲ ಸಂಗೀತ, ನೃತ್ಯ, ಹಾಸ್ಯ, ಕಲಾ ಪ್ರದರ್ಶನ ಹಾಗೂ ಮನರಂಜನಾ ಕಾರ್ಯಕ್ರಮಗಳನ್ನು ಆಯೋಜಿಸ ಲಾಗಿದೆ. ಸೆ.16ರಂದು ಪಬ್ಲಿಕ್ ಗಾರ್ಡನ್‌ನಲ್ಲಿ ಸಂಜೆ 6.30ಕ್ಕೆ ಸ್ಥಳೀಯ ಪ್ರತಿಭೆಗಳಿಗೆ ಮುಕ್ತ ವೇದಿಕೆ ಕಲ್ಪಿಸಲಾಗಿದ್ದು, ನಂತರ ಶಾಸ್ತ್ರೀಯ ನೃತ್ಯ ಹಾಗೂ ನೃತ್ಯ ಪ್ರದರ್ಶನಗಳು ಜರುಗಲಿವೆ. 8 ಗಂಟೆಗೆ ಮುಖ್ಯಮಂತ್ರಿ ಅವರಿಂದ ಬೀದಿ ಉತ್ಸವಕ್ಕೆ ಚಾಲನೆ ನೀಡಲಾಗುತ್ತದೆ. ಬಳಿಕ ರಾತ್ರಿ 8.30ರಿಂದ 10ರ ವರೆಗೆ 'ಸವಾರಿ' ಬ್ಯಾಂಡ್‌ನ ಸಂಗೀತ ಕಾರ್ಯಕ್ರಮ ನಡೆಯಲಿದೆ. ಅಪ್ಪನ ಕೆರೆ



ಉದ್ಯಾನವನದಲ್ಲಿ ಸಂಜೆ 7ರಿಂದ ಭೈರವ್ ಮತ್ತು ತಂಡದಿಂದ ಇಂಡೋ–ಫ್ಯೂಷನ್ ವಾದ್ಯ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ. ಮುಖ್ಯಮಂತ್ರಿ ಅವರಿಂದ ಕೆರೆ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ನಡೆಯಲಿದ್ದು, ರಾತ್ರಿ 9ರಿಂದ ಧ್ವನಿ ಮತ್ತು ಬೆಳಕಿನ ಪ್ರದರ್ಶನದ ಜತೆಗೆ ಡ್ರೋನ್ ಪ್ರದರ್ಶನವೂ ನಡೆಯಲಿದೆ.

ಸೆ.17ರಂದು ಬೆಳಿಗ್ಗೆ 8.30ಕ್ಕೆ ಪೊಲೀಸ್ ಪರೇಡ್ ಮೈದಾನದಲ್ಲಿ ಧ್ವಜಾರೋಹಣ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಇದೇ ಸಂದರ್ಭದಲ್ಲಿ ವಿಲಾಸ್ ನಾಯಕ್ ಅವರ ನೇರ ಚಿತ್ರಕಲಾ ಪ್ರದರ್ಶನ ವಿಶೇಷ ಆಕರ್ಷಣೆಯಾಗಲಿದೆ.

ಸಂಜೆ ಡಾ.ಎಸ್.ಎಂ. ಪಂಡಿತ್ ಜಿಲ್ಲಾ ರಂಗಮಂದಿರದಲ್ಲಿ ಗಣೇಶ ವಂದನೆಯೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ದಿವೇಶ್ ಮುರಳೀಧರನ್ ಹಾಗೂ ಸೋನು ವೇಣುಗೋಪಾಲ್ ಅವರ ಸ್ಟ್ಯಾಂಡ್‌ಅಪ್ ಹಾಸ್ಯ, ಸ್ಟೆಪ್ ಎನ್ ಸ್ಟೈಲ್ ತಂಡದ ಸಮಕಾಲೀನ ನೃತ್ಯ ಹಾಗೂ 'ಅಕೌಸ್ಟಿಕ್ ಸಾಗಾ' ಬ್ಯಾಂಡ್‌ನ ಬಹುಭಾಷಾ ಸಂಗೀತ ಕಾರ್ಯಕ್ರಮಪಬ್ಲಿಕ್ ಗಾರ್ಡನ್‌ನಲ್ಲಿ ಸಂಜೆ 6.30ರಿಂದ ನೃತ್ಯ, ಸುಗಮ ಸಂಗೀತ ಹಾಗೂ ಸ್ಟ್ಯಾಂಡ್‌ಅಪ್ ಹಾಸ್ಯ ಕಾರ್ಯಕ್ರಮಗಳ ಬಳಿಕ ರಾತ್ರಿ 8ರಿಂದ 10ರವರೆಗೆ ಜೀ ಕನ್ನಡ 'ಸರಿಗಮಪ' ತಂಡದ ಸಂಗೀತ ಕಾರ್ಯಕ್ರಮ ಜರುಗಲಿದೆ. ಅಪ್ಪನ ಕೆರೆಯಲ್ಲಿ ರಾತ್ರಿ 9.30ರವರೆಗೆ ಪ್ರತಿ 30 ನಿಮಿಷಕ್ಕೊಮ್ಮೆ ಧ್ವನಿ ಮತ್ತು ಬೆಳಕಿನ ಪ್ರದರ್ಶನ ನಡೆಯಲಿವೆ.

### ಸುಲ್ತಾನಪುರದಲ್ಲಿ ಪ್ರಜಾಸೇವಾ ಸಭೆ

# ಗೃಹಲಕ್ಷ್ಮಿ ಹಣ, ಉದ್ಯೋಗ, ವಿದ್ಯುತ್ ಇಲ್ಲ ಎಂದು ಜನರ ಅಳಲು

**ಕಲಬುರಗಿ, ಸೆ. 15:** ಹಲವು ತಿಂಗಳಿಂದ ಗೃಹಲಕ್ಷ್ಮಿ ಹಣ ಬಂದಿಲ್ಲ, ಬೆಳೆಗಳಿಗೆ ಸಮರ್ಪಕ ನೀರು ಬಿಡಲು ವಿದ್ಯುತ್ ಪೂರೈಕೆ ಆಗುತ್ತಿಲ್ಲ, ವಿಬಿ ಜಿ ರಾಮ್ ಜಿ ಯೋಜನೆಯಡಿ ನಮಗೆ ಉದ್ಯೋಗ ನೀಡುತ್ತಿಲ್ಲ. ತಾಲ್ಲೂಕಿನ ತಾಜಸುಲ್ತಾನ ಪುರದಲ್ಲಿ ಆಯೋಜಿಸಿದ್ದ ಪ್ರಜಾಸೇವಾ ಸಭೆಯಲ್ಲಿ ಶಾಸಕ ಅಲ್ಲಮಪ್ರಭು ಪಾಟೀಲ ಅವರ ಎದುರು ಸಲ್ಲಿಕೆಯಾದ ಅಹವಾಲುಗಳಿವು.



ಸಭೆಗೆ ಬಂದಿದ್ದ ಮಹಿಳೆಯರು ತಮಗೆ ಗೃಹಲಕ್ಷ್ಮಿ ಹಣ ಬಾರದೇ ಇರುವುದರಿಂದ ತಿಂಗಳ ಖರ್ಚು ನಿಭಾಯಿಸುವುದು ಕಷ್ಟವಾಗುತ್ತಿದೆ ಎಂದು ಅಳಲು ತೋಡಿಕೊಂಡರು. ಗ್ರಾಮ ಪಂಚಾಯಿತಿಗೆ ಅಲೆದಾಡುತ್ತಿದ್ದರೂ ವಿಬಿ ಜಿ ರಾಮ್ ಜಿ ಯೋಜನೆಯಡಿ ನಮಗೆ ಕೆಲಸ ನೀಡುತ್ತಿಲ್ಲ. ಬರಗಾಲದಿಂದಾಗಿ ಜಮೀನಿನಲ್ಲಿ ಕೆಲಸವಿಲ್ಲ. ಆದ್ದರಿಂದ ಪಂಚಾಯಿತಿ ಕೆಲಸ ಕೊಡಬೇಕು ಎಂದು ಕಾರ್ಮಿಕರು ಶಾಸಕರಿಗೆ ಒತ್ತಾಯಿಸಿದರು. ವೃದ್ಧಾಪ್ಯ ವೇತನ ಸ್ಥಗಿತಗೊಂಡಿದ್ದ ರಿಂದ ಔಷಧಕ್ಕೆ ಹಣವಿಲ್ಲದಂತಾಗಿದೆ ಎಂಬುದು ಸೇರಿದಂತೆ ತರಹೇವಾರಿ ಸಮಸ್ಯೆಗಳ ಪರಿಹಾರಕ್ಕೆ ಗ್ರಾಮಸ್ಥರು ಶಾಸಕರನ್ನು ಒತ್ತಾಯಿಸಿದರು.

ಗ್ರಾಮದ ಮುಖಂಡ ಚಂದ್ರಶೇಖರ ಪಾಟೀಲ ಮಾತನಾಡಿ, ಪ್ರಸ್ತುತ ಬರಗಾಲವಿರುವ ಕಾರಣ ತಾಜಸುಲ್ತಾನಪುರ, ಸೈಯದ್ ಚಿಂಚೋಳಿ ಗ್ರಾಮಕ್ಕೆ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿದ್ದು, ಭೋಸಗಾ ಕೆರೆ ಮೂಲಕ ಹಳ್ಳಕ್ಕೆ ನೀರು ಬಿಟ್ಟರೆ ದನಕರುಗಳಿಗೆ ಕುಡಿಯುವ ನೀರು ದೊರೆಯುವುದಲ್ಲದೆ ಗ್ರಾಮದಲ್ಲಿ ಬಾವಿಗಳು ಮರುಪೂರಣಗೊಂಡು ಕುಡಿಯುವ ನೀರು ಲಭ್ಯವಾಗಲಿದೆ ಎಂದು ಶಾಸಕರಲ್ಲಿ ಮನವಿ ಮಾಡಿದರು. ಗ್ರಾಮದ ಯುವಕ ಗುರು ಸುಲ್ತಾನಪುರ ಮಾತನಾಡಿ, 7 ಗಂಟೆ ವಿದ್ಯುತ್ ಬದಲು ಕೇವಲ 2 ಗಂಟೆ ನೀಡುತ್ತಿರುವುದರಿಂದ ನೀರಿಲ್ಲದೆ ಬೆಳೆದ ಕಬ್ಬು ಒಣಗಿದೆ. ಗ್ರಾಮಕ್ಕೆ ನಿರಂತರ ವಿದ್ಯುತ್ ಒದಗಿಸಿ ಎಂದು ಶಾಸಕರಲ್ಲಿ ಬೇಡಿಕೆ ಇಟ್ಟರು. ಕೂಡಲೇ ಸಮಸ್ಯೆ ಬಗೆಹರಿಸುವಂತೆ ಜೆಸ್ಕಾಂ ಕಿರಿಯ ಎಂಜಿನಿಯರ್ ರಾಹುಲ ದೇವ ಅವರಿಗೆ ಶಾಸಕರು ಸೂಚನೆ ಕೊಟ್ಟರು.

ಶಾಸಕ ಅಲ್ಲಮಪ್ರಭು ಪಾಟೀಲ, ಕಳೆದ ವರ್ಷ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಬೆಳೆ ವಿಮೆ ಮಾಡಿಸಿಕೊಂಡ ರೈತರಿಗೆ 30.21 ಕೋಟಿ ಮತ್ತು ರಾಜ್ಯ ಸರ್ಕಾರದಿಂದ ಅತಿವೃಷ್ಟಿಗೆ 7.35 ಕೋಟಿ ಪರಿಹಾರ ಸಿಕ್ಕಿದೆ. ವಿಶೇಷವಾಗಿ ಸೈಯದ್ ಚಿಂಚೋಳಿ–ತಾಜ ಸುಲ್ತಾನಪುರ ಗ್ರಾಮದ ರೈತರಿಗೆ 5.57 ಕೋಟಿ ಪರಿಹಾರ ನೀಡಲಾಗಿದೆ ಎಂದು ತಿಳಿಸಿದರು.

ಈ ಹಿಂದೆಯೂ ಗ್ರಾಮದಲ್ಲಿ ಸಮಸ್ಯೆ ಆಲಿಸಿರುವೆ. ತಾಜ ಸುಲ್ತಾನಪುರ–ಬೇಲೂರ ಸಂಪರ್ಕ ಕಲ್ಪಿಸುವ 2 ಕೋಟಿ ರಸ್ತೆ ಕಾಮಗಾರಿ ಕಲ್ಯಾಣ ಪಥದಲ್ಲಿ ಕೈಗೆತ್ತಿಕೊಂಡಿದೆ. ಸುಲ್ತಾನಪುರ–ಗಣಜಲಖೇಡ್ ರಸ್ತೆ 50 ಲಕ್ಷ ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆ. 20 ಲಕ್ಷ ಗ್ರಾಮದ ರುದ್ರಭೂಮಿಗೆ, ಹನುಮಾನ ದೇವಸ್ಥಾನದ ಜೀರ್ಣೋದ್ಧಾರಕ್ಕೆ 7 ಲಕ್ಷ ಹಾಗೂ ಬೀರಲಿಂಗೇಶ್ವರ ದೇವಸ್ಥಾಕ್ಕೆ 3 ಲಕ್ಷ ನೀಡಲಾಗಿದೆ. ಅಂಬೇಡ್ಕರ್ ಸಮುದಾಯ ಭವನಕ್ಕೂ ಅನುದಾನ ನೀಡಲಾಗುವುದು ಎಂದು ಶಾಸಕ ಅಲ್ಲಮಪ್ರಭು ಪಾಟೀಲ್ ಅವರು ಭರವಸೆ ನೀಡಿದರು.

ಜಿಲ್ಲಾಧಿಕಾರಿ ಇಕ್ರಂ ಶರೀಫ್ ಮಾತನಾಡಿ, ಗ್ರಾಮಸ್ಥರು ಏನೇ ಸಮಸ್ಯೆಗಳಿದ್ದಲ್ಲಿ ಕೌಂಟರ್‌ನಲ್ಲಿ ಲಿಖಿತ ಅರ್ಜಿ ಸಲ್ಲಿಸಿ ಸ್ವೀಕೃತಿ ಪಡೆಯಬೇಕು. ಅರ್ಜಿ ಸಲ್ಲಿಸದೆ ಕೇವಲ ನಮ್ಮಲ್ಲಿ ಬಂದು ಮೌಖಿಕವಾಗಿ ತಿಳಿಸಿದರೆ ಸಮಸ್ಯೆ ಬಗೆಹರಿಯು ವುದಿಲ್ಲ. ಇಡೀ ದಿನ ನಿಮಗಾಗಿ ಆಡಳಿತ ವರ್ಗ ಇಲ್ಲಿರಲಿದೆ. ನಿಮ್ಮ ಸಮಸ್ಯೆ ಆಲಿಸಲಿದೆ ಎಂದರು. ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ, ಪ್ರಸಕ್ತ ವರ್ಷ ಬರಗಾಲದ ಛಾಯೆ ಆವರಿಸಿದೆ. ಈ ವರ್ಷ 4.53 ಲಕ್ಷ ರೈತರು 5.50 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ಬೆಳೆ ವಿಮೆ ಮಾಡಿಕೊಂಡಿದ್ದಾರೆ. ಕಳೆದ ವರ್ಷ 585 ಕೋಟಿ ಬೆಳೆ ಪರಿಹಾರವನ್ನು ರೈತರಿಗೆ ನೀಡಲಾಗಿದೆ. ಸರ್ಕಾರ ರೈತರಿಗೆ ಕೃಷಿ ಯಂತ್ರೋಪಕರಣ ಬಾಡಿಗೆ ಪಡೆಯಲು, ಬೀಜ, ಔಷದ ಸಿಂಪಡಣೆ ಡ್ರೋನ್ ಸೌಲಭ್ಯ ಪಡೆಯುವ ಅನೇಕ ಸವಲತ್ತು ಕಲ್ಪಿಸಿದ್ದು, ರೈತ ಬಾಂಧವರು ಸೌಲಭ್ಯ ಪಡೆಯಬೇಕು ಎಂದು ಕೋರಿದರು.ಕಲಬುರಗಿ ತಹಶೀಲ್ದಾರ್ ಕೆ.ಆನಂದಶೀಲ ಪ್ರಜಾಸೇವೆ ಸಭೆಯ ಉದ್ದೇಶ ವಿವರಿಸಿದರು. 135 ಅರ್ಜಿ ಸಲ್ಲಿಕೆ; 6 ಜನರಿಗೆ ವೃದ್ಧಾಪ್ಯ ವೇತನ: ಪ್ರಜಾಸೇವೆ ಸಭೆಯಲ್ಲಿ ಕಂದಾಯ ಇಲಾಖೆ–70, ಗ್ರಾಮೀಣಾಭಿವೃದ್ಧಿ–41 ಸೇರಿದಂತೆ ಒಟ್ಟು 9 ಇಲಾಖೆಗೆ ಸಂಬಂಧಿಸಿದ 135 ಅರ್ಜಿಗಳು ಸಲ್ಲಿಕೆಯಾಗಿವೆ. ಇದರಲ್ಲಿ ವೃದ್ಧಾಪ್ಯ ವೇತನಕ್ಕಾಗಿ ಅರ್ಜಿ ಸಲ್ಲಿಸಿದ ತಾಜ ಸುಲ್ತಾನಪುರ ಗ್ರಾಮದ ಭೀಮಶಾ ಕಲ್ಲಪ್ಪ ಅವರಿಗೆ ಹಾಗೂ ಸಂಧ್ಯಾ ಸುರಕ್ಷಾ ವೇತನಕ್ಕೆ ಅರ್ಜಿ ಸಲ್ಲಿಸಿದ ಕಾಶಿಬಾಯಿ ರೇವಣಸಿದ್ದಪ್ಪ, ಸರಸ್ವತಿ ಶರಣಬಸಪ್ಪ, ಶರಣಬಸಪ್ಪ ಬಸವಣ್ಣಪ್ಪ, ಶಿವಶರಣಪ್ಪ ಕಲ್ಯಾಣಪ್ಪ ಹಾಗೂ ಸಂಗಮ್ಮ ರೇವಣಸಿದ್ದಪ್ಪ ಅವರಿಗೆ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಸ್ಥಳದಲ್ಲಿಯೇ ಮಂಜೂರಾತಿ ಆದೇಶ ನೀಡಿದರು.

# ವಿಶೇಷ ಸ್ಥಾನಮಾನದ ವರವೇ ಶಾಪವಾಯ್ತೇ? ಕಲ್ಯಾಣ ಕರ್ನಾಟಕದ ನೌಕರರ ಬಡ್ತಿಗೆ 371–ಜೆ ಗ್ರಹಣ

**ಕಲಬುರಗಿ, ಸೆ. 15:** ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಪ್ರಾತಿನಿಧ್ಯ ಸಿಕ್ಕಿ ಇದೀಗ 13 ವರ್ಷಗಳು ಕಳೆದಿವೆ. ಆದರೆ, ಈ ಭಾಗದ ನೌಕರರಿಗೆ 371–ಜೆ ವಿಶೇಷ ಸ್ಥಾನಮಾನ ವರವಾಗದೆ, ಶಾಪವಾಗಿ ಪರಿಣಮಿಸಿದೆ. ಕಲ್ಯಾಣದ ನೌಕರರು ಜೂನಿಯರ್‌ಗಳಾದರೆ, ಕಲ್ಯಾಣ ಕರ್ನಾಟಕೇತರರು ಸೀನಿಯರ್ ಗ್ರೇಡ್ ಹುದ್ದೆಗಳನ್ನು ಪಡೆಯುತ್ತಿದ್ದಾರೆ!

ಈ ಸಮಸ್ಯೆ ಬಗೆಹರಿಸಲು ಸರಕಾರ ಮುಂದಾಗದಿರುವುದಕ್ಕೆ ನೌಕರರ ವಲಯದಿಂದ ಆಕ್ರೋಶ ವ್ಯಕ್ತವಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗ ಹಿಂದುಳಿದ ಕಾರಣಕ್ಕಾಗಿ 371ಜೆ ವಿಶೇಷ ಸ್ಥಾನಮಾನವನ್ನು ಜಾರಿ ಮಾಡಲಾಗಿದೆ. ಆದರೆ, ಶಿಕ್ಷಣ ಮತ್ತು ನೇಮಕಾತಿಯಲ್ಲಿ ಪ್ರಸ್ತುತ ಸರಿಯಾಗಿ ಅನುಷ್ಠಾನಗೊ ಳ್ಳುತ್ತಿದೆ. ಆದರೆ, ಸರಕಾರಿ ನೌಕರರಿಗೆ 371ಜೆ ಯಾಕಾದರು ತರಲಾಗಿದೆ ಎನ್ನುವಂತಾಗಿದೆ. ಏಕೆಂದರೆ ಕಲ್ಯಾಣ ಕರ್ನಾಟಕ ಭಾಗದವರಿಗೆ ಸೀನಿಯಾ ರಿಟಿ ಇದ್ದರೂ ಬಡ್ತಿ ಸಿಗುತ್ತಿಲ್ಲ. ಆದರೆ, ಕಲ್ಯಾಣ ಕರ್ನಾಟಕೇತರ ಬೇರೆ ಜಿಲ್ಲೆಗಳ ನೌಕರರು ಈ ಭಾಗದ ನೌಕರರಿಗಿಂತ ಜೂನಿಯರ್ ಗಳಿದ್ದರೂ ಕಲ್ಯಾಣದವರಿಗಿಂತ ಬೇಗ ಬಡ್ತಿ ಪಡೆದು ನಮ್ಮ ಭಾಗದ ನೌಕರರಿಗಿಂತ ಸೀನಿಯರ್ ಗ್ರೇಡ್ ಹುದ್ದೆಗಳನ್ನು ಪಡೆಯುವಂತಾಗಿದೆ. ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ನೌಕರರು ಸರಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿ ಸುತ್ತಿದ್ದಾರೆ.

**ಏನಾಗುತ್ತಿದೆ ಸಮಸ್ಯೆ?:** ಸರಕಾರಿ ನೌಕರರಿಗೆ ಬಡ್ತಿಯನ್ನು ಜಾರಿ ಮಾಡುವಾಗ ಮೊದಲು ನೌಕರರ ಅಭಿಪ್ರಾಯಗಳನ್ನು ಸಂಗ್ರಹಿಸಲಾ ಗುತ್ತಿದೆ. ಯಾರಿಗೆ 371ಜೆ ಸೌಲಭ್ಯ ಬೇಕು ಎಂದು ಪ್ರಶ್ನೆ ಕೇಳಿದಾಗ ಅನಿವಾರ್ಯವಾಗಿ ಈ ಭಾಗದ ನೌಕರರು ಕಲ್ಯಾಣ ಕರ್ನಾಟಕ ಎಂದು ಆಯ್ಕೆ ಮಾಡಿಕೊಳ್ಳುತ್ತಾರೆ.

ಈ ಹಿನ್ನೆಲೆಯಲ್ಲಿ ಇಲಾಖೆಗಳು ಕಲ್ಯಾಣ ಕರ್ನಾಟಕ ಒಂದು ಸೀನಿಯಾರಿಟಿ ಲಿಸ್ಟ್ ಮತ್ತು ನಾನ್ ಕಲ್ಯಾಣ ಕರ್ನಾಟಕ ಇನ್ನೊಂದು ಲಿಸ್ಟ್ ಸೇರಿ ಒಟ್ಟು ಎರಡು ಲಿಸ್ಟ್‌ಗಳನ್ನು ಮಾಡಲಾಗುತ್ತಿದೆ. ಉದಾಹರಣೆಗೆ ಕಲ್ಯಾಣ ಕರ್ನಾಟಕದ 'ಸಿ' ಗ್ರೇಡ್ ನೌಕರ 'ಬಿ' ಗ್ರೇಡ್ ಹುದ್ದೆಗೆ ಬಡ್ತಿ





ಪಡೆಯಬೇಕಾದರೆ ಕಲ್ಯಾಣ ಕರ್ನಾಟಕದಲ್ಲಿ ಬಡ್ತಿಗೆ ಖಾಲಿ ಇರುವ ಶೇ.75ರಷ್ಟು ಹುದ್ದೆಗಳಲ್ಲಿ ಮಾತ್ರ ಅರ್ಹನಾಗಿರುತ್ತಾನೆ. ಕಲ್ಯಾಣ ಕರ್ನಾಟಕದವರು ಹೆಚ್ಚು ಜನರು ಇರುವಾಗ ಶೇ.75ರಷ್ಟು ಜನರಿಗೆ ಮಾತ್ರ ಬಡ್ತಿ ಸಿಗುತ್ತದೆ. ಆದರೆ, ಈ ಭಾಗದಲ್ಲಿ ಕಲ್ಯಾಣ ಕರ್ನಾಟಕೇತರ ನೌಕರರು ಶೇ.5ರಿಂದ 6ರಷ್ಟು ಇದ್ದಾರೆ. ಇವರಿಗೆ ಶೇ.20ರಿಂದ ಶೇ.25ರಷ್ಟು ಬಡ್ತಿಯಲ್ಲಿ ಹುದ್ದೆಗಳು ಖಾಲಿಯಿವೆ. ಇವರು ಕಡಿಮೆ ನೌಕರರು ಇದ್ದು, ಹೆಚ್ಚು ಹುದ್ದೆಗಳು ಸಿಗುವುದರಿಂದ ಅನಿವಾರ್ಯವಾಗಿ 'ಬಿ' ದರ್ಜೆಯ ಹುದ್ದೆ ಬಡ್ತಿ ಸಿಗುತ್ತದೆ. ಇದರಿಂದ ಕಲ್ಯಾಣದ ನೌಕರರು ಜೂನಿಯರ್‌ಗಳಾಗಿ ಉಳಿದರೆ ಬೇರೆ ಜಿಲ್ಲೆಯ ನೌಕರರು ಸೀನಿಯರ್‌ಗಳಾಗುತ್ತಿದ್ದಾರೆ!

# ಬಿಜೆಪಿ ಕಚೇರಿಯಲ್ಲಿ ಜಿಲ್ಲಾ ಸಂಘಟನಾತ್ಮಕ ಸಭೆ ಮಾಜಿ ಶಾಸಕ ಸೋಮಶೇಖರ ರೆಡ್ಡಿ ಭಾಗಿ



**ಬಳ್ಳಾರಿ,ಸೆ,15:** ಬಳ್ಳಾರಿ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಜಿಲ್ಲಾ ಸಂಘಟನಾತ್ಮಕ ಸಭೆಯಲ್ಲಿ ಬಳ್ಳಾರಿ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ ಪಾಲ್ಗೊಂಡು, ಪಕ್ಷದ ಸಂಘಟನಾ ಚಟುವಟಿಕೆಗಳು ಹಾಗೂ ಮುಂದಿನ ಕಾರ್ಯಕ್ರಮಗಳ ಕುರಿತು ಚರ್ಚಿಸಿದರು.

ತದನಂತರ ಇದೇ ತಿಂಗಳ 17ರಿಂದ ಒಂದು ತಿಂಗಳ ಕಾಲ ನಡೆಯಲಿರುವ 'ಸೇವಾ ಸಂಕಲ್ಪ ಅಭಿಯಾನ'ದ ರೂಪುರೇಷೆಗಳು ಹಾಗೂ ಕಾರ್ಯಕ್ರಮಗಳ ಕುರಿತು ಸಮಗ್ರವಾಗಿ ಚರ್ಚೆ ನಡೆಸಲಾಯಿತು. ಈ ಸಂದರ್ಭದಲ್ಲಿ ವಿಧಾನ ಪರಿಷತ್ತಿನ ಸದಸ್ಯರಾದ ಕೆ.ಎಸ್. ನವೀನ್, ವೈ. ಎಂ. ಸತೀಶ್, ಬಿಜೆಪಿ ಜಿಲ್ಲಾ ಅಧ್ಯಕ್ಷ ಅನಿಲ್ ಕುಮಾರ್ ನಾಯ್ಡು ಮೋಕಾ, ಬಿಜೆಪಿ ಮುಖಂಡರಾದ ಕೆ. ಎಸ್.ದಿವಾಕರ್, ವಿರೂಪಾಕ್ಷಿ ಗೌಡ, ಮುರಹರಿಗೌಡ, ನೂರ್‌ಭಾಷಾ, ಸುಗುಣ ಮತ್ತು ಹನುಮಂತಪ್ಪ, ಗುರುಲಿಂಗನಗೌಡ, ತಿಮ್ಮಾರೆಡ್ಡಿ ಹಾಗೂ ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಭಾಗಿಯಾಗಿದ್ದರು.

# ಅನ್ಯಧರ್ಮೀಯರು ನಿಮ್ಮ ಮನೆಎದುರು ಪಟಾಕಿ ಸಿಡಿಸಿದರೆ ಸಹಿರುತ್ತೀರಾ? ವಿಪಕ್ಷ ನಾಯಕ ಸಚಿವ ಹೆಚ್.ಸಿ. ಬಾಲಕೃಷ್ಣ ಪ್ರಶ್ನೆ

**ರಾಮನಗರ, ಸೆ.15:** ಟಿ.ನರಸೀಪುರ ಇನ್ಸ್‌ಪೆಕ್ಟರ್ ವಿರುದ್ಧ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವ ವಿಚಾರವಾಗಿ ಸಚಿವ ಹೆಚ್.ಸಿ.ಬಾಲಕೃಷ್ಣ ವಾಗ್ದಾಳಿ ನಡೆಸಿದ್ದಾರೆ.

ರಾಮನಗರದಲ್ಲಿ ಮಾತಾಡಿದ ಅವರು ನಮ್ಮದು ಆದರೆ ಬಿಜೆಪಿ ನಾಯಕರು ಕಟ್ ಆಂಡ್ ಪೇಸ್ಟ್ ವಿಡಿಯೋಗಳ ಮೂಲಕ ವಿನಾಕಾರಣ ಗೊಂದಲ ಸೃಷ್ಟಿಸುತ್ತಿದ್ದಾರೆ. ಇನ್ಸ್‌ಪೆಕ್ಟರ್ ಅವರು ಗಣೇಶ ಮೂರ್ತಿ ಪ್ರತಿಷ್ಠಾಪನೆ ವೇಳೆ ಜವಾಬ್ದಾರಿಯಿಂದ ನಿಯಮ ಪಾಲಿಸುವಂತೆ ಹೇಳಿದ್ದಾರಷ್ಟೇ. ಅನ್ಯ ಧರ್ಮೀಯರು ನಿಮ್ಮ ಮನೆ ಮುಂದೆ ಪಟಾಕಿ ಹೊಡೆದರೆ ಸಹಿಸುತ್ತೀರಾ, ಕಾನೂನು ಎಲ್ಲರಿಗೂ ಒಂದೇ" ಎಂದು ಆರ್.ಅಶೋಕ್ ಹಾಗೂ ಪ್ರತಾಪ್ ಸಿಂಹಗೆ ಸವಾಲು ಹಾಕಿದರು.

ಜಿಬಿಡಿಎ ಸಂಸ್ಥೆಯಲ್ಲಿ ನಕಲಿ ದಾಖಲೆ ಸೃಷ್ಟಿಸಿ ಪರಿಹಾರಕ್ಕೆ ಅರ್ಜಿ ಸಲ್ಲಿಸಿ ಕೋಟ್ಯಾಂತರ ರೂಪಾಯಿ ಅಕ್ರಮ ಎಸಗಲು ಯತ್ನಿಸಿರುವ ಜಾಲದ ವಿರುದ್ಧ ಸಚಿವರು ಹರಿಹಾಯ್ದರು.

ಜಿಬಿಡಿಎಗೆ ಕೆಟ್ಟ ಹೆಸರು ತರಲು ಹಾಗೂ ಸರ್ಕಾರದ ವಿರುದ್ಧ ಷಡ್ಯಂತ್ರ ರೂಪಿಸಲು ಈ ಕೆಲಸ ಮಾಡಿದ್ದಾರೆ. ಈ ನಕಲಿ ದಾಖಲೆ ಸೃಷ್ಟಿಸುವ ಜಾಲ ತಾಲೂಕು ಕಚೇರಿಗಳಲ್ಲೂ



ಸಕ್ರಿಯವಾಗಿದ್ದು, ಇದನ್ನು ಸಂಪೂರ್ಣ ಮಟ್ಟಹಾಕಲಾಗುವುದು. ಒಂದು ವಾರದೊಳಗೆ ತಪ್ಪಿತಸ್ಥರನ್ನು ಬಂಧಿಸುವಂತೆ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸ್ಪಷ್ಟಪಡಿಸಿದರು.

# ರಾಜ್ಯದ ವಿವಿಧೆಡೆ ಪ್ರತ್ಯೇಕ ಅವಘಡ: 10 ಮಂದಿ ಸಾವು

**ಮಂಡ್ಯದ ಕೊಪ್ಪ ಬಳಿ 3, ಬೆಳಗಾವಿ ಬಳಿ ಅಪಘಾತದಲ್ಲಿ ಮೂವರು, ಚಿಕ್ಕಮಗಳೂರು ಬಳಿ ಇಬ್ಬರು, ಕಲಬುರಗಿ, ದೇವನಹಳ್ಳಿ ಬಳಿ ತಲಾ ಒಬ್ಬರು ದುರ್ಮರಣ**

**ಮದ್ದೂರು, ಸೆ,15:** ಗಣೇಶ ಚತುರ್ಥಿ ಸಂಭ್ರಮದ ಬೆನ್ನಲ್ಲೇ ಮಂಡ್ಯದ ಮದ್ದೂರಿನ ಕೊಪ್ಪ ಬಳಿ ಸಂಭವಿಸಿ ಅಪಘಾತದಲ್ಲಿ ಮೂವರು, ಚಿಕ್ಕಮಗಳೂರು ಬಳಿ ಇಬ್ಬರು, ಕಲಬುರಗಿ, ದೇವನಹಳ್ಳಿ ಬಳಿ ತಲಾ ಒಬ್ಬರು, ಬೆಂಕಿ ಅವಘಡಕ್ಕೆ ನಾಲ್ವರು ಸೇರಿ 14 ಮಂದಿ ಮೃತಪಟ್ಟಿರುವ ದುರ್ಘಟನೆ ನಡೆದಿದೆ.


ಮದ್ದೂರಿನ ಕೊಪ್ಪ ಬಳಿ ಸಂಭವಿಸಿ ಅಪಘಾತದಲ್ಲಿ ದಂಪತಿ ಮಗಳು ಸೇರಿ ಮೂವರು, ಬೆಳಗಾವಿ ಜಿಲ್ಲೆಯ ಸವದತ್ತಿ ಬಳಿ ಬಸ್ ಡಿಕ್ಕಿ ಹೊಡೆದು ಮೂವರು ಯುವಕರು, ಚಿಕ್ಕಮಗಳೂರು ಬಳಿ ಬೈಕ್ ಅಪಘಾತ ದಲ್ಲಿ ಇಬ್ಬರು, ಕಲಬುರಗಿ, ದೇವನಹಳ್ಳಿ ಬಳಿ ತಲಾ ಒಬ್ಬರು ಮೃತಪಟ್ಟಿದ್ದಾರೆ.

ಕಲಬುರಗಿ ನಗರದ ಹೀರಾಪುರ ರಸ್ತೆಯ ಫೈಓವರ್‌ನಲ್ಲಿ ಗಣೇಶ ಮೂರ್ತಿ ತರಲು ಸ್ನೇಹಿತರೊಂದಿಗೆ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ.

ಕೊಟನೂರು ಬಡಾವಣೆಯ ಪ್ರಶಾಂತ್ ಬಿರಾದರ್ (23) ಮೃತಪಟ್ಟಿದ್ದಾರೆ.

ಬೈಕ್ ಟಚ್ ಆಗಿದ್ದರಿಂದ ರಸ್ತೆಗೆ ಬಿದ್ದು ಇಬ್ಬರ ತಲೆಗೆ ಗಂಭೀರ ಗಾಯಗಳಾಗಿತ್ತು.

# ಉದ್ಯೋಗ ಅವಕಾಶಗಳಿಗೆ ಕೌಶಲ್ಯಗಳು ಪೂರಕ : ಶಾಸಕ ನಾರಾ ಭರತರೆಡ್ಡಿ





**ಬಳ್ಳಾರಿ, ಸೆ.15:**ಯುವಜನರಿಗೆ ಉದ್ಯೋಗ ಅವಕಾಶಗಳನ್ನು ಒದಗಿಸುವಲ್ಲಿ ಕೌಶಲ್ಯಾಭಿವೃದ್ಧಿ ಪೂರಕ ಎಂದು ಬಳ್ಳಾರಿ ನಗರ ಕ್ಷೇತ್ರದ ಶಾಸಕರಾದ ನಾರಾ ಭರತರೆಡ್ಡಿ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

'ಕೌಶಲ್ಯ ತರಬೇತಿ ಪ್ರಮಾಣಪತ್ರ ವಿತರಣೆ' ಹಾಗೂ ಉದ್ಯೋಗ ಅವಕಾಶಗಳ ಮಾಹಿತಿಯನ್ನು ನೀಡುವ 'ಜಾಬ್ ಪೋರ್ಟಲ್' ಗೆ ಚಾಲನೆ ನೀಡಿ, ಸ್ಪರ್ಧಾತ್ಮಕ ಈ ಜಗತ್ತಿನಲ್ಲಿ ಉದ್ಯೋಗ ಪಡೆಯಲು ಶೈಕ್ಷಣಿಕ ಅರ್ಹತೆಯ ಜೊತೆಗೆ ಕೌಶಲ್ಯಗಳು ಅಗತ್ಯ. ಕೌಶಲಗಳನ್ನು ಕಲಿಯುವ ಮೂಲಕ ಉದ್ಯೋಗ ಕ್ಷೇತ್ರದಲ್ಲಿ ನೈಪುಣ್ಯತೆಯನ್ನು, ಅಭಿವೃದ್ಧಿಯನ್ನು, ಆರ್ಥಿಕವಾಗಿ ಬಲಗೊಳ್ಳಬಹುದು ಎಂದರು.

ಸಂಜೀವರಾಯನಕೋಟೆ ಸಮೀಪದಲ್ಲಿ 600 ಎಕರೆ ಭೂಮಿಯಲ್ಲಿ 5000 ಕೋಟಿ ಬಂಡವಾಳವನ್ನು ಹೂಡಿಕೆ ಮಾಡಿ ಅಂತರಾಷ್ಟ್ರೀಯ ಮಟ್ಟದ ಜೀನ್ಸ್ ಗಾರ್ಮೆಂಟ್ ಪಾರ್ಕನ್ನು ಪ್ರಾರಂಭಿಸಿ ಬಳ್ಳಾರಿ ಜಿಲ್ಲೆ, ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಶೇ. 80 ರಷ್ಟು ಉದ್ಯೋಗ ಸೃಷ್ಟಿಸಲಾಗುತ್ತದೆ. ಅಲ್ಲದೇ, ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗೆ ತಮ್ಮದೇ ಆಗಿರುವ 'ಟಚ್ ಫಾರ್ ಲೈಫ್? ಫೌಂಡೇಶನ್‌ನಿಂದ 10 ಲಕ್ಷ ರೂಪಾಯಿ ನೀಡುವುದಾಗಿ ಘೋಷಣೆ ಮಾಡಿದರು.

ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಕೌಶಲ್ಯವೇ ಯುವಜನರ ಭವಿಷ್ಯ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಶೈಕ್ಷಣಿಕ ಅರ್ಹತೆ ಇದ್ದರೆ ಸಾಕಾಗುವುದಿಲ್ಲ. ಉದ್ಯೋಗ ಕ್ಷೇತ್ರದ ಅಗತ್ಯಗಳಿಗೆ ಅನುಗುಣವಾಗಿ ಪ್ರಾಯೋಗಿಕ ಜ್ಞಾನ, ತಾಂತ್ರಿಕ ಕೌಶಲ್ಯ ಮತ್ತು ವೃತ್ತಿಪರ ಸಾಮರ್ಥ್ಯವನ್ನು ಹೊಂದಿರುವುದು ಅತ್ಯಂತ ಮುಖ್ಯ. ನಮ್ಮ ಸಂಸ್ಥೆಯ ಕೌಶಲ್ಯಾಭಿವೃದ್ಧಿ ಕೇಂದ್ರದ ಮೂಲಕ ವಿವಿಧ ತರಬೇತಿಗಳನ್ನು ಪಡೆದು ಯುವಜನರು ವೃತ್ತಿ ಜೀವನವನ್ನು ರೂಪಿಸಿಕೊಂಡಿ ರುವುದು ಹೆಮ್ಮೆಯ ವಿಷಯ. ಗೌರವ ಕಾರ್ಯದರ್ಶಿಗಳಾದ ಕೆ.ಸಿ. ಸುರೇಶಬಾಬು ಅವರು, ಸಂಸ್ಥೆಯು ಯುವಜನರಿಗೆ ಕೌಶಲ್ಯಾಭಿವೃದ್ಧಿ ಹಾಗೂ ಉದ್ಯೋಗಾವಕಾಶಗಳನ್ನು ಒದಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಶ್ರಮಿಸುತ್ತಿದೆ. ನಮ್ಮ ಸಂಸ್ಥೆಯ ಕೌಶಲ್ಯ ತರಬೇತಿ ಕೇಂದ್ರವು ಅನೇಕರ ಭವಿಷ್ಯದ ಭಾಗವಾಗಲಿದೆ ಎಂದರು.

ಕೌಶಲ್ಯಾಭಿವೃದ್ಧಿ ಕೇಂದ್ರದ ಸಿಇಒ ಡಾ. ಡಿ. ಎಲ್. ರಮೇಶಗೋಪಾಲ್ ಅವರು, ಸ್ವಾಗತಿಸಿ, ಕೌಶಲ್ಯಾಭಿವೃದ್ಧಿ ಕೇಂದ್ರದ ಚಟುವಟಿಕೆಗಳು, ತರಬೇತಿ ಕಾರ್ಯಕ್ರಮಗಳು ಹಾಗೂ ತರಬೇತಿ ಪಡೆದು ಖ್ಯಾತರಾದವರ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ ಐಟಿ ಕಮಿಟಿ ಚೇರ್ಮನ್ ಪಿ. ವೇಣುಗೋಪಾಲ ಗುಪ್ತ ಅವರು, ಉದ್ಯೋಗ ಅವಕಾಶಗಳ ಕುರಿತಾದ ಉದ್ಯೋಗದಾತರು ಮತ್ತು ಉದ್ಯೋಗಗಳ ಹುಡುಕಾಟ ಮಾಡುತ್ತಿರುವ ಮಧ್ಯವರ್ತಿಯ ರೀತಿಯಲ್ಲಿ ಜಾಬ್ ಪೋರ್ಟಲ್ ಕಾರ್ಯನಿರ್ವಹಿಸುತ್ತದೆ. ಆಸಕ್ತರು ಸಂಸ್ಥೆಗಳ ಬೇಡಿಕೆಯನ್ನು ಮತ್ತು ಉದ್ಯೋಗ ಹುಡುಕಾಡುವವರು ನೋಂದಣಿ ಮಾಡಿಕೊಳ್ಳಬೇಕು ಎಂದರು.

### ಬಳ್ಳಾರಿಯಲ್ಲಿ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

# ಪ್ರಜಾಪ್ರಭುತ್ವ ಉಳಿಸಲು ಯುವಜನತೆ ನಾಯಕತ್ವ ಗುಣ ಬೆಳೆಸಿಕೊಳ್ಳಿ: ಅಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ ಕರೆ

**ಬಳ್ಳಾರಿ,ಸೆ.15.**ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೌಲ್ಯಗಳನ್ನು ಎತ್ತಿಹಿಡಿಯುವ ಜವಾಬ್ದಾರಿ ಇಂದಿನ ಯುವ ಪೀಳಿಗೆಯ ಮೇಲಿದ್ದು, ಯುವಕರು ಮೊಬೈಲ್ ವ್ಯಾಮೋಹ ದಿಂದ ಹೊರಬಂದು ಪುಸ್ತಕ ಓದುವ ಹವ್ಯಾಸ ಹಾಗೂ ನಾಯಕತ್ವದ ಗುಣಗಳನ್ನು ಮೈಗೂಡಿಸಿ ಕೊಳ್ಳಬೇಕು ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ ಅವರು ಹೇಳಿದರು.

ಹಿಂದೆ ರಾಜಪ್ರಭುತ್ವದ ಕಾಲದಲ್ಲಿ ಕೇವಲ ರಾಣಿಯ ಗರ್ಭದಿಂದ ಮಾತ್ರ ರಾಜರು ಜನಿಸುತ್ತಿದ್ದರು. ಆದರೆ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಮಾನತೆಯ ಸಂವಿಧಾನ ರಚಿಸಿ, ಪ್ರತಿಯೊಬ್ಬ ಪ್ರಜೆಗೂ ಸಮಾನ ಮತದಾನದ ಹಕ್ಕು ನೀಡುವ ಮೂಲಕ ಅಧಿಕಾರವನ್ನು ಬ್ಯಾಲೆಟ್ ಪೆಟ್ಟಿಗೆಯಿಂದ ನಿರ್ಧರಿಸುವಂತೆ ಮಾಡಿದರು. ಇಂದು ಸಾಮಾನ್ಯ ಗ್ರಾಮ ಪಂಚಾಯತಿ ಸದಸ್ಯನಿಂದ ಹಿಡಿದು ಮುಖ್ಯಮಂತ್ರಿ, ಪ್ರಧಾನಿ ಹಾಗೂ ರಾಷ್ಟ್ರಪತಿಗಳವರೆಗೆ ಎಲ್ಲರೂ ಪ್ರಜಾಪ್ರಭುತ್ವದ ಮತಪೆಟ್ಟಿಗೆಯ ಫಲವಾಗಿದ್ದಾರೆ ಎಂದು ಸಂವಿಧಾನ ಶಿಲ್ಪಿಯ ಕೊಡುಗೆಯನ್ನು ಸ್ಮರಿಸಿದರು.

ಬಾಬಾಸಾಹೇಬರು 2 ವರ್ಷ 11 ತಿಂಗಳು 18 ದಿನಗಳ ಕಾಲ ಕಠಿಣ ಪರಿಶ್ರಮ ವಹಿಸಿ ರಚಿಸಿದ ಸಂವಿಧಾನದಿಂದಾಗಿ ಇಂದು ನಮಗೆ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಸಮಾನತೆ ದೊರೆತಿದೆ. ಈ ಹಿನ್ನೆಲೆಯಲ್ಲಿ ಕಾಲೇಜುಗಳಲ್ಲಿ ಸಂವಿಧಾನ ಓದುವ ಕಾರ್ಯಕ್ರಮಗಳು ಹಾಗೂ ಯುವ ಸಂಸತ್ ಮಾದರಿಯ ಚಟುವಟಿಕೆಗಳು ಹೆಚ್ಚು ನಡೆಯಬೇಕಿದೆ ಎಂದು ಅಭಿಪ್ರಾಯಪಟ್ಟರು. ಯುವಜನತೆ ಸಮಾಜಕ್ಕೆ ಹೆದರದೆ, ಬದಲಾಗಿ ಸಮಾಜವೇ ಗೌರವಿಸುವ ಮಟ್ಟಕ್ಕೆ ಜ್ಞಾನಾರ್ಜನೆ ಮಾಡಬೇಕು. ಕೇವಲ ರೀಲ್ಸ್, ಸಾಮಾಜಿಕ ಜಾಲತಾಣಗಳಲ್ಲಿ ಸಮಯ ವ್ಯರ್ಥ ಮಾಡದೆ, ದೂರದೃಷ್ಟಿ, ಪ್ರಾಮಾಣಿಕತೆ, ಆತ್ಮವಿಶ್ವಾಸ, ಸಂವಹನ ಕಲೆ ಹಾಗೂ ನಾಯಕತ್ವದ ಗುಣಗಳನ್ನು



ಬೆಳೆಸಿಕೊಂಡು ಬಲಿಷ್ಠ ಪ್ರಜಾಪ್ರಭುತ್ವ ನಿರ್ಮಾಣಕ್ಕೆ ಕೈಜೋಡಿಸಬೇಕೆಂದು ಕರೆ ನೀಡಿದರು.

ಮಹಾನಗರ ಪಾಲಿಕೆ ಮಹಾಪೌರರಾದ ಪಿ. ಗಾದೆಪ್ಪ ಅವರು ಮಾತನಾಡಿ, ಇಂದು ನಾವೆಲ್ಲರೂ ಭಾರತದಲ್ಲಿ ಸ್ವತಂತ್ರವಾಗಿ, ನಿರಾಳವಾಗಿ ಹಾಗೂ ಸ್ವಇಚ್ಛೆಯಿಂದ ಜೀವಿಸಲು ಡಾ. ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದ ತಂಡ ರಚಿಸಿದ ಸಂವಿಧಾನವೇ ಮೂಲ ಕಾರಣ ಎಂದು ಹೇಳಿದರು. ದೇಶದ ಮುಂದಿನ ಪೀಳಿಗೆಯ ಉಜ್ವಲ ಭವಿಷ್ಯವನ್ನು ದೃಷ್ಟಿಯಲ್ಲಿಟ್ಟು ಕೊಂಡು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಊಟ, ನಿದ್ರೆ ಮತ್ತು ಮೂಲ ಸೌಕರ್ಯಗಳನ್ನೂ ಲೆಕ್ಕಿಸದೆ ಪಟ್ಟ ಕಷ್ಟ ಹಾಗೂ ಪರಿಶ್ರಮದ ಫಲವೇ ಇಂದಿನ ಸುಭದ್ರ ಭಾರತ ಎಂದರು. ಅವರ ತ್ಯಾಗ ಮತ್ತು ಆದರ್ಶಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ ಎಂದು ಕರೆ ನೀಡಿದರು.

ಜಿಲ್ಲಾಧಿಕಾರಿ ಕೆ. ನಾಗೇಂದ್ರ ಪ್ರಸಾದ್ ಅವರು ಮಾತನಾಡಿ, ವಿಶ್ವದಲ್ಲೇ ಅತ್ಯುತ್ತಮವಾದ ಆಡಳಿತ ವ್ಯವಸ್ಥೆ ಎಂದರೆ ಅದು ಪ್ರಜಾಪ್ರಭುತ್ವ ಮಾತ್ರ. ಡಾ. ಬಿ.ಆರ್. ಅಂಬೇಡ್ಕರ್ ಅವರು ಎಲ್ಲ ಬಗೆಯ ಆಡಳಿತ ಮಾದರಿಗಳನ್ನು ಆಳವಾಗಿ ಅಧ್ಯಯನ ಮಾಡಿದ ನಂತರ, ಭಾರತಕ್ಕೆ ಪ್ರಜಾಪ್ರಭುತ್ವವೇ ಶ್ರೇಷ್ಠವೆಂದು ನಿಸ್ಸಂದೇಹವಾಗಿ ಶಿಫಾರಸು ಮಾಡಿದರು. ಸಂವಿಧಾನದ ಮೂಲಕ ಪ್ರತಿಯೊಬ್ಬ ನಾಗರಿಕನಿಗೂ ಯಾವುದೇ ತಾರತಮ್ಯವಿಲ್ಲದೆ ಒಬ್ಬ ವ್ಯಕ್ತಿ, ಒಂದು ಮತ' ಎಂಬ ಸಮಾನ ಹಕ್ಕನ್ನು ತಂದುಕೊಟ್ಟರು


ಪ್ರಜಾಪ್ರಭುತ್ವದಲ್ಲಿ ಜನರೇ ಕೇಂದ್ರಬಿಂದು. ಸರ್ಕಾರ ಬೇರೆ, ಪ್ರಜೆಗಳು ಬೇರೆ ಅಲ್ಲ; ಸರ್ಕಾರ ನಮ್ಮದೇ ಆಗಿದೆ. ಜನಪ್ರತಿನಿಧಿಗಳು ಅಥವಾ ಆಡಳಿತ ಸರಿಯಿಲ್ಲದಿದ್ದರೆ ಅವರನ್ನು ಬದಲಾಯಿ ಸುವ ಸಂಪೂರ್ಣ ಅಧಿಕಾರ ಪ್ರಜೆಗಳ ಕೈಯಲ್ಲಿದೆ. ಚುನಾವಣೆ ದಿನವನ್ನು ಕೇವಲ ರಜಾದಿನವೆಂದು ಭಾವಿಸಿ ಮನೆಯಲ್ಲಿ ಉಳಿಯದೆ, ಪ್ರತಿಯೊಬ್ಬರೂ ಮತ ಚಲಾಯಿಸುವ ಮೂಲಕ ಉತ್ತಮ ಸರ್ಕಾರ ಹಾಗೂ ಜನಪ್ರತಿನಿಧಿಗಳನ್ನು ಆಯ್ಕೆ ಮಾಡ ಬೇಕು ಎಂದು ಕರೆ ನೀಡಿದರು.

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಜಾಗತಿಕ ಮಟ್ಟದಲ್ಲಿ ಪಸರಿಸಲು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಸೆಪ್ಟೆಂಬರ್ 15 ಅನ್ನು ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನಾಗಿ ಘೋಷಿಸಿದೆ. ಈ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಪ್ರಜಾಸತ್ತಾತ್ಮಕ ಹಾಗೂ ಸಂಸದೀಯ ಕಲಾಪಗಳ ಬಗ್ಗೆ ಅರಿವು ಮೂಡಿಸಲು ಪ್ರಪ್ರಥಮ ಬಾರಿಗೆ ಯುವ ಸಂಸತ್' ಸೇರಿದಂತೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ವಿದ್ಯಾರ್ಥಿಗಳು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಿ, ಮುಂಬರುವ ನವೆಂಬರ್ 26ರ ಸಂವಿಧಾನ ದಿನ'ವನ್ನು ಅರ್ಥಪೂರ್ಣವಾಗಿ ಆಚರಿಸಲು ಕೈಜೋಡಿಸ ಬೇಕೆಂದು ಆಶಿಸಿದರು.

ಸಿಇಓ ಮಹಮ್ಮದ್ ಹ್ಯಾರೀಸ್ ಸುಮೇರ್, ಪ್ರಜಾಪ್ರಭುತ್ವ ಎಂದರೆ ಕೇವಲ ಮತದಾನ ಮಾಡುವುದಷ್ಟೇ ಅಲ್ಲ, ಅದು ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ನ್ಯಾಯವನ್ನು ಒಳಗೊಂಡಿದೆ. ಅದರಲ್ಲಿಯೂ ಸಾಮಾಜಿಕ ನ್ಯಾಯವೇ ಪ್ರಜಾಪ್ರಭುತ್ವದ ನಿಜವಾದ ಜೀವಾಳವಾಗಿದೆ. ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳ ಜೊತೆಗೆ ತಮ್ಮ ಮೂಲಭೂತ ಕರ್ತವ್ಯಗಳನ್ನು ಮರೆಯಬಾರದು. ಎಂದರು.

### ಪೇಜಾವರ ಮಠದ ಚಾತುರ್ಮಾಸ್ಯ ಕಾರ್ಯಕ್ರಮ

# ದೆಹಲಿಯ ವೇದವ್ಯಾಸ ಗುರುಕುಲಕ್ಕೆ ಲೆಫ್ಟಿನೆಂಟ್ ಗವರ್ನರ್ ಭೇಟಿ




**ನವದೆಹಲಿ, ಸೆ.15:** ಶ್ರೀ ಪೇಜಾವರ ಮಠದ ಚಾತುರ್ಮಾಸ್ಯ ಕಾರ್ಯಕ್ರಮದ ಹಿನ್ನೆಲೆಯಲ್ಲಿ ದೆಹಲಿ ಕೇಂದ್ರಾಡಳಿತ ಪ್ರದೇಶದ ಲೆಫ್ಟಿನೆಂಟ್ ಗವರ್ನರ್ ತರಣ್ ಜಿತ್ ಸಿಂಗ್ ಸಂಧು ಅವರು ಮಂಗಳವಾರ ಬೆಳಗ್ಗೆ ವೇದವ್ಯಾಸ ಗುರುಕುಲಕ್ಕೆ ಭೇಟಿ ನೀಡಿ ಪೇಜಾವರ ಶ್ರೀಗಳನ್ನು ಭೇಟಿಯಾದರು.

ಗುರುಕುಲದ ಪ್ರಾಚಾರ್ಯ ಡಾ. ವಿಠೋಬಾಚಾರ್ಯ, ಮಠದ ಪಿಆರ್‌ಒ ವಾಸುದೇವ ಭಟ್ ಹಾಗೂ ಶ್ರೀಗಳ ಕಾರ್ಯದರ್ಶಿಗಳಾದ ಕೃಷ್ಣಮೂರ್ತಿ ಭಟ್, ಅಶ್ವಿನ್ ಕುಮಾರ್ ಮೊದಲಾದವರು ಲೆಫ್ಟಿನೆಂಟ್ ಗವರ್ನರ್ ಅವರನ್ನು ಬರಮಾಡಿಕೊಂಡರು. ಗುರುಕುಲದ ವಿದ್ಯಾರ್ಥಿಗಳು ಪೂರ್ಣಕುಂಭ ಸ್ವಾಗತ ಹಾಗೂ ವೇದಘೋಷದೊಂದಿಗೆ ಅವರನ್ನು ಸ್ವಾಗತಿಸಿದರು. ಬಳಿಕ ಶ್ರೀ ರಾಮ ವಿಠಲ ಕೃಷ್ಣದೇವರ ಹಾಗೂ ಶ್ರೀ ಗಣೇಶನ (ಬ್ರಿಕ್ಸ್ ಗಣೇಶ) ದರ್ಶನ ಪಡೆದ ಲೆಫ್ಟಿನೆಂಟ್ ಗವರ್ನರ್ ಅವರು ಪೇಜಾವರ ಶ್ರೀಗಳನ್ನು ಭೇಟಿ ಮಾಡಿ ಫಲಪುಷ್ಪ ಸಮರ್ಪಿಸಿ ಸತ್ಕರಿಸಿದರು.

ಈ ವೇಳೆ ಗುರುಕುಲ, ಮಧ್ವಾಚಾರ್ಯರು, ಉಡುಪಿ ಹಾಗೂ ಪೇಜಾವರ ಮಠದ ಕುರಿತು ಲೆಫ್ಟಿನೆಂಟ್ ಗವರ್ನರ್ ಅವರು ಶ್ರೀಗಳಿಂದ ಮಾಹಿತಿ ಪಡೆದುಕೊಂಡರು. ವೇದವ್ಯಾಸ ಗುರುಕುಲದ ಕಾರ್ಯಚಟುವಟಿಕೆಗಳ ಬಗ್ಗೆ ಸಂತಸ ವ್ಯಕ್ತಪಡಿಸಿದ ಅವರು, ಇಂತಹ ಸಂಸ್ಥೆಗಳ ಪೋಷಣೆ ಮತ್ತು ಸಂವರ್ಧನೆಗೆ ಒತ್ತು ನೀಡಬೇಕು ಎಂದು ಹೇಳಿದರು. ಮಕ್ಕಳಿಗೆ ಸಂಸ್ಕಾರ ಶಿಕ್ಷಣದ ಜೊತೆಗೆ ಕೌಶಲ್ಯಾಭಿವೃದ್ಧಿಗೂ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ತಮ್ಮಿಂದ ಸಾಧ್ಯವಿರುವ ಪೂರ್ಣ ಸಹಕಾರ ನೀಡುವುದಾಗಿ ತರಣ್ ಜಿತ್ ಸಿಂಗ್ ಸಂಧು ತಿಳಿಸಿದರು.

ವಸಂತ್ ಕುಂಜ್ ಪ್ರದೇಶದ ಸ್ಥಳೀಯ ಮಕ್ಕಳಿಗೂ ಗುರುಕುಲದಲ್ಲಿ ಸಂಸ್ಕಾರ ಶಿಕ್ಷಣ ನೀಡುವಂತಾಗಬೇಕು ಎಂದು ಅವರು ಆಶಿಸಿದರು. ಇದಕ್ಕೆ ಪೇಜಾವರ ಶ್ರೀಗಳು ಸಮ್ಮತಿ ಸೂಚಿಸಿ, ಲೆಫ್ಟಿನೆಂಟ್ ಗವರ್ನರ್ ಅವರನ್ನು ಸನ್ಮಾನಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಸ್ಥಳೀಯ ಶಾಸಕ ಕೈಲಾಶ್ ಗೆಹ್ಲೋತ್ ಹಾಜರಿದ್ದರು.

# ರಾಮಮಂದಿರದಲ್ಲಿ ಸಿಬ್ಬಂದಿಗೆ ಹೊಸ ನಿಯಮ



■ ಆಂತರಿಕ ಮಾಹಿತಿ ಸೋರಿಕೆಗೆ ಕಡಿವಾಣ; ನಿಯಮ ಉಲ್ಲಂಘಿಸಿದರೆ ಶಿಸ್ತು ಕ್ರಮ

**ಅಯೋಧ್ಯೆ, ಸೆ.15:** ಅಯೋಧ್ಯೆಯ ರಾಮಮಂದಿರದ ಆಡಳಿತ ವ್ಯವಸ್ಥೆಯಲ್ಲಿ ಹಲವು ಬದಲಾವಣೆಗಳನ್ನು ಮಾಡಲಾಗಿದ್ದು, ದೇವಾಲಯದ ಆಂತರಿಕ ಮಾಹಿತಿ ಹೊರಗೆ ಸೋರಿಕೆಯಾಗದಂತೆ ಸಿಬ್ಬಂದಿ, ಅಧಿಕಾರಿಗಳು ಹಾಗೂ ಅರ್ಚಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಮಂದಿರದ ಆವರಣದಲ್ಲಿ ನಡೆಯುವ ಚಟುವಟಿಕೆಗಳು, ಕೈಗೊಳ್ಳುವ ನಿರ್ಧಾರಗಳು, ಆಡಳಿತಾತ್ಮಕ ವ್ಯವಸ್ಥೆಗಳು ಹಾಗೂ ಇತರ ಆಂತರಿಕ ಮಾಹಿತಿಗಳನ್ನು ಅನಧಿಕೃತವಾಗಿ ಹೊರಗೆ ಹಂಚಿಕೊಳ್ಳದಂತೆ ಸಿಬ್ಬಂದಿಗೆ ಸ್ಪಷ್ಟ ಸೂಚನೆ ನೀಡಲಾಗಿದೆ. ಮಂದಿರದ ಆಂತರಿಕ ವ್ಯವಸ್ಥೆಗೆ ಸಂಬಂಧಿಸಿದ ಮಾಹಿತಿಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸುವುದಕ್ಕೆ ನಿರ್ಬಂಧ ಹೇರಲಾಗಿದೆ.

ಹೊಸ ವ್ಯವಸ್ಥೆಯಲ್ಲಿ ಮಾಹಿತಿ ಗೌಪ್ಯತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ನಿಯಮ ಉಲ್ಲಂಘಿಸಿದರೆ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಲಾಗಿದೆ. ಮಂದಿರದೊಳಗಿನ ಮಾಹಿತಿ ಹೊರಗೆ ಹೋಗದಂತೆ ಮೇಲ್ವಿಚಾರಣೆ ಮತ್ತು ಶಿಸ್ತನ್ನು ಮತ್ತಷ್ಟು ಬಲಪಡಿಸಲಾಗುತ್ತಿದೆ.

ಇತ್ತೀಚೆಗೆ ಹೊಸ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿರುವ ಏರ್ ಮಾರ್ಷಲ್ ಜಿತೇಂದ್ರ ಮಿಶ್ರ ಅವರಿಗೂ ಮಂದಿರದ ಆಂತರಿಕ ಚಟುವಟಿಕೆಗಳ ಗೌಪ್ಯತೆ ಕಾಪಾಡುವ ಕುರಿತು ಟ್ರಸ್ಟ್‌ನಿಂದ ಸೂಚನೆ ನೀಡಲಾಗಿದೆ. ಅಧಿಕಾರ ವಹಿಸಿಕೊಂಡ ಬಳಿಕ ಅವರು ಕೂಡ ಸಿಬ್ಬಂದಿಗೆ ಅನಧಿಕೃತವಾಗಿ ಯಾವುದೇ ಮಾಹಿತಿಯನ್ನು ಹಂಚಿಕೊಳ್ಳದಂತೆ ಸಲಹೆ ನೀಡಿದ್ದಾರೆ.

ರಾಮಲಲ್ಲಾ ಸೇವೆಯಲ್ಲಿ ತೊಡಗಿರುವ ಅರ್ಚಕರಿಗೂ ನಿಯಮಗಳನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ. ಮಂದಿರದ ಒಳಗಿನ ಚಟುವಟಿಕೆಗಳು, ವ್ಯವಸ್ಥೆಗಳು ಹಾಗೂ ಸೇವೆಯ ಸಂದರ್ಭದಲ್ಲಿ ನಡೆಯುವ ಆಂತರಿಕ ವಿಚಾರಗಳನ್ನು ಸಾರ್ವಜನಿಕವಾಗಿ ಹಂಚಿಕೊಳ್ಳುವುದಕ್ಕೆ ನಿರ್ಬಂಧ ವಿಧಿಸಲಾಗಿದೆ. ಅಲ್ಲದೆ, ಮಂದಿರದೊಳಗೆ ಅರ್ಚಕರು ಮೊಬೈಲ್ ಫೋನ್ ಬಳಸುವುದಕ್ಕೂ ನಿರ್ಬಂಧ ಹೇರಲಾಗಿದೆ. ನಿಯಮಗಳನ್ನು ಉಲ್ಲಂಘಿಸಿದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ ಎಂದು ಮಂದಿರ ಆಡಳಿತ ಸ್ಪಷ್ಟಪಡಿಸಿದೆ.

### ಅಖಿಲ ಭಾರತೀಯ ಉಪಭೋಕ್ತಾ ಉತ್ಥಾನ ಸಂಘಟನೆ

# ಕರ್ನಾಟಕ ರಾಜ್ಯಾಧ್ಯಕ್ಷರಾಗಿ ಯೋಗಿಶ್ ಶೆಟ್ಟಿ ಜಪ್ಪು ನೇಮಕ



**ಮುಂಬಯಿ, ಸೆ.15:** ಅಖಿಲ ಭಾರತೀಯ ಉಪಭೋಕ್ತಾ ಉತ್ಥಾನ ಸಂಘಟನೆಯ ಕರ್ನಾಟಕ ರಾಜ್ಯಾಧ್ಯಕ್ಷರಾಗಿ ತುಳುನಾಡು ಸೂರ್ಯ ಸಂಪಾದಕ ಹಾಗೂ ತುಳುನಾಡ ರಕ್ಷಣಾ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಯೋಗಿಶ್ ಶೆಟ್ಟಿ ಜಪ್ಪು ಅವರನ್ನು ನೇಮಕ ಮಾಡಲಾಗಿದೆ. ಅಖಿಲ ಭಾರತೀಯ ಉಪಭೋಕ್ತಾ ಉತ್ಥಾನ ಸಂಘಟನೆ (ಆಲ್ ಇಂಡಿಯಾ ಕನ್ಸೂಮರ್ ಪ್ರೊಟೆಕ್ಷನ್ ಆರ್ಗನೈಝೇಶನ್) ರಾಷ್ಟ್ರೀಯ ಉಪಾಧ್ಯಕ್ಷರ ಶಿಫಾರಸ್ಸಿನ ಮೇರೆಗೆ ರಾಷ್ಟ್ರೀಯ ಅಧ್ಯಕ್ಷ ಹರಿಶಂಕರ್ ಶುಕ್ಲಾ ಅವರು ಈ ಬಗ್ಗೆ ಸೆ.15ರಂದು ಅಧಿಕೃತ ನೇಮಕಾತಿ ಆದೇಶ ಹೊರಡಿಸಿದ್ದು, ಈ ನೇಮಕಾತಿ ಅವಧಿಯು ಸೆ.15 ರಿಂದ 30,ಸೆ.2028 ವರೆಗೆ ಇರಲಿದೆ. ನೇಮಕಾತಿಯು ಸಂಘಟನೆಯ ಕೇಂದ್ರ ಕಾರ್ಯಕಾರಿ ಸಮಿತಿಯ ಅನುಮೋದನೆ ಹಾಗೂ ದೃಢೀಕರಣಕ್ಕೆ ಒಳಪಟ್ಟಿರುತ್ತದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಯೋಗೀಶ್ ಶೆಟ್ಟಿ ಜಪ್ಪು ಅವರು ಮಂಗಳೂರು ನಗರ ಪಾಲಿಕೆ ಕಾರ್ಪೋರೇಟರ್ ಆಗಿ ಸೇವೆ ಸಲ್ಲಿಸಿದ್ದು, ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ, ರಾಜ್ಯ ಯುವ ಸಾಧಕ ಪ್ರಶಸ್ತಿ, ಜ್ಞಾನ ಸರಸ್ವತಿ ರಾಜ್ಯ ಪ್ರಶಸ್ತಿ, ಸಂಘ ರತ್ನ ರಾಜ್ಯ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗೆ ಪಡೆದಿರುವವರಾಗಿರುತ್ತಾರೆ.

ಕರ್ನಾಟಕದಲ್ಲಿ ಗ್ರಾಹಕರ ಹಕ್ಕುಗಳು, ಗ್ರಾಹಕರ ಜಾಗೃತಿ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳಲ್ಲಿ ಸಂಘಟನೆಯನ್ನು ಬಲಪಡಿಸುವ ಜವಾಬ್ದಾರಿ ಯೋಗಿಶ್ ಅವರ ಮೇಲಿದೆ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಘಟನೆಯ ಘಟಕಗಳನ್ನು ಸಕ್ರಿಯಗೊಳಿಸುವುದು, ಗ್ರಾಹಕರಿಗೆ ತಮ್ಮ ಹಕ್ಕುಗಳ ಕುರಿತು ಅರಿವು ಮೂಡಿಸುವುದು ಹಾಗೂ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವ ನಿರೀಕ್ಷೆ ವ್ಯಕ್ತವಾಗಿದೆ.

ಗ್ರಾಹಕರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಉತ್ಪನ್ನಗಳು ಮತ್ತು ಸೇವೆಗಳು ದೊರೆಯುವಂತೆ ಜಾಗೃತಿ ಮೂಡಿಸುವುದು, ಗ್ರಾಹಕರ ಹಕ್ಕುಗಳ ಕುರಿತು ಅರಿವು ಹೆಚ್ಚಿಸುವುದು ಹಾಗೂ ಗ್ರಾಹಕರ ಸಮಸ್ಯೆಗಳಿಗೆ ಕಾನೂನುಬದ್ಧ ಮತ್ತು ಪ್ರಜಾಸತ್ತಾತ್ಮಕ ಮಾರ್ಗದಲ್ಲಿ ಸ್ಪಂದಿಸುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ. ಯೋಗಿಶ್ ಶೆಟ್ಟಿ ಜಪ್ಪು ಅವರ ನೇಮಕಾತಿಗೆ ಕರ್ನಾಟಕದ ವಿವಿಧ ಸಾಮಾಜಿಕ, ಸಂಘಟನಾ ಹಾಗೂ ಗ್ರಾಹಕಪರ ವಲಯಗಳಿಂದ ಅಭಿನಂದನೆಗಳು ವ್ಯಕ್ತವಾಗಿವೆ.

ಗ್ರಾಹಕರ ಹಕ್ಕುಗಳ ರಕ್ಷಣೆ ಮತ್ತು ಜನರಲ್ಲಿ ಗ್ರಾಹಕ ಜಾಗೃತಿ ಮೂಡಿಸುವುದು ನಮ್ಮ ಪ್ರಮುಖ ಆದ್ಯತೆ. ಕರ್ನಾಟಕದಾದ್ಯಂತ ಸಂಘಟನೆಯನ್ನು ಬಲಪಡಿಸಿ, ಪ್ರತಿಯೊಬ್ಬ ಗ್ರಾಹಕರಿಗೂ ತಮ್ಮ ಹಕ್ಕುಗಳ ಅರಿವು ಮೂಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಲಾಗುವುದು ಎಂದು ಯೋಗಿಶ್ ಶೆಟ್ಟಿ ತಿಳಿಸಿದ್ದಾರೆ.

# ಕರ್ನಾಟಕದ ಗಣಿ ಬ್ಲಾಕ್‌ಗಳ ಹರಾಜಿಗೆ ಸುಪ್ರೀಂ ಅಸ್ತು



**ಕಚ್ಚಾ ಅರಣ್ಯ ಪ್ರದೇಶ ಸೇರ್ಪಡೆಗೆ ಷರತ್ತು; ಗಣಿಗಾರಿಕೆಗೆ ಪೂರ್ವಾನುಮತಿ ಕಡ್ಡಾಯ**

**ನವದೆಹಲಿ, ಸೆ.15:** ಕರ್ನಾಟಕದ ವಿವಿಧ ವರ್ಗಗಳ ಗಣಿಗಾರಿಕೆ ಬ್ಲಾಕ್ಗಳನ್ನು, ಕಚ್ಚಾ ಅರಣ್ಯ ಪ್ರದೇಶ ಸೇರಿದಂತೆ, ಒಂದೇ ಸಮಗ್ರ ಬ್ಲಾಕ್‌ಗಳಾಗಿ ವಿಲೀನಗೊಳಿಸಿ ಹರಾಜು ನಡೆಸಲು ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ. ಆದರೆ, ಅರಣ್ಯ ಪ್ರದೇಶವನ್ನು ಹರಾಜು ಬ್ಲಾಕ್‌ಗೆ ಸೇರಿಸಿರುವುದನ್ನೇ ಗಣಿಗಾರಿಕೆಗೆ ಅನುಮತಿ ಎಂದು ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜಾಯ್ಮಲ್ಯ ಬಾಗ್ಚಿ ಮತ್ತು ವಿ. ಮೊಹನಾ ಅವರನ್ನೊಳಗೊಂಡ ಪೀಠ ಈ ಆದೇಶ ನೀಡಿದೆ. ವಿವಿಧ ಗಣಿಗಾರಿಕೆ ಪ್ರದೇಶಗಳನ್ನು ದೊಡ್ಡ ಮತ್ತು ಸಮಗ್ರ ಬ್ಲಾಕ್‌ಗಳಾಗಿ ರೂಪಿಸುವುದು ಕಾರ್ಯಾಚರಣೆಯ ತರ್ಕಬದ್ಧೀಕರಣದ ಭಾಗವಾಗಿದ್ದು, ಈ ಪ್ರಕ್ರಿಯೆಯಲ್ಲಿ ಈಗಾಗಲೇ ನ್ಯಾಯಾಲಯ ವಿಧಿಸಿರುವ ಪರಿಸರ ಮತ್ತು ಇತರ ಸುರಕ್ಷತಾ ಕ್ರಮಗಳು ದುರ್ಬಲಗೊಳ್ಳಬಾರದು ಎಂದು ಪೀಠ ಹೇಳಿದೆ.

ಕಚ್ಚಾ ಅರಣ್ಯ ಅಥಾವ ನೈಸರ್ಗಿಕ ಅರಣ್ಯ ಪ್ರದೇಶವನ್ನು ಹರಾಜು ಬ್ಲಾಕ್‌ಗೆ ಸೇರಿಸಿದರೂ, ಅಲ್ಲಿ ಗಣಿಗಾರಿಕೆ ನಡೆಸಲು ಸ್ವಯಂಚಾಲಿತ ಅನುಮತಿ ದೊರೆಯುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಅರಣ್ಯ ಪ್ರದೇಶದಲ್ಲಿ ಗಣಿಗಾರಿಕೆ ಆರಂಭಿಸುವ ಮೊದಲು ಅರಣ್ಯ (ಸಂರಕ್ಷಣೆ) ಕಾಯ್ದೆ, 1980 ಅಡಿಯಲ್ಲಿ ಅಗತ್ಯವಿರುವ ಪೂರ್ವಾನುಮತಿ ಸೇರಿದಂತೆ ಎಲ್ಲಾ ಕಾನೂನುಬದ್ಧ ಅನುಮತಿಗಳನ್ನು ಪಡೆಯುವುದು ಕಡ್ಡಾಯ ಎಂದು ತಿಳಿಸಿದೆ.

ಹರಾಜಿನಲ್ಲಿ ಬ್ಲಾಕ್ ಪಡೆದ ಸಂಸ್ಥೆಗೆ ಸಮಗ್ರ ಗಣಿಗಾರಿಕೆ ಗುತ್ತಿಗೆ ನೀಡಿದರೂ, ಅಗತ್ಯ ಕಾನೂನುಬದ್ಧ ಅನುಮತಿಗಳು ಇನ್ನೂ ಬಾಕಿ ಇರುವ ವರ್ಜಿನ್ ಅರಣ್ಯ ಪ್ರದೇಶದಲ್ಲಿ ಗಣಿಗಾರಿಕೆ ಆರಂಭಿಸಲು ಹಕ್ಕು ಸಿಗುವುದಿಲ್ಲ ಎಂದು ನ್ಯಾಯಾಲಯ ಹೇಳಿದೆ.

**ಎ, ಬಿ, ಸಿ ವರ್ಗದ ಗಣಿಗಳ ವಿಲೀನ:** ಕರ್ನಾಟಕದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅತಿಕ್ರಮಣದ ಪ್ರಮಾಣದ ಆಧಾರದ ಮೇಲೆ ಗಣಿಗಾರಿಕೆ ಗುತ್ತಿಗೆಗಳನ್ನು ಹಲವು ವರ್ಷಗಳ ಹಿಂದೆ ಎ, ಬಿ ಮತ್ತು ಸಿ ವರ್ಗಗಳಾಗಿ ವಿಂಗಡಿಸಲಾಗಿತ್ತು.

**ಎ ವರ್ಗ:** ಯಾವುದೇ ಅಕ್ರಮ ಅಥವಾ ಅತಿ ಕಡಿಮೆ ಪ್ರಮಾಣದ ಅಕ್ರಮ ಪತ್ತೆಯಾದ ಗಣಿಗಳು.

**ಬಿ ವರ್ಗ:** ಅನುಮೋದಿತ ಗುತ್ತಿಗೆ ಪ್ರದೇಶದ ಹೊರಗೆ ಶೇ.10ರವರೆಗೆ ಅಕ್ರಮ ಗಣಿಗಾರಿಕೆ ಅಥವಾ ಗುತ್ತಿಗೆ ಪ್ರದೇಶದ ಶೇ.15ರವರೆಗೆ ಮಣ್ಣು/ತ್ಯಾಜ್ಯ ರಾಶಿ ಕಂಡುಬಂದ ಪ್ರಕರಣಗಳು.

**ಸಿ ವರ್ಗ:** ಗಂಭೀರ ಅಕ್ರಮಗಳು, ಹೆಚ್ಚಿನ ಪ್ರಮಾಣದ ಅತಿಕ್ರಮಣ ಅಥವಾ ಅರಣ್ಯ ಕಾನೂನುಗಳ ಉಲ್ಲಂಘನೆ ಸೇರಿದಂತೆ ಗಂಭೀರ ಸ್ವರೂಪದ ಪ್ರಕರಣಗಳು. 2013ರಲ್ಲಿ ಸುಪ್ರೀಂ ಕೋರ್ಟ್ ಈ ವರ್ಗೀಕರಣವನ್ನು ಅನುಮೋದಿಸಿತ್ತು. ಸಿ ವರ್ಗದ ಗುತ್ತಿಗೆಗಳನ್ನು ರದ್ದುಪಡಿಸಲಾಗಿತ್ತು. ಎ ಮತ್ತು ಬಿ ವರ್ಗದ ಗಣಿಗಳಿಗೆ ಕಠಿಣ ಷರತ್ತುಗಳೊಂದಿಗೆ ಗಣಿಗಾರಿಕೆ ಪುನರಾರಂಭಿಸಲು ಅವಕಾಶ ನೀಡಲಾಗಿತ್ತು. ಈಗ ವಿಭಿನ್ನ ವರ್ಗಗಳ ಗಣಿಗಾರಿಕೆ ಬ್ಲಾಕ್‌ಗಳನ್ನು, ಅಗತ್ಯವಿದ್ದಲ್ಲಿ ಕಚ್ಚಾ ಅರಣ್ಯ ಪ್ರದೇಶದೊಂದಿಗೆ ಸೇರಿಸಿ, ದೊಡ್ಡ ಸಮಗ್ರ ಬ್ಲಾಕ್ಗಳಾಗಿ ಹರಾಜು ಮಾಡಲು ನ್ಯಾಯಾಲಯ ಅವಕಾಶ ನೀಡಿದೆ.

### ಪರಿಸರ ಸುರಕ್ಷತಾ ಕ್ರಮಗಳಿಗೆ ಒತ್ತು

ಬ್ಲಾಕ್‌ಗಳ ವಿಲೀನದಿಂದ ಹರಾಜು ಪ್ರಕ್ರಿಯೆ ಸರಳವಾಗಬಹುದು. ಆದರೆ, ಈ ಪ್ರಕ್ರಿಯೆಯ ನೆಪದಲ್ಲಿ ಸುಪ್ರೀಂ ಕೋರ್ಟ್ ಹಲವು ವರ್ಷಗಳಿಂದ ವಿಧಿಸಿರುವ ಪರಿಸರ ಸುರಕ್ಷತಾ ಕ್ರಮಗಳು ಯಾವುದೇ ರೀತಿಯಲ್ಲೂ ದುರ್ಬಲಗೊಳ್ಳಬಾರದು ಎಂದು ಪೀಠ ಒತ್ತಿಹೇಳಿದೆ. ಈ ಹಿಂದೆ ವಿಭಜಿತವಾಗಿದ್ದ ಗಣಿಗಾರಿಕೆ ಪ್ರದೇಶಗಳಿಗೆ ಸಂಬಂಧಿಸಿದ ಅಸ್ತಿತ್ವದಲ್ಲಿರುವ ಕಾನೂನುಬದ್ಧ ಅನುಮತಿಗಳನ್ನು, ಹರಾಜಿನಲ್ಲಿ ಯಶಸ್ವಿಯಾದ ಹೊಸ ಗುತ್ತಿಗೆದಾರರಿಗೆ ಗಣಿಗಳು ಮತ್ತು ಖನಿಜಗಳ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಸೆಕ್ಷನ್ 8ಃ ಅಡಿಯಲ್ಲಿ ವರ್ಗಾಯಿಸುವ ವ್ಯವಸ್ಥೆಗೂ ನ್ಯಾಯಾಲಯ ಅನುಮೋದನೆ ನೀಡಿದೆ. ಆದರೆ, ಕಚ್ಚಾ ಅರಣ್ಯ ಪ್ರದೇಶದಲ್ಲಿ ಅಗತ್ಯವಿರುವ ಎಲ್ಲ ಅನುಮತಿಗಳು ಮತ್ತು ಪರಿಸರ ಸಂಬಂಧಿತ ಕ್ಲಿಯರೆನ್ಸ್‌ಗಳು ದೊರೆಯುವವರೆಗೆ ಅಲ್ಲಿ ಗಣಿಗಾರಿಕೆ ಆರಂಭಿಸುವುದಿಲ್ಲ ಎಂಬ ಲಿಖಿತ ಭರವಸೆಯನ್ನು ಹರಾಜು ಗೆದ್ದವರು ನೀಡಬೇಕಾಗುತ್ತದೆ.

# ಏಕರೂಪ ನಾಗರಿಕ ಸಂಹಿತೆ ಜಾರಿ ಸಾಧ್ಯವಿಲ್ಲ: ಅಸಾದುದ್ದೀನ್ ಓವೈಸಿ




**ಭೋಪಾಲ್, ಸೆ.15:** ದೇಶದಲ್ಲಿ ಧಾರ್ಮಿಕ ಸ್ವಾತಂತ್ರ್ಯವನ್ನು ರದ್ದುಗೊಳಿಸುವ ಮೂಲಕ ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಜಾರಿ ಸಾಧ್ಯವಿಲ್ಲ ಎಂದು ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಯುಸಿಸಿ ವಿರೋಧಿ ಸಭೆಯಲ್ಲಿ ಭಾಗವಹಿಸಲು ಮಂಗಳವಾರ ಭೂಪಾಲ್‌ಗೆ ಆಗಮಿಸಿದ್ದ ಅವರು, ಮಾಧ್ಯಮಗಳ ಜತೆ ಮಾತನಾಡಿ, ಪ್ರಸ್ತಾವಿತ ಕಾನೂನು ಸಂವಿಧಾನದ ವಿಧಿಗಳಾದ 25, 26, 14 ಮತ್ತು 29 ಸೇರಿದಂತೆ ಹಲವು ನಿಬಂಧನೆಗಳಿಗೆ ವಿರುದ್ಧವಾಗಿದೆ. ಧಾರ್ಮಿಕ ಸ್ವಾತಂತ್ರ್ಯವನ್ನು ರದ್ದುಗೊಳಿಸುವ ಮೂಲಕ ನೀವು ಅಂತಹ ಕಾನೂನನ್ನು ಜಾರಿಗೆ ತರಲು ಸಾಧ್ಯವಿಲ್ಲ. ಯುಸಿಸಿ ಜಾರಿಗೆ ಮುಂದಾಗಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದರು.

ಇದಕ್ಕೂ ಮುನ್ನ ಹೈದರಾಬಾದ್‌ನಲ್ಲಿ ಮಾತನಾಡಿದ್ದ ಓವೈಸಿ, ಬಿಜೆಪಿ ಸಮಾನತೆಗಾಗಿ ಯುಸಿಸಿಯನ್ನು ಜಾರಿಗೆ ತರುತ್ತಿಲ್ಲ, ಬದಲಾಗಿ ಭಾರತದ 18 ಕೋಟಿ ಮುಸ್ಲಿಮರನ್ನು ಗುರಿಯಾಗಿಸಲು ಪ್ರಯತ್ನಿಸುತ್ತಿದೆ ಎಂಬುದನ್ನು ಅರ್ಥಮಾಡಿಕೊಳ್ಳಬೇಕು. ಇದಕ್ಕಾಗಿ ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿ ಮತ್ತು ಸರ್ಕಾರಿ ಮಟ್ಟದಲ್ಲಿ ಯುಸಿಸಿಯನ್ನು ಪರಿಚಯಿಸಿದ್ದಾರೆ; ಹೀಗೆ ಮಾಡುವ ಮೂಲಕ ಬಿಜೆಪಿ ಮತ್ತು ಅಮಿತ್ ಶಾ ಭಾರತೀಯ ಸಂವಿಧಾನದ ವಿಧಿ 25 (ಧಾರ್ಮಿಕ ಸ್ವಾತಂತ್ರ್ಯ), 14 (ಸಮಾನತೆಯ ಹಕ್ಕು), 26 ಮತ್ತು 29ರ ಉಲ್ಲಂಘನೆ ಮಾಡುತ್ತಿದ್ದಾರೆ. ಆದ್ದರಿಂದ, ಬಿಜೆಪಿಯ ಈ ಕ್ರಮವು ಸಮಾನತೆಗೆ ಸಂಬಂಧಿಸಿದ್ದಲ್ಲ, ಬದಲಾಗಿ ಸಂಪೂರ್ಣವಾಗಿ ಮುಸ್ಲಿಮರನ್ನು ಗುರಿಯಾಗಿಸುವ ಉದ್ದೇಶದ್ದಾಗಿದೆ ಎಂಬುದನ್ನು ಮೊದಲು ಅರಿಯಬೇಕು" ಎಂದು ಹೇಳಿದ್ದರು.

ದೇಶದಲ್ಲಿ ಬಹುತ್ವದ ಮಹತ್ವವನ್ನು ಒತ್ತಿಹೇಳಿದ ಓವೈಸಿ, ಮೋದಿ ಸರ್ಕಾರ ರಚಿಸಿದ್ದ ಕಾನೂನು ಆಯೋಗವು ಈ ಹಿಂದೆ ಭಾರತಕ್ಕೆ UCC ಅಗತ್ಯವೂ ಇಲ್ಲ ಮತ್ತು ಅಪೇಕ್ಷಣೀಯವೂ ಅಲ್ಲ ಎಂದು ಹೇಳಿತ್ತು ಎಂಬುದನ್ನು ನೆನಪಿಸಿದರು. "ಎರಡನೆಯದಾಗಿ, ಈ ದೇಶದ ಆತ್ಮ ಮತ್ತು ಮೂಲ ಸ್ವರೂಪವೇ ಬಹುತ್ವವಾಗಿದೆ. ಮೂರನೆಯದಾಗಿ, ಅಮಿತ್ ಶಾ, ಬಿಜೆಪಿ ಮತ್ತು ಆರ್‌ಎಸ್‌ಎಸ್ ಹಿಂದೂಯೇತರರ ಮೇಲೆ ಹಿಂದೂ ಕಾನೂನನ್ನು ಹೇರಲು ಪ್ರಯತ್ನಿಸುತ್ತಿವೆ." "ನಾಲ್ಕನೆಯದಾಗಿ, ಸ್ವತಃ ಮೋದಿ ಸರ್ಕಾರವೇ ರಚಿಸಿದ್ದ ಕಾನೂನು ಆಯೋಗವು ತನ್ನ ವರದಿಯಲ್ಲಿ, ಭಾರತಕ್ಕೆ ಏಕರೂಪ ನಾಗರಿಕ ಸಂಹಿತೆ (ಯುಸಿಸಿಯ) ಅಗತ್ಯವೂ ಇಲ್ಲ ಮತ್ತು ಅದು ಅಪೇಕ್ಷಣೀಯವೂ ಅಲ್ಲ ಎಂದು ಹೇಳಿದೆ," ಎಂದು ಹೇಳಿದ್ದಾರೆ.

# ಬ್ರಿಕ್ಸ್‌ನಿಂದ ಚೀನಾಗೆ ಲಾಭ, ಭಾರತಕ್ಕೆ ಸವಾಲುಗಳು: ಸಿಬಲ್



**ನವದೆಹಲಿ, ಸೆ.15:** ಬ್ರಿಕ್ಸ್ ಶೃಂಗಸಭೆಯಿಂದ ಚೀನಾ ಅತ್ಯಂತ ಹೆಚ್ಚಿನ ಲಾಭವನ್ನು ಪಡೆದುಕೊಂಡಿದೆ ಹಾಗೂ ವಿವಿಧ ದೇಶಗಳ ನಡುವಿನ ಭಿನ್ನಾಭಿಪ್ರಾಯಗಳನ್ನು ಸರಿದೂಗಿಸಿ ಸಾಗುವುದು ಅಧ್ಯಕ್ಷತೆ ವಹಿಸಿದ್ದ ಭಾರತಕ್ಕೆ ಸವಾಲಿನ ಕೆಲಸವಾಗಿತ್ತು ಎಂದು ರಾಜ್ಯಸಭಾ ಸಂಸದ ಹಾಗೂ ಹಿರಿಯ ವಕೀಲ ಕಪಿಲ್ ಸಿಬಲ್ ಹೇಳಿದ್ದಾರೆ.

ಸೋಮವಾರ ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬ್ರಿಕ್ಸ್ ಒಕ್ಕೂಟವನ್ನು ವಿವಿಧ ರೀತಿಯ ರಾಜಕೀಯ ಮತ್ತು ಆರ್ಥಿಕ ಸಿದ್ಧಾಂತ ಹೊಂದಿರುವ ದೇಶಗಳ ಮಿಶ್ರಿತ ಸಮೂಹ ಎಂದು ಬಣ್ಣಿಸಿದರು. ಇಂತಹ ವೈವಿಧ್ಯಮಯ ದೇಶಗಳಿರುವ ಒಕ್ಕೂಟದಿಂದ ಯಾವುದೇ ಕ್ರಾಂತಿಕಾರಿ ಅಥವಾ ಏಕರೂಪದ ನಿರ್ಣಯಗಳನ್ನು ಕೈಗೊಳ್ಳುವುದು ಸುಲಭದ ಮಾತಲ್ಲ ಎಂದಿದ್ದಾರೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಭಾರತವು ಜಂಟಿ ಪ್ರಕಟಣೆಯನ್ನುಹೊರತರಲು ಪಟ್ಟ ಶ್ರಮವನ್ನು ಕಪಿಲ್ ಸಿಬಲ್ ಶ್ಲಾಘಿಸಿದರು. ದೇಶಕ್ಕೆ ಈ ಶೃಂಗಸಭೆಯಲ್ಲಿ ಜಂಟಿ ಘೋಷಣೆ ಅಂಗೀಕರಿಸುವುದು ಹಾರ್ಮುಜ್ ಜಲಸಂಧಿಯಲ್ಲಿ ಹಡಗು ಚಲಾಯಿಸಿದಷ್ಟೇ ಸವಾಲಾಗಿತ್ತು. ಯಾವುದೇ ವಿವಾದಕ್ಕೆ ಆಸ್ಪದ ನೀಡದೆ ಜಂಟಿ ಪ್ರಕಟಣೆ ಹೊರಡಿಸಿರುವುದು ನಮ್ಮ ಸರ್ಕಾರದ ಗಮನಾರ್ಹ ಸಾಧನೆ? ಎಂದು ಅಭಿಪ್ರಾಯಪಟ್ಟಿದ್ದಾರೆ.

ಇದೇ ವೇಳೆ, ಬ್ರಿಕ್ಸ್ ಒಕ್ಕೂಟದಲ್ಲಿ ಪರ್ಯಾಯ ನಾಣ್ಯ ಅಥವಾ ಡಿ–ಡಾಲರೈಸೇಶನ್ (ಅಮೆರಿಕನ್ ಡಾಲರ್ ನಿರ್ಬಂಧಿಸುವುದು) ಕುರಿತು ಯಾವುದೇ ನಿರ್ಧಾರ ಕೈಗೊಳ್ಳದಿರುವುದು ಕೂಡ ಭಾರತಕ್ಕೆ ಸಿಕ್ಕ ಪ್ರಮುಖ ಯಶಸ್ಸು ಎಂದು ಸಿಬಲ್ ಉಲ್ಲೇಖಿಸಿದರು. ಬ್ರಿಕ್ಸ್ ಅನ್ನು ಪಾಶ್ಚಿಮಾತ್ಯ ವಿರೋಧಿ ಬ್ಲಾಕ್ ಮಾಡಲು ಚೀನಾ ಮತ್ತು ರಷ್ಯಾ ಪ್ರಯತ್ನಿಸುತ್ತಿವೆ ಎಂದು ಆರೋಪಿಸಿದ ಅವರು, ಭಾರತವು ಇದನ್ನು ಪಾಶ್ಚಿಮಾತ್ಯ ವಿರೋಧಿ ಮೈತ್ರಿಕೂಟವನ್ನಾಗಿ ಮಾಡಲು ಬಯಸುವುದಿಲ್ಲ ಎಂದರು.

ಈ ಇಡೀ ಶೃಂಗಸಭೆಯ ರಾಜಕೀಯ ಮತ್ತು ಭೌಗೋಳಿಕ ಸನ್ನಿವೇಶದಿಂದ ಚೀನಾ ಅತ್ಯಂತ ಹೆಚ್ಚಿನ ಲಾಭ ಪಡೆದು ಕೊಂಡಿದೆ ಎಂದು ಪ್ರತಿಪಾದಿಸಿದರು.ಅಲ್ಲದೆ, ಶೃಂಗಸಭೆಯಲ್ಲಿ ಕೈಗೊಂಡ ನಿರ್ಣಯಗಳು ಮತ್ತು ನೀಡಲಾದ ಭರವಸೆಗಳು ಕೇವಲ ಕಾಗದದ ಮೇಲಷ್ಟೇ ಉಳಿಯುತ್ತವೆಯೇ ಅಥವಾ ವಾಸ್ತವದಲ್ಲಿ ಅನುಷ್ಠಾನಗೊಳ್ಳುತ್ತವೆಯೇ ಎಂಬುದನ್ನು ಕಾಲವೇ ಉತ್ತರಿಸಬೇಕಾಗಿದೆ ಎಂದು ತಿಳಿಸಿದರು.

# ತೃಣಮೂಲ ಕಾಂಗ್ರೆಸ್‌ನ ಬಂಡಾಯ ಸಂಸದರು ಬಿಜೆಪಿ ಸೇರುತ್ತಾರಾ?



**ನವದೆಹಲಿ, ಸೆ. 15:** ತೃಣಮೂಲ ಕಾಂಗ್ರೆಸ್ (ಟಿಎಂಸಿ) ತೊರೆದು ನ್ಯಾಷನಲಿಸ್ಟ್ ಸಿಟಿಜನ್ಸ್ ಪಾರ್ಟಿ ಆಫ್ ಇಂಡಿಯಾ (ಎನ್‌ಸಿಪಿಐ) ಸೇರಿರುವ 20 ಬಂಡಾಯ ಸಂಸದರ ಪೈಕಿ 17 ಮಂದಿ ಶೀಘ್ರದಲ್ಲೇ ಬಿಜೆಪಿಗೆ ಸೇರ್ಪಡೆಯಾಗಲಿದ್ದಾರೆ ಎಂದು ಎನ್‌ಸಿಪಿಐ ಸಂಸದ ಜಗದೀಶ್‌ಚಂದ್ರ ಬರ್ಮಾ ಬಸುನಿಯಾ ಹೇಳಿರುವುದು ಪಶ್ಚಿಮ ಬಂಗಾಳದಲ್ಲಿ ರಾಜಕೀಯ ಚರ್ಚೆಗೆ ಕಾರಣವಾಗಿದೆ.

ದುರ್ಗಾಪೂಜೆಯ ಮುನ್ನ ಅಥವಾ ನಂತರ ಈ ಸೇರ್ಪಡೆ ನಡೆಯಬಹುದು. ಈ ಸಂಬಂಧ ಯೋಜನೆ ಸಿದ್ಧವಾಗಿದೆ ಎಂದು ಬಸುನಿಯಾ ಸೋಮವಾರ ಕೂಚ್ಬೆಹಾರ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ. ನಾವು ಈಗ 20 ಎನ್‌ಸಿಪಿಐ ಸಂಸದರು ಇದ್ದೇವೆ. ಅವರಲ್ಲಿ 17 ಮಂದಿ ಶೀಘ್ರದಲ್ಲೇ ಬಿಜೆಪಿ ಸೇರಲಿದ್ದಾರೆ. ಮೂರನೇ ಎರಡರಷ್ಟು ಸದಸ್ಯರ ಸಂಖ್ಯೆ ಸುಮಾರು 14 ಆಗುತ್ತದೆ. ಆದರೆ, ನಾವು 17 ಮಂದಿ ಇರುವುದರಿಂದ ಪಕ್ಷಾಂತರ ನಿಷೇಧ ಕಾಯ್ದೆ ನಮಗೆ ಅನ್ವಯಿಸುವುದಿಲ್ಲ. ಬಿಜೆಪಿಗೆ ಸೇರಿದ ಬಳಿಕ ಅದರ ಮಾರ್ಗದರ್ಶನದಲ್ಲಿ ಕೆಲಸ ಮಾಡುತ್ತೇವೆ ಎಂದು ಹೇಳಿದ್ದಾರೆ.

ಬಸುನಿಯಾ ಪ್ರಕಾರ, ಅಬು ತಾಹೇರ್ ಖಾನ್, ಯೂಸುಫ್ ಪಠಾಣ್ ಮತ್ತು ಖಲೀಲುರ್ ರೆಹಮಾನ್ ಅವರು ಅಲ್ಪಸಂಖ್ಯಾತರು ಹೆಚ್ಚಿರುವ ಕ್ಷೇತ್ರಗಳನ್ನು ಪ್ರತಿನಿಧಿಸುತ್ತಿರುವುದರಿಂದ ಬಿಜೆಪಿಗೆ ಸೇರ್ಪಡೆಯಾದರೆ ಸಮಸ್ಯೆ ಎದುರಾಗಬಹುದು. ಹೀಗಾಗಿ ಅವರು ಎನ್‌ಸಿಪಿಐನಲ್ಲೇ ಉಳಿದು ಎನ್‌ಡಿಎಗೆ ಬೆಂಬಲ ನೀಡಬಹುದು ಎಂದು ಬಸುನಿಯಾ ತಿಳಿಸಿದ್ದಾರೆ. ಟಿಎಂಸಿ ತೊರೆಯಲು ನಿರ್ಧರಿಸಿದ ಬಳಿಕ ಎನ್ಸಿಪಿಐಗೆ ಸೇರುವ ಪ್ರಕ್ರಿಯೆಗೆ ಬಿಜೆಪಿ ನೆರವು ನೀಡಿತ್ತು ಎಂದೂ ಅವರು ಆರೋಪಿಸಿದ್ದಾರೆ.

ಕೇಂದ್ರ ಸಚಿವ ಭೂಪೇಂದ್ರ ಯಾದವ್, ಮುಖ್ಯಮಂತ್ರಿ ಸುವೇಂದು ಅಧಿಕಾರಿ ಮತ್ತು ಕೇಂದ್ರ ಸಚಿವ ಅಮಿತ್ ಶಾ ನೇತೃತ್ವದಲ್ಲಿ ಎನ್‌ಸಿಪಿಐಗೆ ವಿಲೀನಗೊಂಡೆವು. ಆರಂಭದಲ್ಲಿ ಬಿಜೆಪಿಗೆ ಸೇರುವುದಾಗಿ ಯೋಚಿಸಿದ್ದೆವು. ಆದರೆ, ಮೂವರು ಸಂಸದರು ಬಿಜೆಪಿಗೆ ಸೇರುವುದಕ್ಕೆ ಸಾಧ್ಯವಿಲ್ಲ ಎಂದು ಹೇಳಿದ್ದರಿಂದ ಆ ಯೋಜನೆ ಕಾರ್ಯರೂಪಕ್ಕೆ ಬರಲಿಲ್ಲ. ಬಳಿಕ ಪಕ್ಷಾಂತರ ನಿಷೇಧ ಕಾಯ್ದೆಯ ವ್ಯಾಪ್ತಿಗೆ ಬಾರದಂತೆ ಎನ್ಸಿಪಿಐ ಸೇರಲು ಬಿಜೆಪಿ ನಾಯಕತ್ವ ಸೂಚಿಸಿತು. ಅದರಂತೆ ನಾವು ನಡೆದುಕೊಂಡೆವು ಎಂದು ಹೇಳಿದ್ದಾರೆ. ಬಸುನಿಯಾ ಹೇಳಿಕೆಯನ್ನು ಬಿಜೆಪಿ ಕೂಡ ತಕ್ಷಣವೇ ನಿರಾಕರಿಸಿದೆ. ಇಂತಹ ಯಾವುದೇ ವಿಚಾರದ ಬಗ್ಗೆ ನಮಗೆ ಮಾಹಿತಿ ಇಲ್ಲ. ಬಸುನಿಯಾ ತಮ್ಮ ಹೇಳಿಕೆಗೆ ತಾವೇ ಹೊಣೆಗಾರರಾಗಬೇಕು ಎಂದು ಬಿಜೆಪಿ ವಕ್ತಾರ ದೇಬ್ಜಿತ್ ಸರ್ಕಾರ್ ಹೇಳಿದ್ದಾರೆ. ಬಿಜೆಪಿಯ ಬರಾನಗರ ಶಾಸಕ ಸಜಲ್ ಘೋಷ್ ಕೂಡ ಬಂಡಾಯ ಸಂಸದರ ಸೇರ್ಪಡೆಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಪಕ್ಷವು ಯಾವುದೇ ನಿರ್ಧಾರ ಕೈಗೊಂಡರೆ ನಾವೆಲ್ಲರೂ ಅದನ್ನು ಪಾಲಿಸುತ್ತೇವೆ. ರಾಷ್ಟ್ರೀಯ ರಾಜಕೀಯ ಅನಿವಾರ್ಯತೆಗಳು ಮತ್ತು ನೀತಿಗಳಿರುತ್ತವೆ. ಆದರೆ, ನಮ್ಮ ಪ್ರದೇಶದ ಸಂಸದ ಸುದೀಪ್ ಬಂದೋಪಾಧ್ಯಾಯ ಬಿಜೆಪಿಗೆ ಸೇರಿದರೆ, ಅದನ್ನು ಮನಸ್ಸಿನಿಂದ ಒಪ್ಪಿಕೊಳ್ಳುವುದು ಕಷ್ಟ ಎಂದು ಅವರು ಹೇಳಿದ್ದಾರೆ.

### ಬಿಜೆಪಿ ಸೇರಲ್ಲ, ಎನ್‌ಡಿಎಗೆ ಬೆಂಬಲವಿಲ್ಲ

ಆದರೆ, ಬಸುನಿಯಾ ಹೇಳಿಕೆಯನ್ನು ಎನ್‌ಸಿಪಿಐನ ಇತರ ಸಂಸದರು ತಳ್ಳಿಹಾಕಿದ್ದಾರೆ. ಮುರ್ಷಿದಾಬಾದ್ ಸಂಸದ ಅಬು ತಾಹೇರ್ ಖಾನ್, ತಾವು ಬಿಜೆಪಿಗೆ ಸೇರುವುದಿಲ್ಲ ಅಥವಾ ಎನ್‌ಡಿಎಗೆ ಬೆಂಬಲ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ನಮ್ಮ ವಕ್ತಾರರಾಗುವಂತೆ ಬಸುನಿಯಾಗೆ ಯಾರು ಹೇಳಿದ್ದಾರೆ, ನಮ್ಮ ನಿಲುವನ್ನು ನಾವು ಈಗಾಗಲೇ ಸ್ಪಷ್ಟಪಡಿಸಿದ್ದೇವೆ. ನಮ್ಮ ಪರವಾಗಿ ಮಾತನಾಡುವ ಅಗತ್ಯ ಅವರಿಗಿಲ್ಲ. ಮುಂದಿನ ನಡೆ ಬಗ್ಗೆ ನಾವು ತೀರ್ಮಾನಿಸುತ್ತೇವೆ. ಅಲ್ಪಸಂಖ್ಯಾತ ಸಮುದಾಯದ ಮೂವರು ಸಂಸದರಾದ ನಾವು ಎನ್‌ಡಿಎಗೆ ಬೆಂಬಲ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದ್ದೇವೆ. ಬಿಜೆಪಿಗೆ ಸೇರುವ ಪ್ರಶ್ನೆಯೇ ಇಲ್ಲ. ಇಂತಹ ಯಾವುದೇ ಯೋಜನೆ ಅಥವಾ ಬೆಳವಣಿಗೆ ಬಗ್ಗೆ ನಮಗೆ ಮಾಹಿತಿ ಇಲ್ಲ ಎಂದು ಖಾನ್ ಹೇಳಿದ್ದಾರೆ. ಎನ್‌ಸಿಪಿಐನಲ್ಲಿರುವ ಇತರ ಇಬ್ಬರು ಮುಸ್ಲಿಂ ಸಂಸದರೆಂದರೆ ಬಹರಂಪುರದ ಯೂಸುಫ್ ಪಠಾಣ್ ಮತ್ತು ಜಂಗೀಪುರದ ಖಲೀಲುರ್ ರೆಹಮಾನ್.

# ಮಕ್ಕಳ ಲೈಂಗಿಕ ಶೋಷಣೆ ಪ್ರಕರಣ: ಕಾನೂನು ಜಾರಿ ಸಂಸ್ಥೆಗಳಿಗೆ ಮಾಹಿತಿ ನೀಡಲು ಮೆಟಾ ಒಪ್ಪಿಗೆ

**ನವದೆಹಲಿ, ಸೆ.15:** ಮಕ್ಕಳ ಆನ್‌ಲೈನ್ ಸುರಕ್ಷತೆ ವಿಚಾರದಲ್ಲಿ ಕೇಂದ್ರ ಸರ್ಕಾರದ ಕಟ್ಟುನಿಟ್ಟಿನ ನಿಲುವಿನ ಬೆನ್ನಲ್ಲೇ ಸಾಮಾಜಿಕ ಜಾಲತಾಣ ದೈತ್ಯ ಮೆಟಾ ಮಹತ್ವದ ನಿರ್ಧಾರ ಕೈಗೊಂಡಿದೆ. ತನ್ನ ಪ್ಲಾಟ್‌ಫಾರ್ಮ್‌ಗಳಲ್ಲಿ ಮಕ್ಕಳ ಲೈಂಗಿಕ ಶೋಷಣೆ ಮತ್ತು ದುರ್ಬಳಕೆಗೆ ಸಂಬಂಧಿಸಿದ ವಿಷಯಗಳು ಪತ್ತೆಯಾದರೆ, ಅವುಗಳ ಕುರಿತು ಸಂಬಂಧಿತ ಕಾನೂನು ಜಾರಿ ಹಾಗೂ ಭದ್ರತಾ ಸಂಸ್ಥೆಗಳಿಗೆ ಮಾಹಿತಿ ನೀಡಲು ಮೆಟಾ ಒಪ್ಪಿಕೊಂಡಿದೆ.

ಮಕ್ಕಳ ಆನ್‌ಲೈನ್ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕೇಂದ್ರ ಸರ್ಕಾರ ಸಾಮಾಜಿಕ ಜಾಲತಾಣ ವೇದಿಕೆಗಳಿಗೆ ಸೂಚಿಸಿದೆ. ಮಕ್ಕಳನ್ನು ಹಾನಿಗೊಳಿಸುವ ವಿಷಯಗಳನ್ನು ತಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳದ ಪ್ಲಾಟ್‌ಫಾರ್ಮ್‌ಗಳ ವಿರುದ್ಧ ಕ್ರಮ ಕೈಗೊಳ್ಳಬಹುದೆಂಬ ಸಂದೇಶವನ್ನೂ ಸರ್ಕಾರ ನೀಡಿದೆ. ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ಪ್ರಕರಣಗಳ ಮಾಹಿತಿಯನ್ನು ಸಂಬಂಧಿತ ಕಾನೂನು ಜಾರಿ ಸಂಸ್ಥೆಗಳಿಗೆ ತಲುಪಿಸುವ ಮೂಲಕ ತನಿಖೆ ಮತ್ತು ಕಾನೂನು ಕ್ರಮಕ್ಕೆ ನೆರವಾಗುವುದು ಮೆಟಾದ ನಿರ್ಧಾರದ ಉದ್ದೇಶವಾಗಿದೆ.

ಮಕ್ಕಳ ಶೋಷಣೆಗೆ ಸಂಬಂಧಿಸಿದ ಚಟುವಟಿಕೆಗಳ ಬಗ್ಗೆ ಮಾಹಿತಿ ದೊರೆತಾಗ, ಅನ್ವಯವಾಗುವ ಕಾನೂನುಗಳ ಅಡಿಯಲ್ಲಿ ಸ್ಥಳೀಯ ಕಾನೂನು ಜಾರಿ ಸಂಸ್ಥೆಗಳಿಗೆ ವರದಿ ಮಾಡುತ್ತಿರುವುದಾಗಿ ಮೆಟಾ ಈ ಹಿಂದೆಯೂ ಹೇಳಿತ್ತು. ಜುಲೈನಲ್ಲಿ ಕಂಪನಿ ನೀಡಿದ್ದ ಮಾಹಿತಿಯ ಪ್ರಕಾರ, ಭಾರತದಲ್ಲಿ ಪೋಕ್ಸೋ ಕಾಯ್ದೆ ಹಾಗೂ ಸಂಬಂಧಿತ ನಿಯಮಗಳ ಅಡಿಯಲ್ಲಿ ಇಂತಹ ಪ್ರಕರಣಗಳ ವರದಿಯನ್ನು ಎನ್‌ಸಿಎಂಇಸಿ ಮೂಲಕ ರಾಷ್ಟ್ರೀಯ ಸೈಬರ್ ಕ್ರೈಂ ವರದಿ ಪೋರ್ಟಲ್‌ಗೆ ಮಾಡಲಾಗುತ್ತಿದೆ. ಮೆಟಾ ಮಾತ್ರವಲ್ಲದೆ ಇತರ ಸಾಮಾಜಿಕ ಜಾಲತಾಣಗಳೊಂದಿಗೂ ಕೇಂದ್ರ ಸರ್ಕಾರ ಮಾತುಕತೆ ನಡೆಸುತ್ತಿದೆ. ಮಕ್ಕಳಿಗೆ ಹಾನಿಕಾರಕ ವಿಷಯಗಳನ್ನು ಗುರುತಿಸಿ, ಅವುಗಳನ್ನು ತ್ವರಿತವಾಗಿ ತೆಗೆದುಹಾಕಲು ಅಗತ್ಯವಿರುವ ತಾಂತ್ರಿಕ ವ್ಯವಸ್ಥೆ ಮತ್ತು ಕಂಟೆಂಟ್ ಮಾಡರೇಷನ್ ವ್ಯವಸ್ಥೆಯನ್ನು ಬಲಪಡಿಸುವಂತೆ ಪ್ಲಾಟ್‌ಫಾರ್ಮ್‌ಗಳಿಗೆ ಸೂಚಿಸಲಾಗಿದೆ. ಮಕ್ಕಳಿಗೆ ಸಂಬಂಧಿಸಿದ ಹಾನಿಕಾರಕ ವಿಷಯಗಳು ಕೇವಲ ದೂರು ಬಂದ ನಂತರ ತೆಗೆದುಹಾಕುವ ಬದಲು, ಅವುಗಳನ್ನು ಮುಂಚಿತವಾಗಿಯೇ ಗುರುತಿಸಿ ತಡೆಯುವ ಹಾಗೂ ಸಂಬಂಧಿತ ಸಂಸ್ಥೆಗಳಿಗೆ ವರದಿ ಮಾಡುವ ವ್ಯವಸ್ಥೆಯನ್ನು ಬಲಪಡಿಸುವುದು ಸರ್ಕಾರದ ಪ್ರಮುಖ ಉದ್ದೇಶವಾಗಿದೆ.




**ಎನ್‌ಸಿಪಿಸಿಆರ್ ತನಿಖೆ ನಡುವೆಯೇ ನಿರ್ಧಾರ:** ಮೆಟಾದ ಈ ನಿರ್ಧಾರವು ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗಕಂಪನಿಗೆ ಸಂಬಂಧಿಸಿದ ಪ್ರಕರಣವೊಂದರ ತನಿಖೆ ನಡೆಸುತ್ತಿರುವ ಸಂದರ್ಭದಲ್ಲಿ ಹೊರಬಂದಿದೆ. ಸೆಪ್ಟೆಂಬರ್ 9ರಂದು ಮೆಟಾ ಇಂಡಿಯಾದ ಹಿರಿಯ ಅಧಿಕಾರಿಗಳು ಎನ್‌ಸಿಪಿಸಿಆರ್ ಮುಂದೆ ಹಾಜರಾಗಿದ್ದರು. ಇನ್ಸ್ಟಾಗ್ರಾಮ್‌ನಲ್ಲಿ ಮಕ್ಕಳ ಲೈಂಗಿಕ ಶೋಷಣೆ ಮತ್ತು ದುರ್ಬಳಕೆಗೆ ಸಂಬಂಧಿಸಿದ ವಿಷಯಗಳಿರುವುದಾಗಿ ಆರೋಪಿಸಲಾದ ಜಾಹೀರಾತುಗಳ ವಿಚಾರವಾಗಿ ಆಯೋಗ ಅಧಿಕಾರಿಗಳನ್ನು ವಿಚಾರಣೆಗೆ ಕರೆದಿತ್ತು.

ಜುಲೈ 3ರಂದು ಈ ಕುರಿತು ಬಂದ ವರದಿಯನ್ನು ಎನ್‌ಸಿಪಿಸಿಆರ್ ಸ್ವಯಂಪ್ರೇರಿತವಾಗಿ ಪರಿಗಣಿಸಿತ್ತು. ಬಳಿಕ ಮೆಟಾ ಪ್ಲಾಟ್‌ಫಾರ್ಮ್ ಇಂಕ್‌ನಿಂದ ಉತ್ತರ ಕೇಳಲಾಗಿತ್ತು. ಕಂಪನಿ ತನ್ನ ಪ್ರತಿಕ್ರಿಯೆ ಸಲ್ಲಿಸಿದ ನಂತರ, ಪ್ರಕರಣದ ವಾಸ್ತವಾಂಶ ಪರಿಶೀಲನೆಗಾಗಿ ಔಪಚಾರಿಕ ತನಿಖೆ ಆರಂಭಿಸಲಾಗಿತ್ತು.

**ಎನ್‌ಎಚ್‌ಆರ್‌ಸಿ ಕೂಡ ತನಿಖೆಗೆ ಸೂಚನೆ:** ಈ ಪ್ರಕರಣದಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಕೂಡ ಕ್ರಮ ಕೈಗೊಂಡಿದೆ. ಇನ್ಸ್ಟಾಗ್ರಾಮ್‌ನ ಪಾವತಿಸಿದ ಜಾಹೀರಾತುಗಳ ಮೂಲಕ ಭಾರತದಲ್ಲಿ ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ವಿಷಯಗಳನ್ನು ಪ್ರಚಾರ ಮಾಡಲಾಗಿದೆ ಎಂಬ ಆರೋಪಗಳ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ದೆಹಲಿ ಪೊಲೀಸರಿಗೆ ಸೂಚಿಸಿತ್ತು. ಮೆಟಾ ಸೇರಿ ಸಂಬಂಧಿತ ಸಂಸ್ಥೆಗಳು ಪೋಕ್ಸೋ ಕಾಯ್ದೆಯಡಿ ಇರುವ ವರದಿ ಮಾಡುವ ಜವಾಬ್ದಾರಿ ಪಾಲಿಸಿವೆಯೇ ಎಂಬುದನ್ನೂ ಪರಿಶೀಲಿಸುವಂತೆ ಸೂಚಿಸ ಲಾಗಿತ್ತು. ಮಕ್ಕಳ ಶೋಷಣೆ ಸಂಬಂಧಿಸಿದ ವಿಷಯಗಳನ್ನು ಗುರುತಿಸಿ ತೆಗೆದುಹಾಕಲು ಕಾರ್ಯನಿರ್ವಹಿಸುತ್ತಿವೆ ಎಂದು ಮೆಟಾ ಹೇಳಿಕೊಂಡಿದೆ. 2025ರ ಅಕ್ಟೋಬರ್‌ನಿಂದ ಡಿಸೆಂಬರ್‌ವರೆಗೆ ಫೇಸ್ಬುಕ್ ಮತ್ತು ಇನ್ಸ್ಟಾಗ್ರಾಮ್‌ನಿಂದ ಮಕ್ಕಳ ಲೈಂಗಿಕ ಶೋಷಣೆಗೆ ಸಂಬಂಧಿಸಿದ ಸುಮಾರು 1.3 ಕೋಟಿ ವಿಷಯಗಳನ್ನು ತೆಗೆದುಹಾಕಲಾಗಿದೆ ಎಂದು ತಿಳಿಸಿತ್ತು.

### 1.60 ಲಕ್ಷ ಖಾತೆಗಳನ್ನು ತೆಗೆದುಹಾಕಿದ್ದ ಮೆಟಾ

ಮಕ್ಕಳ ಶೋಷಣೆಗೆ ಸಂಬಂಧಿಸಿದ ಉಲ್ಲಂಘನೆಗಳ ವಿರುದ್ಧ ಕ್ರಮ ಕೈಗೊಂಡಿರುವುದಾಗಿ ಮೆಟಾ ಹೇಳಿದೆ. ಕಂಪನಿಯ ಪ್ರಕಾರ, ಭಾರತದಲ್ಲಿ ಕಳೆದ ಆರು ತಿಂಗಳಲ್ಲಿ ಮಕ್ಕಳ ಶೋಷಣೆಗೆ ಸಂಬಂಧಿಸಿದ ಉಲ್ಲಂಘನೆಗಳ ಹಿನ್ನೆಲೆಯಲ್ಲಿ ಸುಮಾರು 1.60 ಲಕ್ಷ ಖಾತೆಗಳನ್ನು ತೆಗೆದುಹಾಕಲಾಗಿದೆ. ಸಂಬಂಧಿತ ಜಾಹೀರಾತುಗಳನ್ನು ತೆಗೆದುಹಾಕುವುದು, ಖಾತೆಗಳನ್ನು ಸ್ಥಗಿತಗೊಳಿಸುವುದು ಹಾಗೂ ಉಲ್ಲಂಘನೆಗೆ ಸಂಬಂಧಿಸಿದ ಯುಆರ್‌ಎಲ್‌ಗಳನ್ನು ಬ್ಲಾಕ್ ಮಾಡಿರುವುದಾಗಿಯೂ ಕಂಪನಿ ತಿಳಿಸಿದೆ.